RNI.KAR/KAN/2009/31934 ಬೆಂಗಳೂರು ಸಂಪುಟ: 16 ಸಂಚಿಕೆ: 72 ಪುಟ: 06 ಸೋಮವಾರ 10-02-2025

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB)

Executive Editor: L P Babu

Honourary Editor: Venkatesh



ರಶ್ಮಿಕಾ ಮಂದಣ್ಣ ಲುಕ್‌ಗೆ ಫ್ಯಾನ್ಸ್ ಫಿದಾ

ಕಮಾಲ್ ಮಾಡಿದ 'ಸನಮ್ ತೇರಿ ಕಸಮ್' ಚಿತ್ರ

ಹೆಚ್ಚಿದ 'ಟಾಕ್ಸಿಕ್' ಬಜೆಟ್ ಪುಟ 6

## ವೈಮಾನಿಕ ಕುಂಭಮೇಳ; ಏರ್‌ಶೋನಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಬಣ್ಣನೆ

# ಲೋಹದಕ್ಕಿಗಳ ಕಲರವ

**ಬೆಂಗಳೂರು:** ಉತ್ತರ ಪ್ರದೇಶದ ಪ್ರಯಾಗ್ ರಾಜ್‌ನಲ್ಲಿ ಅಧ್ಯಾತ್ಮದ ಮಹಾಕುಂಭ ಮೇಳ ನಡೆಯುತ್ತಿದ್ದರೆ, ಇತ್ತ ಬೆಂಗಳೂರಿನಲ್ಲಿ ತಂತ್ರಜ್ಞಾನದ ಯುದ್ಧೋಪಕರಣಗಳ ವಿಮಾನ ಹಾರಾಟ ನಡೆಯುತ್ತಿದೆ. ವೈಮಾನಿಕ ಮಹಾ ಕುಂಭಮೇಳ ನಡೆಯುತ್ತಿದೆ ಎಂದು ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಬಣ್ಣಿಸಿದರು.

ಬೆಂಗಳೂರಿನ ಯಲಹಂಕ ವಾಯುನೆಲೆಯಲ್ಲಿ ಏರ್ ಶೋ 2025 ಉದ್ಘಾಟಿಸಿ ಮಾತನಾಡಿದ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಬೆಂಗಳೂರಿನ ವಾಯುನೆಲೆಯಲ್ಲಿ ಏರ್ ಶೋ, ಒಂದು ಕಡೆ ಪರಂಪರೆ ಸಂಸ್ಕೃತಿಯ ಮಹಾಕುಂಭ ಆಗುತ್ತಿದೆ. ಇನ್ನೊಂದೆಡೆ ತಂತ್ರಜ್ಞಾನದ ಯುದ್ಧೋಪಕರಣಗಳ ವಿಮಾನ ಹಾರಾಟ. ಹೊಸ ಸವಾಲಿಗೆ ಉತ್ತರ ಹುಡುಕುವ ಕೆಲಸ ಆಗಬೇಕಿದೆ. ಶಾಂತಿ ಶಕ್ತಿ ನಮ್ಮ ಮಂತ್ರಬಲ ಆಗಬೇಕಿದೆ ಬಲಾಢ್ಯರಾಗಿ ವಿಶ್ವದಲ್ಲಿ ನಮ್ಮ ಸ್ಥಾನ ಭದ್ರಪಡಿಸಿಕೊಳ್ಳಬೇಕಿದೆ. ಪ್ರಧಾನಿ ಮೋದಿ ಮಾರ್ಗದರ್ಶನದಲ್ಲಿ ಕಾರ್ಯ ನಿರ್ವಹಿಸುತ್ತಿದ್ದೇವೆ. 10 ವರ್ಷಗಳಿಂದ ವೈಮಾನಿಕ ಕ್ಷೇತ್ರದಲ್ಲಿ ಸಾಕಷ್ಟು ಸಾಧನೆ ಮಾಡಲಾಗಿದೆ. ಬಜೆಟ್ ನಲ್ಲಿ 1080 ಲಕ್ಷ ಕೋಟಿ ಅನುದಾನವನ್ನ ಮೀಸಲಿಡಲಾಗಿದೆ ಎಂದರು.

ಏರೋ ಸ್ಪೇಸ್ ಮೂಲಕವೂ ಬೆಂಗಳೂರು ಹೆಸರುವಾಸಿಯಗುತ್ತಿದೆ. ಅಂತರಂಗದ ಆಧ್ಯಾತ್ಮ ಶಕ್ತಿ ಪ್ರದರ್ಶನ ಆ ಕುಂಭಮೇಳದಲ್ಲಿ ನಡೆಯುತ್ತಿದ್ದರೆ, ಇದು ವಾಯುನೆಲೆಯಲ್ಲಿ ನಮ್ಮ ಬಹಿರಂಗ ಶಕ್ತಿ ಪ್ರದರ್ಶನ ಎಂದು ನುಡಿದರು. ದಿ ರನ್‌ವೇ ಟು ಎ ಬಿಲಿಯನ್ ಆಪರ್ಚ್ಯುನಿಟೀಸ್ ಎಂಬ ಧ್ಯೇಯ ವಾಕ್ಯದೊಂದಿಗೆ ಐದು ದಿನಗಳ ಜಾಗತಿಕ ಮಟ್ಟದ ರೊಬೊಟಿಕ್ ಪ್ರದರ್ಶನ ಹೊಸ ಮೆರಗು ನೀಡಿದೆ.ವೈಮಾನಿಕ, ತಂತ್ರಜ್ಞಾನ,ರೋಬೋಟಿಕ್, ರೇಡಾರ್ ಸೇರಿ ಅತ್ಯಾಧುನಿಕ ಸಾಧನಗಳನ್ನು ದೇಶ –ವಿದೇಶಗಳ ಕಂಪನಿಗಳು ಪರಿಚಯಿಸಿವೆ.ಭಾರತದ ವೈಮಾನಿಕ ಪರಾಕ್ರಮ ಮತ್ತು ಸ್ಥಳೀಯ ಅತ್ಯಾಧುನಿಕ ನಾವೀನ್ಯತೆಗಳನ್ನು ಜಾಗತಿಕವಾಗಿ ಪ್ರದರ್ಶಿಸುತ್ತದೆ.



ಆತ್ಮನಿರ್ಭರ ಭಾರತ್ ಮತ್ತು ಮೇಕ್ ಇನ್ ಇಂಡಿಯಾ, ಮೇಕ್ ಫಾರ್ ದಿ ವರ್ಲ್ಡ್ ದೃಷ್ಟಿಕೋನಕ್ಕೆ ಅನುಗುಣವಾಗಿ, ದೇಶೀಕರಣ ಪ್ರಕ್ರಿಯೆ ತ್ವರಿತಗೊಳಿಸಲು ಅಂತರರಾಷ್ಟ್ರೀಯ ಸಹಯೋಗಗಳನ್ನು ರೂಪಿಸಲು ಏರೋ ಇಂಡಿಯಾ ಒಂದು ವೇದಿಕೆಯಾಗಿದೆ.

ಮುಂದಿನ 2047ರ ವೇಳೆಗೆ ಭಾರತ ದೇಶವನ್ನು ವಿಕಸಿತ ಭಾರತವನ್ನಾಗಿ ಮಾಡುವ ಕೇಂದ್ರ ಸರ್ಕಾರದ ಸಂಕಲ್ಪಕ್ಕೆ ಒತ್ತು ನೀಡಲಾಗುತ್ತಿದೆ .ಸುಮಾರು 70 ಕ್ಕೂ ಹೆಚ್ಚು ದೇಶಗಳು ಪ್ರತಿನಿಧಿಗಳು ಇದರಲ್ಲಿ ಭಾಗಿಯಾಗಿದ್ದು,ಹಲವು ರಾಷ್ಟ್ರಗಳ ಸೇನಾ ಮುಖ್ಯಸ್ಥರು ಸಾಕ್ಷಿಯಾಗಿದ್ದಾರೆ.

**ಲೋಹದಕ್ಕಿಗಳ ಅಬ್ಬರ:** ಐದನೇ ಪೀಳಿಗೆಯ ಸಮರ ವಿಮಾನಗಳ ಅರ್ಭಟ ನೋಡುಗರ ಮೈನವಿರೆಳಿಸಿತು . ಅಮೆರಿಕದ ಎಫ್–35 ,ರಷ್ಯಾದ ಸೂಪರ್ ಸಾನಿಕ್ ಸುಕೊಯ್, ಸೇರಿದಂತೆ ದೇಶೀಯ ತೇಜಸ್ ಚಮತ್ಕಾರ ಆಕರ್ಷಿಸಿದೆ.

ಭಾರತೀಯ ವಾಯು ಪಡೆಗೆ ಮತ್ತುಷ್ಟು ಬಲ ನೀಡಲು ಮತ್ತಷ್ಟು ಸಮರ ವಿಮಾನ ಖರೀದಿಗೆ ಕೇಂದ್ರ ಸರ್ಕಾರ ಎದುರು ನೋಡುತ್ತಿದ್ದು ಅಮೆರಿಕ ಭಾರಿ ಲಾಬಿ ಮಾಡುತ್ತಿದೆ ಪುಟ 2

## ಏರೋಸ್ಪೇಸ್ ಉದ್ಯಮಕ್ಕೆ ಪ್ರೋತ್ಸಾಹ ನೀಡಿ, ಪ್ರತಿಭಾ ಪಲಾಯನ ತಡೆಯಬೇಕು



**ಬೆಂಗಳೂರು:** "ಬೆಂಗಳೂರು, ಏರೋಸ್ಪೇಸ್ ಉದ್ಯಮದಲ್ಲಿ ಅತ್ಯುತ್ತಮ ಪ್ರತಿಭೆಗಳನ್ನು ಹೊಂದಿದೆ. ಇದು ವಿಮಾನ ಮತ್ತು ಹೆಲಿಕಾಪ್ಟರ್ ಉತ್ಪಾದನಾ ಸೌಲಭ್ಯಗಳನ್ನು ಸ್ಥಾಪಿಸಲು ಸೂಕ್ತ ಸ್ಥಳವಾಗಿದೆ. ತಯಾರಕರಿಗೆ ಪ್ರೋತ್ಸಾಹ ನೀಡುವ ಮೂಲಕ, ಪ್ರತಿಭಾ ಪಲಾಯನವನ್ನು ತಡೆದು ನಮ್ಮ ದೇಶದ ಪ್ರತಿಭೆಗಳನ್ನು ಭಾರತದೊಳಗೆ ಉಳಿಸಿಕೊಳ್ಳಬಹುದು" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಅಭಿಪ್ರಾಯಪಟ್ಟರು.

ಬೆಂಗಳೂರು ಏರ್ ಶೋ 2025 ರ ಉದ್ಘಾಟನಾಸಮಾರಂಭದಲ್ಲಿ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಸೋಮವಾರ ಮಾತನಾಡಿದರು."ರಕ್ಷಣಾ ಸಚಿವರು ಕರ್ನಾಟಕದಲ್ಲಿ ಏರೋ ಸ್ಪೇಸ್ ಉದ್ಯಮವನ್ನು ಸ್ಥಾಪಿಸಲು ಹಾಗೂ ವಿಮಾನ ಮತ್ತು ಹೆಲಿಕಾಪ್ಟರ್‌ಗಳ ತಯಾರಕರನ್ನು ಹೆಚ್ಚು, ಹೆಚ್ಚು ಬೆಂಗಳೂರಿನ ಕಡೆಗೆ ಗಮನ ಹರಿಸುವಂತೆ ಪ್ರೋತ್ಸಾಹ ನೀಡಬೇಕಾಗಿ ಮನವಿ ಮಾಡುತ್ತೇನೆ" ಎಂದು ಹೇಳಿದರು.

"ಕರ್ನಾಟಕ ಭಾರತದ ತಾಂತ್ರಿಕ ಮತ್ತು ಕೈಗಾರಿಕಾ ಪ್ರಗತಿಯಲ್ಲಿ ಮುಂಚೂಣಿಯಲ್ಲಿರುವ ರಾಜ್ಯ. ವಿಶ್ವ ದರ್ಜೆಯ ಸಂಶೋಧನಾ ಸಂಸ್ಥೆಗಳು, ಅತ್ಯಾಧುನಿಕ ಏರೋಸ್ಪೇಸ್ ಕಂಪನಿಗಳನ್ನು ಪುಟ 2



ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಇಲಾಖೆಯ ಬಜೆಟ್ ಪೂರ್ವ ಸಭೆ ಆರಂಭಗೊಂಡಿದೆ.

## ಖರ್ಗೆ ನಮ್ಮ ಕುಟುಂಬದ ಹಿರಿಯಣ್ಣ

**ಬೆಂಗಳೂರು:** ರಾಜ್ಯದಲ್ಲಿ ಸಿಎಂ ಬದಲಾವಣೆ ವಿಚಾರ ಭಾರೀ ಸುದ್ದಿಯಾಗಿ ಡಿನ್ನರ್ ಪಾಲಿಟಿಕ್ಸ್ ನಡೆದಿತ್ತು. ಇದಾದ ಬಳಿಕ ಗೃಹ ಸಚಿವ ಜಿ. ಪರಮೇಶ್ವರ್ ಅವರು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಬೆಂಗಳೂರಿನಲ್ಲಿ ಭೇಟಿ ಮಾಡಿದ್ದು ಈ ಬಗ್ಗೆ ಸ್ಪಷ್ಟನೆ ನೀಡಿರುವ ಡಾ.ಜಿ.ಪರಮೇಶ್ವರ್, ನಾನು ಯಾವುದೇ ರಾಜಕೀಯ ವಿಚಾರ ಚರ್ಚೆ ಮಾಡಿಲ್ಲ ಮಲ್ಲಿಕಾರ್ಜುನ ಖರ್ಗೆ ನಮ್ಮ ಕುಟುಂಬದ ಹಿರಿಯಣ್ಣ. ರಾಜಕೀಯ ಹೊರತಪಡಿಸಿ ಆಗಾಗ ಖರ್ಗೆ ಅವರನ್ನ ಭೇಟಿ ಮಾಡುತ್ತೇನೆ. ನಿನ್ನೆ ಭೇಟಿ ವೇಳೆ ಯಾವುದೇ ರಾಜಕೀಯ ಮಾತನಾಡಿಲ್ಲ ಕುಟುಂಬದ ಆನೇಕ ವಿಚಾರಗಳನ್ನ ಮಾತನಾಡಿದ್ದೇವೆ ಎಂದು ತಿಳಿಸಿದ್ದಾರೆ.



## ಭಿನ್ನರಿಗೆ ಹೈ ಬುಲಾವ್

**ಬೆಂಗಳೂರು/ ದೆಹಲಿ:** ಭಾರತೀಯ ಜನತಾ ಪಕ್ಷದಲ್ಲಿನ ಆಂತರಿಕ ಕಲಹ ದಿನೇ ದಿನೇ ಉಲ್ಬಣಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ತಾರ್ಕಿಕ ಅಂತ್ಯ ನೀಡಲು ಹೈಕಮಾಂಡ್ ನಿರ್ಧರಿಸಿದೆ.

ಬಸವನಗೌಡ ಪಾಟೀಲ್ ಯಾತ್ನಾಳ್ ಹಾಗೂ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರ ನಡುವಿನ ಕುರ್ಚಿ ಕಲಹ ಪಕ್ಷಕ್ಕೆ ಮುಜುಗರ ಉಂಟುಮಾಡುತ್ತಿರುವುದನ್ನು ಮನಗಂಡ ಹೈಕಮಾಂಡ್ ಎರಡೂ ಗುಂಪಿನ ನಾಯಕರನ್ನು ಕರೆದು ಚರ್ಚೆ ನಡೆಸಲು ಮುಂದಾಗಿದೆ.

ಇದರ ಮಧ್ಯಸ್ಥಿಕೆಯನ್ನು ಕೇಂದ್ರ ಸಚಿವ ವಿ.ಸೋಮಣ್ಣ ಅವರಿಗೆ ನೀಡಲಾಗಿದ್ದು ಅವರ ಮೂಲಕ ಎರಡೂ ಗುಂಪುಗಳ ಮುಖಂಡರನ್ನು ಕರೆದು ಖಡಕ್ ಸೂಚನೆ ನೀಡಲು ಹೈಕಮಾಂಡ್ ನಿರ್ಧರಿಸಿದೆ.

ಈ ಹಿನ್ನೆಲೆಯಲ್ಲಿ ವಿಜಯೇಂದ್ರ ಅವರು ದೆಹಲಿಗೆ ದೌಡಾಯಿಸಿದ್ದು, ಅಲ್ಲಿ ಹೈಕಮಾಂಡ್ ನಾಯಕರನ್ನು ಭೇಟಿ ಮಾಡಲಿದ್ದಾರೆ. ಈಗಾಗಲೇ ದೆಹಲಿಯಲ್ಲಿ ಬೀಡುಬಿಟ್ಟಿರುವ ಯತ್ನಾಳ್ ತಂಡವನ್ನು ಕೂಡಾ ಹೈಕಮಾಂಡ್ ಮಾತುಕತೆಗೆ ಕರೆದಿದ್ದು, ಇಂದು ಎರಡೂ ತಂಡಗಳೊಂದಿಗೆ ಮಾತುಕತೆ ನಡೆಸಿ ಗೊಂದಲಕ್ಕೆ ತೆರೆ ಎಳೆಯಲಿದೆ.

ಸೋಮಣ್ಣ ಅವರ ಮೂಲಕ ಎರಡೂ ಗುಂಪುಗಳನ್ನು ಒಂದೆಡೆ ಸೇರಿಸುತ್ತಿರುವ ಅಮಿತ್ ಶಾ ಅವರು ಇಂದು ಮಾತುಕತೆ ನಡೆಸಿ ಹಾದಿ ಬೀದಿಗಳಲ್ಲಿ ಹೇಳಿಕೆ ನೀಡಿ, ಪಕ್ಷದ ಮಾನ ಹರಾಜು ಹಾಕದಂತೆ ಎಚ್ಚರಿಕೆ ನೀಡಲಿದ್ದಾರೆ.

ಕರ್ನಾಟಕದ ರಾಜ್ಯಾಧ್ಯಕ್ಷರ ಆಯ್ಕೆ ಸಂಬಂಧ ಹೈಕಮಾಂಡ್ ನಿರ್ಧಾರ ಕೈಗೊಳ್ಳಲಿದೆ. ಪುಟ 2

## ಕೇಂದ್ರದ ವಿರುದ್ಧ ಖರ್ಗೆ ವಾಗ್ದಾಳಿ

**ಬೆಂಗಳೂರು:** ಮೆಟ್ರೋ ಪ್ರಯಾಣದ ಟಿಕೆಟ್ ದರ ಏರಿಕೆ ಮಾಡುವ ಮೂಲಕ ಪ್ರಯಾಣಿಕರಿಗೆ ಬಿಎಂಆರ್ ಸಿಎಲ್ ಶಾಕ್ ಕೊಟ್ಟಿದ್ದು ಈ ಸಂಬಂಧ ಕೇಂದ್ರ ಸರ್ಕಾರದ ವಿರುದ್ಧ ಗ್ರಾಮೀಣಾಭಿವೃದ್ಧಿ ಇಲಾಖೆ ಸಚಿವ ಪ್ರಿಯಾಂಕ್ ಖರ್ಗೆ ವಾಗ್ದಾಳಿ ನಡೆಸಿದ್ದಾರೆ. ಈ ಕುರಿತು ಮಾತನಾಡಿರುವ ಸಚಿವ ಪ್ರಿಯಾಂಕ್ ಖರ್ಗೆ, ಮೆಟ್ರೊ ದರ ಏರಿಕೆ ರಾಜ್ಯ ಸರ್ಕಾರ ಹೊಣೆಯಲ್ಲ. ದರ ನಿಗಿದಿ ಕಮಿಟಿ ಮಾಡಿದ್ದು ಪುಟ 2

## 7 ಉಗ್ರರ ಬಂಧನ

**ಇಂಫಾಲ್:** ಮಣಿಪುರದ ಇಂಫಾಲ್ ಪೂರ್ವ ಜಿಲ್ಲೆಯಲ್ಲಿ ಭದ್ರತಾ ಪಡೆಗಳು ಕಾನೂನುಬಾಹಿರ ಸಂಘಟನೆಯಾದ ನ್ಯಾಷನಲ್ ರೆವಲ್ಯೂಷನರಿ ಫ್ರಂಟ್ ಆಫ್ ಮಣಿಪುರದ (ಎನ್‌ಆರ್‌ಎಫ್‌ಎಂ) ಏಳು ಉಗ್ರರನ್ನು ಬಂಧಿಸಿದ್ದಾರೆ. ಉಗ್ರರು ಅಡಗಿದ್ದ ಅಡಗುತಾಣವನ್ನು ಭೇದಿಸಿ ಏಳು ಉಗ್ರರನ್ನು ಬಂಧಿಸಲಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಖಚಿತ ಸುಳಿವಿನ ಮೇರೆಗೆ ಪೊಲೀಸರು ತೆಲೌ ಮಖಾ ಲೈಕೈಯಲ್ಲಿ ದಾಳಿ ನಡೆಸಿ ಪುಟ 2

## ಬಾಲಕಿ ಮೇಲೆ ಅತ್ಯಾಚಾರ; ಹತ್ಯೆ

**ಕೋಲ್ಕತ್ತಾ:** ಎಂಟನೇ ತರಗತಿಯ ವಿದ್ಯಾರ್ಥಿನಿಯೊಬ್ಬಳು ತನ್ನ ತಾಯಿ ನಿಂದಿಸಿದ್ದರಿಂದ ಮನೆಯಿಂದ ಹೊರಬಂದ ನಂತರ ಅತ್ಯಾಚಾರ ಮತ್ತು ಕೊಲೆಯಾದ ಘಟನೆ ಕೋಲ್ಕತ್ತಾದಲ್ಲಿ ನಡೆದಿದೆ. ನ್ಯೂ ಟೌನ್‌ನ ಪೊದೆಯಲ್ಲಿ ಆಕೆಯ ಶವ ಪತ್ತೆಯಾಗಿದೆ. ಬಾಲಕಿಯೊಂದಿಗೆ ಕೊನೆಯದಾಗಿ ಗುರುತಿಸಲ್ಪಟ್ಟ ಪುಟ 2

## ತಂತ್ರಜ್ಞಾನವನ್ನು ಬುದ್ಧಿವಂತಿಕೆಯಿಂದ ಬಳಸಿ

**ದೆಹಲಿ:** ತಂತ್ರಜ್ಞಾನವು ನಿಮ್ಮನ್ನು ಕೆಡಗುವ ಅಪಾಯಕಾರಿ ಬಿರುಗಾಳಿಯಲ್ಲ. ನಾವೀನ್ಯತೆಗಳು ನಿಮ್ಮ ಒಳಿತಿಗಾಗಿಯೇ. ತಂತ್ರಜ್ಞಾನವನ್ನು ಬುದ್ಧಿವಂತಿಕೆಯಿಂದ ಬಳಸಿ ಮತ್ತು ನಿಮ್ಮ ಸಮಯವನ್ನು ವ್ಯರ್ಥ ಮಾಡುವ ಚಟುವಟಿಕೆಗಳನ್ನು ತಪ್ಪಿಸಿ ಎಂದು ವಿದ್ಯಾರ್ಥಿಗಳಿಗೆ ಪ್ರಧಾನಿ ನರೇಂದ್ರ ಮೋದಿ ಸಲಹೆ ನೀಡಿದ್ದಾರೆ.

ಸೋಮವಾರ ನಡೆದ ಪರೀಕ್ಷಾ ಪೇ ಚರ್ಚಾದಲ್ಲಿ ಮಾತನಾಡಿದ ಮೋದಿ ಅವರು, ಪ್ರತಿಯೊಂದು ಮಗುವೂ ವಿಶೇಷ, ಅವರನ್ನು ಬೇರೆಯವರೊಂದಿಗೆ ಹೋಲಿಸಬೇಡಿ ಎಂದು ಅವರು ಹೇಳಿದರು. ಮಕ್ಕಳ ಮೇಲೆ ಒತ್ತಡ ಹೇರಬೇಡಿ. ಮಗು ಸ್ವತಃ ಉತ್ತಮವಾಗಲು ಮತ್ತು ಮೊದಲಿಗಿಂತ ಉತ್ತಮವಾಗಲು



ಪ್ರಯತ್ನಿಸುತ್ತದೆ. ನಿಮ್ಮ ಮಾನಸಿಕ ಚಿಂತೆಗಳನ್ನು ಜನರೊಂದಿಗೆ ಹಂಚಿಕೊಳ್ಳಲು ಕಲಿಯಿರಿ. ಇದು ಮನಸ್ಸನ್ನು ಶಾಂತವಾಗಿರಿಸುತ್ತದೆ, ಕುಟುಂಬದ ಯಾವುದೇ ಸದಸ್ಯರೊಂದಿಗೆ ಮಾತನಾಡಿ ಎಂದು ಸಲಹೆ ನೀಡಿದರು. ವಿದ್ಯಾರ್ಥಿಗಳು ಒತ್ತಡಕ್ಕೆ ಮಣಿಯಬಾರದು ಎಂದು ಸಲಹೆ ನೀಡಿದರು. ಒಬ್ಬ ಬ್ಯಾಟ್ಸ್‌ಮನ್ ಕ್ರೀಡಾಂಗಣದಲ್ಲಿ ಘೋಷಣೆಗಳು ಮತ್ತು ಗದ್ದಲವನ್ನು ನಿರ್ಲಕ್ಷಿಸಿ ಚೆಂಡಿನ ಮೇಲೆ ಕೇಂದ್ರೀಕರಿಸುವಂತೆಯೇ, ವಿದ್ಯಾರ್ಥಿಗಳು ಒತ್ತಡದ ಬಗ್ಗೆ ಯೋಚಿಸುವ ಬದಲು ಅಧ್ಯಯನದತ್ತ ಗಮನ ಹರಿಸಬೇಕು ಎಂದು ಅವರು ಹೇಳಿದರು.

ಶಾಲೆಯಲ್ಲಿ ಅಥವಾ ಜೀವನದಲ್ಲಿ ಯಶಸ್ಸು ಮತ್ತು ವೈಫಲ್ಯದ ನಡುವಿನ ಪುಟ 2

## ಸದನದಲ್ಲಿ ರಚನಾತ್ಮಕ ವಿಪಕ್ಷವಾಗಿ ವರ್ತಿಸಬೇಕು

**ನವದೆಹಲಿ:** ಕಾಂಗ್ರೆಸ್ ದೆಹಲಿ ಚುನಾವಣೆಯಿಂದ ಆದರೂ ಪಾಠ ಕಲಿಯಬೇಕು. ಸದನದಲ್ಲಿ ಅನಗತ್ಯ ಗದ್ದಲ ಎಬ್ಬಿಸಿ ಸ್ಥಗಿತಗೊಳಿಸುವುದನ್ನು ನಿಲ್ಲಿಸಲಿ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ. ಸಂಸತ್ ಆವರಣದಲ್ಲಿ ಸೋಮವಾರ ಮಾಧ್ಯಮದ ವರೊಂದಿಗೆ ಮಾತನಾಡಿ, ಸದನದಲ್ಲಿ ಒಂದು ಪಕ್ಷ ವಿಪಕ್ಷವಾಗಿ ವರ್ತಿಸಲಿ ಎಂದು ಸಲಹೆ ನೀಡಿದರು. ದೆಹಲಿ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಒಂದು ರಾಷ್ಟ್ರೀಯ ಪಕ್ಷವಾಗಿ ಶೂನ್ಯ ಸಂಪಾದನೆ ಸಾಧಿಸಿದೆ. ಇದು ಅವರ ಹಿಂಸಾಚಾರ ಪ್ರಚೋದನೆಗೆ ಸಿಕ್ಕ ಪ್ರತ್ಯುತ್ತರ ಎಂದು ಜೋಶಿ ಪ್ರತಿಕ್ರಿಯಿಸಿದರು. ಪುಟ 2



## ಕಲಬೆರಕೆ ಪ್ರಕರಣ: ನಾಲ್ವರನ್ನು ಬಂಧಿಸಿದ ಸಿಬಿಐ ತನಿಖಾ ತಂಡ

**ತಿರುಪತಿ(ಆಂಧ್ರಪ್ರದೇಶ):** ತಿರುಪತಿಯ ಪ್ರಸಿದ್ಧ ಲಡ್ಡು ಪ್ರಸಾದದ ತಯಾರಿಕೆಯಲ್ಲಿ ಕಲಬೆರಕೆ ತುಪ್ಪದ ಬಳಕೆ ಆರೋಪ ಪ್ರಕರಣ ಸಂಬಂಧ ಸಿಬಿಐ ತನಿಖೆಯಲ್ಲಿ ಪ್ರಮುಖ ಬೆಳವಣಿಗೆಗಳಾಗಿದೆ. ಸುಪ್ರೀಂಕೋರ್ಟ್ ಆದೇಶದ ಮೇರೆಗೆ ರಚನೆಯಾದ ಸಿಬಿಐ ವಿಶೇಷ ತನಿಖಾ ತಂಡವು ಲಡ್ಡು ತಯಾರಿಸಲು ತುಪ್ಪ ಪೂರೈಸಿದ ಕಂಪನಿಗಳ ನಾಲ್ವರನ್ನು ಬಂಧಿಸಿದೆ.

ಭೋಲೆ ಬಾಬಾ ಆರ್ಗ್ಯಾನಿಕ್ ಡೈರಿ ಪ್ರೈವೇಟ್ ಲಿಮಿಟೆಡ್ (ರೂರ್ಕಿ, ಉತ್ತರಾಖಂಡ) ನಿರ್ದೇಶಕರಾದ ವಿಪಿನ್ ಜೈನ್ ಮತ್ತು ಪೊಮಿಲ್ ಜೈನ್, ಶ್ರೀವೈಷ್ಣವಿ ಡೈರಿ ಪ್ರೈವೇಟ್ ಲಿಮಿಟೆಡ್ (ಪೆನುಬಾಕ, ಶ್ರೀಕಾಳಹಸ್ತಿ) ಸಿಇಒ ಅಪೂರ್ವ ಚವ್ಡಾ ಹಾಗೂ ಮತ್ತು ಡಾ. ಎಆರ್ ಡೈರಿ (ದಿಂಡಿಗಲ್, ತಮಿಳುನಾಡು) ಎಂಡಿ ರಾಜು ರಾಜಶೇಖರನ್ ಎಂಬವರನ್ನು ಬಂಧಿಸಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.



"ನಾಲ್ಕು ಜನರನ್ನು ಬಂಧಿಸಲಾಗಿದೆ. ಅವರಲ್ಲಿ ಬಿಪಿನ್ ಜೈನ್ ಮತ್ತು ಪೋಮಿ ಜೈನ್ ಎಂಬವರು ಭೋಲೆ ಬಾಬಾ ಡೈರಿಯವರು. ವೈಷ್ಣವಿ ಡೈರಿಯ ಅಪೂರ್ವ ಚವ್ಡಾ ಮತ್ತು ಎಆರ್ ಡೈರಿಯ (ರಾಜು) ರಾಜಶೇಖರನ್" ಎಂದು ಪುಟ 2

### ಕುಂಭಮೇಳಕ್ಕೆ ಚಾಲನೆ;

## ಸಂಗಮದಲ್ಲಿ ಮಿಂದೆದ್ದ ಭಕ್ತಸಮೂಹ

**ತಿ.ನರಸೀಪುರ:** ಕಾವೇರಿ, ಕಪಿಲ ಮತ್ತು ಸ್ಫಟಿಕ ನದಿಗಳ ಸಂಗಮ ಸ್ಥಳವಾದ ತಿರುಮಕುಡಲು ನರಸೀಪುರದಲ್ಲಿ ಇಂದಿನಿಂದ ಮೂರು ದಿನಗಳ ಕಾಲ ನಡೆಯಲಿರುವ ದಕ್ಷಿಣ ಭಾರತದ ಕುಂಭಮೇಳಕ್ಕೆ ಇಂದು ವಿದ್ಯುಕ್ತವಾಗಿ ಚಾಲನೆ ನೀಡಲಾಯಿತು.

ಶ್ರೀ ಅಗಸ್ತ್ಯೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಬೆಳಗ್ಗೆ 6 ಗಂಟೆಗೆ ತರಹೇವಾರಿ ಪುಷ್ಪಗಳಿಂದ ಅಲಂಕರಿಸಿದ ಅಗಸ್ತ್ಯಶ್ವರ ಸ್ವಾಮಿಗೆ ಅನುಜ್ಞೆ, ಪುಣ್ಯಾಹ, ಕಳಶ ಸ್ಥಾಪನೆ, ಗಣಹೋಮ, ಅಭಿಷೇಕ, ದೇವತಾರಾಧನೆ ಹಾಗು ರಾಷ್ಟ್ರಾಶೀರ್ವಾದ ಮಾಡುವ ಮೂಲಕ 13 ನೇ ಕುಂಭ ಮೇಳಕ್ಕೆ ಚಾಲನೆ ದೊರೆಯಿತು. ನೆರದಿದ್ದ ಹಲವು ಗಣ್ಯರು, ಸಾರ್ವಜನಿಕರ ಸಮುಖದಲ್ಲಿ ಮಹಾಮಂಗಳಾರತಿ ನೆರವೇರಿಸಿ ವೇದ ಘೋಷ ಮಂತ್ರಗಳ ಪಠಿಸಲಾಯಿತು.



ಪವಿತ್ರ 13ನೇ ಕುಂಭಮೇಳದ ಆರಂಭಕ್ಕೆ ಮುನ್ನುಡಿ ಬರೆಯಲಾಯಿತು.ರಾಜ್ಯದ ವಿವಿಧ ಮೂಲೆಗಳಿಂದ ಬಂದಿದ್ದ ಭಕ್ತರು, ಹೊರ ರಾಜ್ಯದಿಂದ ಆಗಮಿಸಿದ ಭಕ್ತರ ದಂಡು ನಡುಹೊಳೆ ಬಸಪ್ಪ ದರ್ಶನ ಪಡೆದು ಸ್ನಾನ ಘಟ್ಟಗಳಲ್ಲಿ ಪುಣ್ಯಸ್ನಾನ ಮಾಡಿ ಅಗಸ್ತ್ಯಶ್ವರ, ಗುಂಜಾನರಸಿಂಹ ಸ್ವಾಮಿ, ಬಲ್ಲೇಶ್ವರ ದೇವಾಲಯಗಳಿಗೆ ತೆರಳಿ ಪೂಜೆ ಸಲ್ಲಿಸಿದರು.

ಹಲವು ಭಕ್ತರು ಮಾತನಾಡಿ, ಪುಟ 2

ಮೊದಲ ಪುಟದಿಂದ

## ಮಿಂದೆದ್ದ ಭಕ್ತಸಮೂಹ

ಕಾಶಿಯನ್ನು ಬಿಟ್ಟರೆ ಇದು ಅತ್ಯಂತ ಪುಣ್ಯ ಸ್ಥಳ. ಇಲ್ಲಿ ನಡೆಯುವ ಕುಂಭಮೇಳದಲ್ಲಿ ಪುಣ್ಯಸ್ನಾನ ಮಾಡಿದರೆ ಎಲ್ಲ ಪಾಪಗಳು ನಶಿಸಿ ಪುಣ್ಯ ಸ್ನಾನ ಪ್ರಾಪ್ತಿಯಾಗುತ್ತದೆ ಎಂಬ ಪ್ರತೀತಿ ಇದೆ. ಹಾಗಾಗಿ ನಾವು ಬೆಂಗಳೂರು, ಮೈಸೂರು, ತುಮಕೂರು, ಸೇಲಂ ಕಡೆಗಳಿಂದ ಬಂದಿರುವುದಾಗಿ ತಿಳಿಸಿದರು.

ದಕ್ಷಿಣದ ಪ್ರಯಾಗ್ ರಾಜ್ ಎಂದೇ ಖ್ಯಾತಿ ಪಡೆದ ತಿ.ನರಸೀಪುರ ತಿರುಮಕೂಡಲಿನ ತ್ರಿವೇಣಿ ಸಂಗಮದಲ್ಲಿ ಇಂದಿನಿಂದ ಕುಂಭಮೇಳ ಕಾರ್ಯಕ್ರಮ ಆರಂಭವಾಗಿದ್ದು ಮೊದಲ ದಿನವೇ ಸಾವಿರಾರು ಭಕ್ತಾಧಿಗಳು ಸಂಗಮದಲ್ಲಿ ಪುಣ್ಯ ಸ್ನಾನ ಮಾಡಿದರು. ಮಹೋದಯದ ಕಾಲದ ಮಹಾ ಮಾಘದ ಪುಣ್ಯಸ್ನಾನಕ್ಕೆ ಬುಧವಾರ ಪ್ರಶಸ್ತ ಕಾಲವಾಗಿದ್ದು ಬೆಳಿಗ್ಗೆ 11 ರಿಂದ 11.30 ಮದ್ಯಾಹ್ನ 1.30 ರಿಂದ 2 ಗಂಟೆ ಸಮಯದಲ್ಲಿ ಹೆಚ್ಚಿನ ಸಂಖ್ಯೆಯ ಭಕ್ತಾಧಿಗಳು ಪುಣ್ಯ ಸ್ನಾನ ಮಾಡಲಿದ್ದಾರೆ ಎಂಬ ನಿರೀಕ್ಷೆಯನ್ನು ಜಿಲ್ಲಾಡಳಿತ ಹೊಂದಿದೆ.ತ್ರಿವೇಣಿ ಸಂಗಮಕ್ಕೆ ಎಲ್ಲ ರೀತಿಯ ವಾಹನಗಳನ್ನು ನಿಷೇಧಿಸಲಾಗಿದ್ದು, ಭಕ್ತಾಧಿಗಳು ಪಿಟೀಲು ಚೌಡಯ್ಯ ವೃತ್ತದಿಂದ ಕಾಲ್ನಡಿಗೆಯಿಂದಲೇ ಬಂದು ಕುಂಭಮೇಳ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿದ್ದಾರೆ. ಜಿಲ್ಲಾಡಳಿತ ಬರುವ ಭಕ್ತಾಧಿಗಳಿಗೆ ಸಕಲ ಸಿದ್ದತೆ ಕೈಗೊಂಡಿದ್ದು, ವಯೋವೃದ್ಧರು ಮತ್ತು ವಿಶೇಷ ಚೇತನರಿಗೆ ತ್ರಿವೇಣಿ ಸಂಗಮಕ್ಕೆ ಕರೆದೊಯ್ಯಲು ವಿದ್ಯುತ್ ಚಾಲಿತ ವಾಹನದ ವ್ಯವಸ್ಥೆ ಕಲ್ಪಿಸಲಾಗಿದೆ. ಬುಧವಾರ ಕುಂಭಮೇಳದ ಅಂತಿಮ ದಿನವಾಗಿರುವ ಹಿನ್ನೆಲೆಯಲ್ಲಿ ಟೌನ್ ವ್ಯಾಪ್ತಿಯ ಶಾಲಾ ಕಾಲೇಜುಗಳಿಗೆ ರಜೆ ಘೋಷಣೆ ಮಾಡಿ ಜಿಲ್ಲಾಧಿಕಾರಿ ಆದೇಶ ಹೊರಡಿಸಿದ್ದಾರೆ.ಮೂರು ದಿನಗಳ ಕಾಲ ಪಟ್ಟಣ ವ್ಯಾಪ್ತಿಯಲ್ಲಿ ಮದ್ಯ ಮಾರಾಟ ನಿಷೇಧಿಸಲಾಗಿದೆ. ಕುಂಭಮೇಳ ನಡೆಯುವ ತ್ರಿವೇಣಿ ಸಂಗಮಕ್ಕೆ ವಿವಿಧೆಡೆಯಿಂದ ಭಕ್ತಾಧಿಗಳನ್ನು ಕರೆದೊಯ್ಯಲು ಜಿಲ್ಲಾಡಳಿತದ ವತಿಯಿಂದ ಬಸ್ ವ್ಯವಸ್ಥೆ ಕಲ್ಪಿಸಲಾಗಿದೆ.

## ಖರ್ಗೆ ವಾಗ್ದಾಳಿ

**ಕೇಂದ್ರಸರ್ಕಾರ. ಪ್ರಧಾನಿ ಮೋದಿ ಪರವಾಗಿ ಬಿಜೆಪಿಯವರು ಕ್ಷಮೆ ಕೇಳಲಿ. ಮೆಟ್ರೋ ಸ್ಟೇಷನ್ ಗೆ ಹೋಗಿ ಕ್ಷಮೆ ಕೇಳಲಿ. ನಾವೇ ಬಿಜೆಪಿಯವರಿಗೆ ಗುಲಾಬಿ ಹೂ ಕೊಡುತ್ತೇವೆ. ಮೋದಿ ಪರ ಗುಲಾಬಿ ಕೊಟ್ಟು ಕ್ಷಮೆ ಕೇಳಲ್ವಾ..? ಎಂದು ಕಿಡಿಕಾರಿದರು. ಬಿಎಂಆರ್ ಸಿಎಲ್ ಮೆಟ್ರೋ ಪ್ರಯಾಣದ ಟಿಕೆಟ್ ದರವನ್ನ ಏರಿಕೆ ಮಾಡಿ ಕಳೆದ ಎರಡು ದಿನದ ಹಿಂದೆ ಅಧಿಕೃತ ಆದೇಶ ಹೊರಡಿಸಿತ್ತು.**

## 7 ಉಗ್ರರ ಬಂಧನ

ಉಗ್ರರನ್ನು ಬಂಧಿಸಲಾಗಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.ನಿಯತಕಾಲಿಕೆಯೊಂದಿಗೆ ಎ1 ಅಸಾಲ್ಟ್ ರೈಫಲ್ ಮತ್ತು 15 ಕಾರ್ಟ್ರಿಡ್ಜ್ ಗಳು ಸೇರಿದಂತೆ ಶಸ್ತ್ರಾಸ್ತ್ರಗಳು ಮತ್ತು ಮದ್ದುಗುಂಡುಗಳು, ವ್ಯಾಗಜೀನ್‌ನೊಂದಿಗೆ ಎಕೆ–47 ರೈಫಲ್ ಮತ್ತು 13 ಕಾರ್ಟ್ರಿಡ್ಜ್ ಗಳು, ಎರಡು ಐಎನ್‌ಎಸ್‌ಎಎಸ್ ರೈಫಲ್‌ಗಳು ವ್ಯಾಗಜೀನ್‌ಗಳು ಮತ್ತು 12 ಕಾರ್ಟ್ರಿಡ್ಜ್‌ಗಳು, ಎರಡು ಸ್ವಯಂ–ಲೋಡಿಂಗ್ ರೈಫಲ್‌ಗಳು, ವ್ಯಾಗಜೀನ್‌ಗಳು ಮತ್ತು 30 ಕಾರ್ಟ್ರಿಡ್ಜ್‌ಗಳು, ಐದು ಬುಲೆಟ್ ಪ್ರೂಫ್ ಜಾಕ್‌ಗಳು ಮತ್ತು ಇತರ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ.

## ಅತ್ಯಾಚಾರ; ಹತ್ಯೆ

ಇ–ರಿಕ್ಷಾ ಚಾಲಕನನ್ನು ಬಂಧಿಸಲಾಗಿದೆ. ಹುಡುಗಿಯು 8 ನೇ ತರಗತಿಯ ವಿದ್ಯಾರ್ಥಿನಿ. ಓದುತ್ತಿಲ್ಲ ಎಂದು ತಾಯಿ ಗದರಿದ್ದರು ಹಾಗಾಗಿ ಆಕೆ ಮನೆ ತೊರೆದಿದ್ದಳು ಮರುದಿನ ಬೆಳಗಿನ ಜಾವದವರೆಗೂ ಬಾಲಕಿ ಪುಟ 2 ಹಿಂತಿರುಗದ ಹಿನ್ನೆಲೆಯಲ್ಲಿ ಹೊಸನಗರ ಪೊಲೀಸ್ ಠಾಣೆಯಲ್ಲಿ ಮನೆಯವರು ಕಾಣೆಯಾದ ದೂರು ದಾಖಲಿಸಿದ್ದರು.

ನ್ಯೂ ಟೌನ್‌ನ ಲೋಹರ್ ಪುಲ್ ಪ್ರದೇಶದ ನಿವಾಸಿಗಳು ಶವವನ್ನು ಗಮನಿಸಿ ಪೊಲೀಸರಿಗೆ ಮಾಹಿತಿ ನೀಡಿದರು. ಪಶ್ಚಿಮ ಬಂಗಾಳದ ಮೂಲಸೌಕರ್ಯ ಅಭಿವೃದ್ಧಿ ಹಣಕಾಸು ನಿಗಮದ ಒಡೆತನದ ಪ್ಲಾಟ್‌ನಲ್ಲಿ ಅರೆಬೆತ್ತಲೆ ಶವ ಪತ್ತೆಯಾಗಿತ್ತು. ಬಾಲಕಿಯ ಕತ್ತಿನ ಮೇಲೆ ಕತ್ತು ಹಿಸುಕಿದ ಲಕ್ಷಣಗಳು ಮತ್ತು ಆಕೆಯ ದೇಹದ ಮೇಲೆ ಗೀರು ಗುರುತುಗಳನ್ನು ನೋಡಿದಾಗ, ಕತ್ತು ಹಿಸುಕಿ ಸಾಯಿಸುವ ಮೊದಲು ಆಕೆಯ ಮೇಲೆ ಅತ್ಯಾಚಾರ ನಡೆದಿರುವ ಸಾಧ್ಯತೆಯಿದೆ ಎಂದು ಪೊಲೀಸರು ಶಂಕಿಸಿದ್ದಾರೆ. ಸಾವಿಗೆ ಕಾರಣವನ್ನು ಖಚಿತಪಡಿಸಿಕೊಳ್ಳಲು ಸರ್ಕಾರಿ ಆರ್‌ಜಿ ಕಾರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆ ನಡೆಸಲಾಗಿದೆ.

## ಸಿಬಿಐ ತನಿಖಾ ತಂಡ

ಅಧಿಕಾರಿಯೊಬ್ಬರು ತಿಳಿಸಿದ್ದಾರೆ.ಪ್ರತಿ ಹಂತದಲ್ಲೂ ಗಂಭೀರ ನಿಯಮ ಉಲ್ಲಂಘನೆ: ಮೂಲಗಳ ಪ್ರಕಾರ, ತುಪ್ಪ ಪೂರೈಕೆಯ ಪ್ರತಿ ಹಂತದಲ್ಲೂ ಗಂಭೀರ ನಿಯಮ ಉಲ್ಲಂಘನೆಯು ಎಸ್‌ಐಟಿ ತನಿಖೆ ವೇಳೆ ಬಹಿರಂಗವಾಗಿದೆ. ಹೀಗಾಗಿ, ನಾಲ್ವರನ್ನು ಬಂಧಿಸಲಾಗಿದೆ. ವೈಷ್ಣವಿ ಡೈರಿ ಅಧಿಕಾರಿಗಳು ದೇವಸ್ಥಾನಕ್ಕೆ ತುಪ್ಪ ಪೂರೈಸಲು ಎಆರ್ ಡೈರಿ ಹೆಸರಿನಲ್ಲಿ ಟೆಂಡರ್‌ಗಳನ್ನು ಪಡೆದುಕೊಂಡಿದ್ದಾರೆ. ಜೊತೆಗೆ, ಟೆಂಡರ್ ಪ್ರಕ್ರಿಯೆಯನ್ನು ತಿರುಚಲು ನಕಲಿ ದಾಖಲೆಗಳನ್ನು ಸೃಷ್ಟಿಸಿದ್ದರು ಎಂದು ಅಧಿಕಾರಿಗಳು ಆರೋಪಿಸಿದ್ದಾರೆ.

ವೈಷ್ಣವಿ ಡೈರಿಯು ಭೋಲೆ ಬಾಬಾ ಡೈರಿಯಿಂದ ತುಪ್ಪವನ್ನು ಪಡೆಯಲಾಗಿದೆ ಎಂದು ಸುಳ್ಳು ಹೇಳಿದೆ. ಆದರೆ ತಿರುಪತಿ ದೇವಸ್ಥಾನಕ್ಕೆ ಅಗತ್ಯ ತುಪ್ಪದ ಬೇಡಿಕೆಯನ್ನು ಪೂರೈಸುವ ಸಾಮರ್ಥ್ಯವನ್ನು ಅದು ಹೊಂದಿಲ್ಲ ಎಂಬ ಅಂಶಗಳು ತನಿಖೆ ವೇಳೆ ಗೊತ್ತಾಗಿದೆ ಎಂದು ಎಸ್‌ಐಟಿ ಮೂಲಗಳು ತಿಳಿಸಿವೆ. ಸುಪ್ರೀಂಕೋರ್ಟ್ ಆದೇಶದ ಮೇರೆಗೆ ರಚನೆಯಾದ ತಂಡ: ತಿರುಪತಿ ಲಡ್ಡು ತಯಾರಿಕೆಯಲ್ಲಿ ಪ್ರಾಣಿಗಳ ಕೊಬ್ಬಿನ ಅಂಶ ಬಳಸಲಾಗಿದೆ ಎಂಬ ಆರೋಪದ ತನಿಖೆಗಾಗಿ ಸುಪ್ರೀಂಕೋರ್ಟ್ ಆದೇಶದ ಮೇರೆಗೆ ಕಳೆದ ವರ್ಷ ನವೆಂಬರ್‌ನಲ್ಲಿ ಐವರು ಅಧಿಕಾರಿಗಳ ಸಿಬಿಐ ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸಲಾಗಿತ್ತು. ತಂಡದಲ್ಲಿ ಕೇಂದ್ರ ಸಂಸ್ಥೆಯ ಇಬ್ಬರು ಅಧಿಕಾರಿಗಳು, ಆಂಧ್ರಪ್ರದೇಶದ ಇಬ್ಬರು ಪೊಲೀಸರು ಮತ್ತು ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ (ಎಫ್‌ಎಸ್‌ಎಸ್‌ಎಐ) ಓರ್ವ ಅಧಿಕಾರಿ ಇದ್ದಾರೆ.

ಆಂಧ್ರಪ್ರದೇಶದ ಮುಖ್ಯಮಂತ್ರಿ ಎನ್.ಚಂದ್ರಬಾಬು ನಾಯ್ಡು ಅವರು 2024ರ ಸೆಪ್ಟೆಂಬರ್‌ನಲ್ಲಿ ರಾಜ್ಯದಲ್ಲಿ ಹಿಂದಿನ ವೈ.ಎಸ್. ಜಗನ್ ಮೋಹನ್ ರೆಡ್ಡಿ ನೇತೃತ್ವದ ಆಡಳಿತದ ಅವಧಿಯಲ್ಲಿ, ತಿರುಪತಿ ಲಡ್ಡುಗಳನ್ನು ತಯಾರಿಸಲು ಪ್ರಾಣಿಗಳ ಕೊಬ್ಬನ್ನು ಬಳಸಲಾಗಿದೆ ಎಂದು ಆರೋಪ ಮಾಡಿದ್ದರು. ಆ ಬಳಿಕ ಈ ವಿಚಾರವು ದೇಶಾದ್ಯಂತ ಭಾರಿ ಚರ್ಚೆ, ವಿವಾದಕ್ಕೆ ಕಾರಣವಾಗಿತ್ತು.

## ವಿಪಕ್ಷವಾಗಿ ವರ್ತಿಸಬೇಕು

ದೆಹಲಿಯಲ್ಲಿ ಹ್ಯಾಟ್ರಿಕ್ ಆಡಳಿತ ನಡೆಸಿದಂತಹ ಕಾಂಗ್ರೆಸ್ ಪಕ್ಷ ಈಗ ಹ್ಯಾಟ್ರಿಕ್ ಆಗಿಯೇ ಶೂನ್ಯ ಸಂಪಾದನೆ ಮಾಡಿದೆ. ಶೇ.45–50ರಷ್ಟು ಮತ ಪಡೆಯುತ್ತಿದ್ದವರು ಈಗ ಇಂಥ ಹೀನಾಯ ಸ್ಥಿತಿ ತಲುಪಿದ್ದಾರೆ ಎಂದು ಲೇವಡಿ ಮಾಡಿದರು.

ಕಾಂಗ್ರೆಸ್, ಲೋಕಸಭೆಯಲ್ಲಿ ಮತ್ತು ವಿಧಾನಸಭೆಗಳಲ್ಲಿ ಒಂದು ರಚನಾತ್ಮಕ ವಿರೋಧ ಪಕ್ಷವಾಗಿ ಹೊರಹೊಮ್ಮಬೇಕು. ಆಡಳಿತ ಪಕ್ಷದೊಂದಿಗೆ ಒಂದು ಪಕ್ಷ ವಿಪಕ್ಷವಾಗಿ ಇರಬೇಕು. ಮುಂದಿನ ದಿನಗಳಲ್ಲಿ ಆದರೂ ಕಾಂಗ್ರೆಸ್ ನಾಯಕರು ಈ ನಿಟ್ಟಿನಲ್ಲಿ ಹೆಜ್ಜೆಯಿಡಲಿ ಎಂದು ಸಚಿವ ಜೋಶಿ ಸಲಹೆ ಮಾಡಿದರು. ಹಿಂಸಾಚಾರ ಪ್ರಚೋದನೆ, ಸದನದಲ್ಲಿ ಅನಗತ್ಯ ಗದ್ದಲ, ಸುಗಮವಾಗಿ ಸದನ ನಡೆಯಲು ಬಿಡದೇ ಇರುವುದು ಇದೆಲ್ಲವನ್ನೂ ಮತದಾರರು ಗಮನಿಸಿದ್ದಾರೆ. ಅದಕ್ಕೆ ತಕ್ಕ ಪ್ರತ್ಯುತ್ತರವನ್ನು ಈಗ ಜನರೇ ಕೊಟ್ಟಿದ್ದಾರೆ ಎಂದು ಹೇಳಿದರು.

ಸದನ ಸ್ಥಗಿತಗೊಳಿಸುವುದನ್ನು ನಿಲ್ಲಿಸಲಿ: ಸಂಸತ್ ಅಲ್ಲಿ ಸಣ್ಣಪುಟ್ಟ ವಿಷಯಗಳಿಗೆ ಗದ್ದಲ ಎಬ್ಬಿಸಿ ಸದನ ಸ್ಥಗಿತಗೊಳಿಸುವುದನ್ನು ಕಾಂಗ್ರೆಸ್ ಇನ್ನಾದರೂ ನಿಲ್ಲಿಸಲಿ. ಬದಲಿಗೆ ಒಂದು ರಚನಾತ್ಮಕ ವಿಪಕ್ಷವಾಗಿ ಚರ್ಚೆ ನಡೆಸುವತ್ತ ಗಮನ ಹರಿಸಲಿ ಎಂದು ಸಚಿವ ಪ್ರಲ್ಹಾದ ಜೋಶಿ ಕಾಂಗ್ರೆಸ್ ನಾಯಕರಿಗೆ ಚಾಟಿ ಬೀಸಿದರು.

## ಹೂಡಿಕೆದಾರರ ಸಮಾವೇಶ: ಡಿಸಿಎಂ, ಸಚಿವರಿಂದ ಸಿದ್ಧತೆ ವೀಕ್ಷಣೆ



**ಬೆಂಗಳೂರು:** ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಹಾಗೂ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಅವರು ಫೆ.11ರಿಂದ ಆರಂಭವಾಗುವ ಜಾಗತಿಕ ಹೂಡಿಕೆದಾರರ ಸಮಾವೇಶದ ಸಿದ್ಧತೆಗಳನ್ನು ಸೋಮವಾರ ಪರಿಶೀಲಿಸಿದರು.

ಸಮಾವೇಶ ನಡೆಯಲಿರುವ ಅರಮನೆ ಮೈದಾನಕ್ಕೆ ಭೇಟಿ ನೀಡಿದ ಇಬ್ಬರೂ ಮುಖಂಡರು ಪ್ರದರ್ಶನ ತಾಣಗಳು, ಗೋಷ್ಠಿಗಳು ನಡೆಯಲಿರುವ ಸ್ಥಳಗಳು, ಮಾತುಕತೆ ಮತ್ತು ಒಡಂಬಡಿಕೆ ನಡೆಯಲಿರುವ ಸಭಾಂಗಣಗಳು, ಕಂಟ್ರಿ ಪೆವಿಲಿಯನ್, ಫುಡ್ ಕೋರ್ಟ್ ಮುಂತಾದ ಜಾಗಗಳನ್ನು ಖುದ್ದಾಗಿ ವೀಕ್ಷಿಸಿ, ಅಂತಿಮ ಕ್ಷಣಗಳ ಕೆಲವು ಸುಧಾರಣೆಗಳತ್ತ ಗಮನ ಹರಿಸಿ, ಸಲಹೆಗಳನ್ನು ನೀಡಿದರು.

ಜತೆಯಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್, ಆಯುಕ್ತೆ ಗುಂಜನ್ ಕೃಷ್ಣ ಸೇರಿದಂತೆ ಇತರರು ಇದ್ದರು.



ಮೆಟ್ರೋ ನಿರ್ದೇಶಕರಿಗೆ ಮನವಿ ಸಲ್ಲಿಸಿದ ಬಿಜೆಪಿ ನಿಯೋಗ

## ಸಾವಿನಲ್ಲೂ ಸಾರ್ಥಕತೆ ಮೆರೆದ ಕಾನ್‌ಸ್ಟೇಬಲ್

ಮಂಗಳೂರು: ರಸ್ತೆ ಅಪಘಾತದಲ್ಲಿ ತಲೆಗೆ ಗಂಭೀರ ಸ್ವರೂಪದ ಗಾಯವಾಗಿ ಖಾಸಗಿ ಆಸ್ಪತ್ರೆಯಲ್ಲಿ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಕಂಕನಾಡಿ ನಗರ ಪೊಲೀಸ್ ಠಾಣೆ ಕಾನ್ ಸ್ಟೆಬಲ್ ಹರೀಶ್ (28) ಎಂಬುವರು ಚಿಕಿತ್ಸೆಗೆ ಸ್ಪಂದಿಸದೆ ಮೃತಪಟ್ಟಿದ್ದಾರೆ. ಹರೀಶ್ ಮೂಲತಃ ಮೈಸೂರು ಜಿಲ್ಲೆಯ ಕೆ.ಆರ್. ನಗರ ತಾಲೂಕು ಗಾಯನಹಳ್ಳಿ ಗ್ರಾಮದ ನಿವಾಸಿಯಾಗಿದ್ದರು. ಬುಧವಾರ ಮಾಣಿ–ಮೈಸೂರು ರಸ್ತೆಯ, ಸುಳ್ಯ ತಾಲೂಕಿನ ಅರಂತೋಡು ಬಳಿ ಅವರು ಚಲಾಯಿಸುತ್ತಿದ್ದ ಬೈಕ್ ಅಪಘಾತವಾಗಿ ತಲೆಗೆ ಗಂಭೀರ ಸ್ವರೂಪದಲ್ಲಿ ಗಾಯವಾಗಿತ್ತು.ಮಿದುಳು ನಿಷ್ಕ್ರಿಯಗೊಂಡಿರುವ ಹರೀಶ್ ಅವರ ಅಂಗಾಂಗದಾನ ಬಗ್ಗೆ ವೈದ್ಯರು ಮನೆಯವರಿಗೆ ಸಲಹೆ ನೀಡಿದರು. ಅದಕ್ಕೆ ಸಹೋದರ ಗಿರೀಶ್, ತಂದೆ ಲಿಂಗದೇವರು, ತಾಯಿ ರೇಣುಕಾ ಸಮ್ಮತಿ ಸೂಚಿಸಿದ್ದು, ಕಣ್ಣು, ಲಿವರ್, ಕಿಡ್ನಿ ಮೊದಲಾದ ಅಂಗಾಂಗಳನ್ನು ದಾನ ಮಾಡಲಾಯಿತು. ಇದರಿಂದ ಮೂರ್ನಾಲ್ಕು ಮಂದಿಗೆ ಹೊಸ ಬದುಕು ಸಿಗಲಿದೆ. ಈ ಮೂಲಕ ಹರೀಶ್ ಅವರು ಸಾವಿನಲ್ಲೂ ಸಾರ್ಥಕತೆ ಮೆರೆದಿದ್ದಾರೆ.ನಗರ ಪೊಲೀಸ್ ಆಯುಕ್ತರ ಕಚೇರಿ ಆವರಣದಲ್ಲಿ ಹರೀಶ್ ಅವರ ಮೃತದೇಹವನ್ನು ಸೋಮವಾರ ಅಂತಿಮ ದರ್ಶನಕ್ಕೆ ಇಡಲಾಗುವುದು. ಪೊಲೀಸ್ ಗೌರವದ ಬಳಿಕ ಅವರ ಹುಟ್ಟೂರಿಗೆ ಮೃತದೇಹವನ್ನು ಕೊಂಡೊಯ್ಯಲಾಗುವುದು ಎಂದು ಅವರ ಸಹೋದ್ಯೋಗಿಗಳು ಮಾಹಿತಿ ನೀಡಿದ್ದಾರೆ. ಫೆ.2ರಂದು ಹರೀಶ್ ಅವರ ವಿವಾಹ ನಿಶ್ಚಿತಾರ್ಥ ನಡೆದಿತ್ತು. ಇದಕ್ಕಾಗಿ ರಜೆಯಲ್ಲಿ ತೆರಳಿದ್ದ ಅವರು ಫೆ.5ರಂದು ಕರ್ತವ್ಯಕ್ಕೆ ಹಾಜರಾಗಲು ಬೈಕ್‌ನಲ್ಲಿ ಮಂಗಳೂರಿಗೆ ಬರುತ್ತಿದ್ದಾಗ ಅಪಘಾತವಾಗಿತ್ತು. ಯಾವ ರೀತಿ ಅಪಘಾತ ಎಂಬುದು ಇನ್ನೂ ಪತ್ತೆಯಾಗಿಲ್ಲ. ಇಳಿಜಾರಲ್ಲಿ ಬೈಕ್ ಸ್ಕಿಡ್ ಆಗಿ ಬಿದ್ದಿದೆಯೇ ಅಥವಾ ಯಾವುದಾದರೂ ವಾಹನ ಡಿಕ್ಕಿ ಹೊಡೆದು ಪರಾರಿಯಾಗಿತ್ತೇ ಎಂಬ ಬಗ್ಗೆ ತನಿಖೆ ನಡೆಸಬೇಕಾಗಿದೆ.

## ಹುಲಿ ಶವ ಪತ್ತೆ

**ಹಾಸನ:** ಹಳ್ಳದ ನೀರಿನಲ್ಲಿ ಹುಲಿಯ ಶವ ಕೊಳೆತ ಸ್ಥಿತಿಯಲ್ಲಿ ಬೇಲೂರು ತಾಲೂಕಿನ ರಾಮದೇವರಹಳ್ಳದಲ್ಲಿ ಪತ್ತೆಯಾಗಿದೆ. ದೈತ್ಯಾಕಾರದ ಹುಲಿ ನೀರಿನಲ್ಲಿ ತೇಲುತ್ತಿರುವುದನ್ನು ಗಮನಿಸಿದ ಗ್ರಾಮಸ್ಥರು ಅರಣ್ಯ ಇಲಾಖೆಗೆ ಮಾಹಿತಿ ನೀಡಿದ್ದಾರೆ.ಸ್ಥಳಕ್ಕಾಗಮಿಸಿದ ಅರಣ್ಯ ಇಲಾಖೆ ಸಿಬ್ಬಂದಿಗಳು ಪರಿಶೀಲನೆ ನಡೆಸಿದ್ದು, ಸುಮಾರು 3 ವರ್ಷ ಪ್ರಾಯದ ಗಂಡುಹುಲಿಯಾಗಿದೆ.ಕೆಲ ದಿನಗಳ ಹಿಂದೆ ಮೈಸೂರು ಜಿಲ್ಲೆಯಲ್ಲಿ ಸೆರೆ ಹಿಡಿದು ಚಿಕ್ಕಮಗಳೂರು ಜಿಲ್ಲೆಯ ಭದ್ರಾ ಅಭಯಾರಣ್ಯಕ್ಕೆ ಬಿಡಲಾಗಿತ್ತು. ವಿಡಿಯೋ ಕಾಲರ್ ಅಳವಡಿಸಿ ಕಾಡಿಗೆ ಬಿಡಲಾಗಿದ್ದ ಹುಲಿ ಇದೀಗ ಅನುಮಾನಸ್ಪದ ರೀತಿಯಲ್ಲಿ ಸಾವನ್ನಪ್ಪಿದೆ. ಈ ಸಂಬಂಧ ಅರಣ್ಯ ಅಧಿಕಾರಿಗಳು ಪೊಲೀಸರು ತನಿಖೆ ಮುಂದುವರೆಸಿದ್ದಾರೆ.

ಮೊದಲ ಪುಟದಿಂದ

## ಪಲಾಯನ ತಡೆಯಬೇಕು

ಹೊಂದಿರುವ ಕೌಶಲ್ಯಪೂರ್ಣ ಕಾರ್ಯಪಡೆಯೇ ನಮ್ಮಲ್ಲಿದೆ" ಎಂದರು.

"ಇತ್ತೀಚಿನ ವರ್ಷಗಳಲ್ಲಿ, ಕರ್ನಾಟಕವು ದೇಶದ ಒಟ್ಟು ದೇಶೀಯ ಉತ್ಪನ್ನ, ಕೈಗಾರಿಕಾ ಬೆಳವಣಿಗೆ ಮತ್ತು ಹೂಡಿಕೆಯ ಒಳಹರಿವು ಸೇರಿದಂತೆ ಪ್ರಮುಖ ಆರ್ಥಿಕ ಕ್ಷೇತ್ರಗಳಲ್ಲಿ ಅಗಾಧ ಬೆಳವಣಿಗೆ ಕಂಡಿದೆ" ಎಂದರು.

"ಸಂಶೋಧನೆ, ಮೂಲಸೌಕರ್ಯ ಅಭಿವೃದ್ಧಿ ಮತ್ತು ಉದ್ದಿಮೆಗೆ ಪ್ರೋತ್ಸಾಹಿಸುವ ಭವಿಷ್ಯದ ದೃಷ್ಟಿಯಿಂದ ಕೈಗಾರಿಕಾ ನೀತಿಯನ್ನು ಪೋಷಿಸಲು ನಮ್ಮ ಸರ್ಕಾರ ಬದ್ಧವಾಗಿದೆ" ಎಂದು ಹೇಳಿದರು.

"ಆಕಾಶಕ್ಕೆ ಮಿತಿಯಿಲ್ಲ ಎಂಬುದನ್ನು ಈ ಏರ್ ಶೋ ಮೂಲಕ ನಾವು ಕಂಡುಕೊಳ್ಳಬಹುದು. ಬೆಂಗಳೂರು ಏರ್ ಶೋ ನಾಗರಿಕ ಮತ್ತು ಮಿಲಿಟರಿ ವಾಯುಯಾನ ಎರಡರಲ್ಲೂ ಭಾರತದ ಪ್ರಗತಿಯನ್ನು ಎತ್ತಿ ತೋರಿಸುವ ದೊಡ್ಡ ಕಾರ್ಯಕ್ರಮ" ಎಂದು ತಿಳಿಸಿದರು.

"ಏರೋ ಇಂಡಿಯಾ ಕೇವಲ ಪ್ರದರ್ಶನವಲ್ಲ. ಇದು ಏರೋಸ್ಪೇಸ್ ಮತ್ತು ರಕ್ಷಣಾ ಕ್ಷೇತ್ರಗಳಲ್ಲಿ ಭಾರತದ ಸಾಮರ್ಥ್ಯ ಬೆಳೆಯುತ್ತಿರುವುದಕ್ಕೆ ಸಾಕ್ಷಿ ಮತ್ತು ಅಂತರರಾಷ್ಟ್ರೀಯ ಪಾಲುದಾರಿಕೆಗಳನ್ನು ಬೆಳೆಸುವ ವೇದಿಕೆ" ಎಂದರು.

"2013 ರಲ್ಲಿ ಏರೋಸ್ಪೇಸ್ ನೀತಿಯನ್ನು ಘೋಷಿಸಿದ ಮೊದಲ ರಾಜ್ಯ ಕರ್ನಾಟಕ. ನಮ್ಮ ರಾಜ್ಯವು ದೇವನಹಳ್ಳಿ ಬಳಿ ಏರೋಸ್ಪೇಸ್ ಕಂಪನಿಗಳಿಗಾಗಿ 1 ಸಾವಿರ ಎಕರೆ ಪ್ರದೇಶವನ್ನು ಮೀಸಲಿಟ್ಟು ಏರೋಸ್ಪೇಸ್ ಪಾರ್ಕ್ ಸ್ಥಾಪಿಸಿದೆ" ಎಂದರು.

"ಇಂದು ಏರೋಸ್ಪೇಸ್ ಉದ್ಯಮವನ್ನು ಅಂತರರಾಷ್ಟ್ರೀಯ ಮಟ್ಟಕ್ಕೆ ತೆಗೆದುಕೊಂಡು ಹೋಗಲು ಬೆಂಗಳೂರು ಅತ್ಯುತ್ತಮ ನಗರವಾಗಿದೆ. ಅನೇಕ ಬ್ರ್ಯಾಂಡ್‌ಗಳು ಮತ್ತು ಅತ್ಯುತ್ತಮ ತಂತ್ರಜ್ಞಾನಗಳನ್ನು ಪ್ರದರ್ಶಿಸಲು ಬೆಂಗಳೂರು ಸೂಕ್ತ ಸ್ಥಳವಾಗಿದೆ" ಎಂದರು.

"ವ್ಯಾಪಾರ ಒಪ್ಪಂದಗಳನ್ನು ಮಾಡಿಕೊಳ್ಳಲು, ಉದ್ದಿಮೆಗಳ ಅತ್ಯುತ್ತಮ ಉತ್ಪನ್ನಗಳನ್ನು ಪರೀಕ್ಷಿಸಲು ಇದು ಸೂಕ್ತ ಸ್ಥಳವಾಗಿದೆ. ಏರೋಸ್ಪೇಸ್ ಭವಿಷ್ಯವು ರೂಪುಗೊಳ್ಳುತ್ತಿರುವ ಸ್ಥಳವೇ ಬೆಂಗಳೂರು" ಎಂದು ಹೇಳಿದರು.

ದೇಶದ ಏರೋಸ್ಪೇಸ್ ರಾಜಧಾನಿ ಬೆಂಗಳೂರು

"ಬೆಂಗಳೂರು ಭಾರತದ ಏರೋಸ್ಪೇಸ್ ರಾಜಧಾನಿ. ದೇಶದ ಏರೋಸ್ಪೇಸ್ ಉತ್ಪಾದನೆ ಮತ್ತು ರಕ್ಷಣಾ



ಸಂಶೋಧನೆಯ ಶೇ. 60 ಕ್ಕಿಂತ ಹೆಚ್ಚು ಕೊಡುಗೆಯನ್ನು ನಮ್ಮ ರಾಜ್ಯ ನೀಡುತ್ತಿದೆ" ಎಂದರು.

"ಎಚ್ ಎಎಲ್, ಇಸ್ರೋ ಮತ್ತು ಬೋಯಿಂಗ್ ಇಂಡಿಯಾದಂತಹ ಪ್ರಮುಖ ಸಂಸ್ಥೆಗಳು ಭಾರತದ ರಕ್ಷಣಾ ಮತ್ತು ಬಾಹ್ಯಾಕಾಶ ಸಾಮರ್ಥ್ಯಗಳಿಗೆ ಸಾಕಷ್ಟು ಕೊಡುಗೆಗಳನ್ನು ನೀಡುತ್ತಿವೆ. ಬೆಂಗಳೂರಿನ ಏರೋಸ್ಪೇಸ್ ವಲಯದಲ್ಲಿ 1,50,000 ಕ್ಕೂ ಹೆಚ್ಚು ಜನರು ಕೆಲಸ ಮಾಡುತ್ತಿದ್ದಾರೆ, ಇದು ನಗರವನ್ನು ವಾಯುಯಾನ ಮತ್ತು ರಕ್ಷಣಾ ತಂತ್ರಜ್ಞಾನದಲ್ಲಿ ಜಗತ್ತಿನಲ್ಲಿಯೇ ಸಾಕಷ್ಟು ಹೆಸರು ಮಾಡಿದೆ" ಎಂದರು.

"ವಿದೇಶಿ ಹೂಡಿಕೆಗಳನ್ನು ಆಕರ್ಷಿಸುವಲ್ಲಿ ಬೆಂಗಳೂರು ಜಾಗತಿಕ ಏರೋಸ್ಪೇಸ್ ನಗರಗಳಲ್ಲಿ ಮೂರನೇ ಸ್ಥಾನವನ್ನು ಪಡೆದಿದೆ. ಕರ್ನಾಟಕ ಸರ್ಕಾರವು ಕರ್ನಾಟಕದಾದ್ಯಂತ ಅಂದರೆ ಬೆಂಗಳೂರು, ಬೆಳಗಾವಿ, ಮೈಸೂರು, ತುಮಕೂರು ಮತ್ತು ಚಾಮರಾಜನಗರಗಳಲ್ಲಿ ಏರೋಸ್ಪೇಸ್ ಮತ್ತು ರಕ್ಷಣಾ ಕೇಂದ್ರಗಳನ್ನು ಅಭಿವೃದ್ಧಿಪಡಿಸುತ್ತಿದೆ" ಎಂದು ಹೇಳಿದರು.

"ವಾಣಿಜ್ಯ ಮತ್ತು ರಕ್ಷಣಾ ಕ್ಷೇತ್ರಗಳಲ್ಲಿ ಕ್ರಾಂತಿಯನ್ನೇ ಉಂಟು ಮಾಡುತ್ತಿರುವ ಡ್ರೋನ್ ತಂತ್ರಜ್ಞಾನ ಮತ್ತು ಮಾನವರಹಿತ ವೈಮಾನಿಕ ತಂತ್ರಜ್ಞಾನದ ರುವಾರಿಯಾಗಿ ಬೆಂಗಳೂರು ಬೆಳೆಯುತ್ತಿದೆ" ಎಂದರು.

"ಬೆಂಗಳೂರು ಭಾರತದಲ್ಲಿಯೇ ಅತಿ ಹೆಚ್ಚು ಸಾಫ್ಟ್‌ವೇರ್ ಕಂಪನಿಗಳನ್ನು ಹೊಂದಿದೆ. ಅದಕ್ಕೆ ಇದನ್ನು ಭಾರತದ ಸಿಲಿಕಾನ್ ಸಿಟಿ ಎಂದು ಕರೆಯುತ್ತಾರೆ. ತಂತ್ರಜ್ಞಾನ ಮತ್ತು ಏರೋಸ್ಪೇಸ್ ವಲಯವನ್ನು ಮುನ್ನಡೆಸುವ ನಗರವಾಗಿ ಬೆಂಗಳೂರು ಬೆಳೆದಿದೆ" ಎಂದು ಹೇಳಿದರು.

"ರಾಜಧಾನಿಯಲ್ಲಿ 21 ಎಂಜಿನಿಯರಿಂಗ್ ಕಾಲೇಜುಗಳಿವೆ. ವಿಶ್ವದ ಯಾವುದೇ ನಗರಗಳಿಗೆ ಹೋಲಿಸಿದರೆ ನಾವೇ ಮೊದಲ ಸ್ಥಾನದಲ್ಲಿ ನಿಲ್ಲುತ್ತೇವೆ. ಬೆಂಗಳೂರಿನ ವಿಶಿಷ್ಟ ಪರಿಸರವು ಭಾರತ ಮತ್ತು ಪ್ರಪಂಚದಾದ್ಯಂತದ ಅತ್ಯುತ್ತಮ ಪ್ರತಿಭೆಗಳನ್ನು ಆಕರ್ಷಿಸುತ್ತಿದೆ. ಬೆಂಗಳೂರು ನಿಮ್ಮ ಪ್ರತಿಭೆಯನ್ನು ಬಳಸಿಕೊಳ್ಳುವ, ಬೆಳೆಸುವ, ಕನಸುಗಳನ್ನು ನನಸು ಮಾಡುವ ಸ್ಥಳವಾಗಿದೆ" ಎಂದರು.

"ಕರ್ನಾಟಕವು ಭಾರತದ ಏರೋಸ್ಪೇಸ್ ವಲಯದಲ್ಲಿ ಅನೇಕ ಬಾರಿ ನಿರ್ಣಾಯಕ ಪಾತ್ರವನ್ನು ವಹಿಸಿದೆ. ಅಲ್ಲದೇ ರಕ್ಷಣಾ ಸೇವೆಗಳಿಗಾಗಿ ದೇಶದ ವಿಮಾನ ಮತ್ತು ಹೆಲಿಕಾಪ್ಟರ್ ಉತ್ಪಾದನೆಯ ಶೇ.67 ಮತ್ತು ಭಾರತದ ಏರೋಸ್ಪೇಸ್–ಸಂಬಂಧಿತ ರಫ್ತಿನ ಶೇ.65 ಕೊಡುಗೆ ನೀಡುತ್ತಿದೆ" ಎಂದು ಹೇಳಿದರು.

"ವಿಮಾನ ಸೇವೆ ಮತ್ತು ವಿಮಾನಗಳನ್ನು ದುರಸ್ತಿ ಮಾಡುವ ಕ್ಷೇತ್ರದಲ್ಲಿ ಭಾರತ ಮುಂದಿದೆ. ಆದರೆ ವಿಮಾನಗಳು ಮತ್ತು ಹೆಲಿಕಾಪ್ಟರ್‌ಗಳ ತಯಾರಿಕೆ ಇನ್ನೂ ಸ್ವಲ್ಪ ಹಿಂದೆ ಬಿದ್ದಿದೆ. ದೇಶವು ಬಳಸುವ ಹೆಚ್ಚಿನ ವಿಮಾನಗಳು ಮತ್ತು ಹೆಲಿಕಾಪ್ಟರ್‌ಗಳನ್ನು ಇನ್ನೂ ಇತರ ರಾಷ್ಟ್ರಗಳಿಂದ ಖರೀದಿಸಲಾಗುತ್ತಿದೆ" ಎಂದು ವಿಷಾದ ವ್ಯಕ್ತಪಡಿಸಿದರು.

"ವಾಣಿಜ್ಯ ಮತ್ತು ರಕ್ಷಣಾ ವಿಮಾನ ನಿಲ್ದಾಣಗಳು ಕಾರ್ಯನಿರ್ವಹಿಸುತ್ತಿರುವ ವಿಶ್ವದ ಏಕೈಕ ನಗರ ಬೆಂಗಳೂರು. ಈ ಕ್ಷೇತ್ರಕ್ಕೆ ಹೆಚ್ಚಿನ ಮಹಿಳೆಯರು ಕೊಡುಗೆ ನೀಡುತ್ತಿದ್ದಾರೆ. ಯು.ಎಸ್., ಫ್ರಾನ್ಸ್ ಮತ್ತು ರಷ್ಯಾದಂತಹ ದೇಶಗಳೊಂದಿಗೆ ಪಾಲುದಾರಿಕೆಗಳ ಮೂಲಕ ಭಾರತದ ಏರೋಸ್ಪೇಸ್ ಉದ್ಯಮವು ಬೆಳೆಯುತ್ತಿದೆ" ಎಂದರು.

ಜಾಗತಿಕ ಮಾರುಕಟ್ಟೆಯಲ್ಲಿ ನಮ್ಮ ಸ್ಥಾನವನ್ನು ಈ ಏರ್ ಶೋ ಬಲಪಡಿಸುತ್ತಿದೆ. ಈ ಪ್ರದರ್ಶನವು ದೇಶಗಳು ಒಗ್ಗೂಡಲು, ಜ್ಞಾನವನ್ನು ಹಂಚಿಕೊಳ್ಳಲು ಮತ್ತು ಎಲ್ಲರಿಗೂ ಪ್ರಯೋಜನವಾಗುವ ವಾತಾವರಣ ನಿರ್ಮಿಸಲು ಉತ್ತಮ ಅವಕಾಶ ನೀಡುತ್ತದೆ" ಎಂದರು.

ಬೆಂಗಳೂರು ಏರ್ ಶೋ ಸಣ್ಣ ಕಾರ್ಯಕ್ರಮವಲ್ಲ. ಇದು ಬಾಹ್ಯಾಕಾಶದಲ್ಲಿ ಭಾರತದ ಶಕ್ತಿ, ಪ್ರಗತಿ ಮತ್ತು ನಾಯಕತ್ವದ ಸಂಕೇತವಾಗಿದೆ. ಬಾಹ್ಯಾಕಾಶ ಮತ್ತು ರಕ್ಷಣಾ ಹೂಡಿಕೆದಾರರು, ಉದ್ಯಮಿಗಳು ಮತ್ತು ವ್ಯಾಪಾರ ನಾಯಕರು ಕರ್ನಾಟಕವನ್ನು ಮೊದಲು ಆಯ್ಕೆ ಮಾಡಬೇಕು ಎಂದು ನಾನು ಕೋರುತ್ತೇನೆ" ಎಂದರು.

"2025 ರ ಏರ್ ಶೋ ಎಲ್ಲರಿಗೂ ಯಶಸ್ವಿ ಮತ್ತು ಸ್ಫೂರ್ತಿದಾಯಕ ಅನುಭವವನ್ನು ನೀಡಲಿ. ಭಾರತದ ಶಕ್ತಿ ಪ್ರದರ್ಶನದ ಉದ್ಘಾಟನೆಯಲ್ಲಿ ಭಾಗವಹಿಸುತ್ತಿರುವುದು ನನ್ನ ಸೌಭಾಗ್ಯ. 1996 ರಲ್ಲಿ ಪ್ರಾರಂಭವಾದಾಗಿನಿಂದ ಇಲ್ಲಿಯ ತನಕ ಈ ಕಾರ್ಯಕ್ರಮ ಸಾಕಷ್ಟು ಎತ್ತರಕ್ಕೆ ಬೆಳೆದಿದೆ" ಎಂದು ತಿಳಿಸಿದರು.

## ಲೋಹದಕ್ಕಿಗಳ ಕಲರವ

.ಈ ಕಾರ್ಯಕ್ರಮವು ರಕ್ಷಣಾ ಸಚಿವರ ಸಮಾವೇಶ ಭಾರಿ ಮಹತ್ವ ಪಡೆದಿದ್ದು,ನಂತರ ನಡೆಯುವ ವಿವಿಧ ಕಂಪನಿಗಳ ಸಿಇಓಗಳ ದುಂಡುಮೇಜಿನ ಸಭೆಯಲ್ಲಿ ಹಲವು ಒಪ್ಪಂದ ಏರ್ಪಡುವ ಸಾಧ್ಯತೆ ಇದೆ. ವಿಚಾರ ಸಂಕಿರಣಗಳು ಸೇರಿ ಹಲವು ಕಾರ್ಯಕ್ರಮಗಳಲ್ಲಿ ಭಾರಿ ಹೋಡಿಕೆ ಹರಿದು ಬರುವ ಸಾಧ್ಯತೆ ಇದೆ.ಒಟ್ಟು 42,000 ಚದರ ಮೀಟರ್‌ಗಿಂತಲೂ ಹೆಚ್ಚು ಪ್ರದೇಶದಲ್ಲಿ ಪ್ರದರ್ಶನ ಆಯೋಜಿಸಲಾಗಿದ್ದು, 150 ವಿದೇಶಿ ಕಂಪನಿಗಳು ಸೇರಿದಂತೆ 900 ಕ್ಕೂ ಹೆಚ್ಚು ದೇಶೀಯ ಪ್ರದರ್ಶಕರ ಭಾಗವಹಿದ್ದು,ಹಿಂದಿನ ಆವೃತ್ತಿಗಿಂತ ಈ ಬಾರಿ ಅತಿದೊಡ್ಡ ಏರ್ ಶೋ ಎಂಬ ಹೆಗ್ಗಳಿಕೆ ಪಡೆದಿದೆ. ಉದ್ಘಾಟನಾ ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಉಪಸ್ಥಿತರಿದ್ದರು.

## ಭಿನ್ನರಿಗೆ ಹೈ ಬುಲಾವ್

ಈ ಬಗ್ಗೆ ತಮಗೆ ಚಿಂತೆ ಬೇಡ ನೀವು ಬಾಯಿಮುಚ್ಚಿಕೊಂಡು ಇರಿ ಎಂದು ಹೈಕಮಾಂಡ್ ತಾಕೀತು ಮಾಡಲಿದೆ ಎಂದು ಹೇಳಲಾಗಿದೆ. ಈ ಸಂಬಂಧ ಮಾತನಾಡಿರುವ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್, ಬಿಜೆಪಿ ರಾಜ್ಯಾಧ್ಯಕ್ಷರ ಚುನಾವಣೆ ಬಗ್ಗೆ ಹೈಕಮಾಂಡ್ ಗಂಭೀರವಾಗಿ ಪರಿಗಣಿಸಿದೆ. ಬಿವೈ ವಿಜಯೇಂದ್ರ ಬದಲಾಗುತ್ತಾರೆ ಎಂಬ ವಿಶ್ವಾಸವಿದೆ ಎಂದು ತಿಳಿಸಿದ್ದಾರೆ.

ರಾಜ್ಯಾಧ್ಯಕ್ಷ ಸ್ಥಾನದ ಬಗ್ಗೆ ವರಿಷ್ಠರು ಗಂಭೀರವಾಗಿ ಪರಿಗಣಿಸಿದ್ದು, ರಾಜ್ಯಾಧ್ಯಕ್ಷ ಚುನಾವಣೆಗೂ ಮುನ್ನ ಬಿಜೆಪಿ ಹಿರಿಯ ನಾಯಕರು ಸಭೆ ನಡೆಸುತ್ತಾರೆ.ವಿಜಯೇಂದ್ರ ಬದಲಾಗ್ತಾರೆ ಎಂಬುವ ವಿಶ್ವಾಸ ನಮಗಿದೆ. ಮೋದಿ, ಅಮಿತ್ ಶಾ, ಸಂತೋಷ್ ಅವರ ಮೇಲೆ ನಂಬಿಕೆ ಇದೆ ಎಂದರು. ಸೋಮಣ್ಣ ಅವರ ಆಹ್ವಾನದ ಮೇರೆಗೆ ದೆಹಲಿಗೆ ಬಂದಿದ್ದೇವೆ. ಸೋಮಣ್ಣ ಮನೆ ಪೂಜೆಗೆ ಬಂದಿದ್ದೇವೆ. ಎಲ್ಲರೂ ಬನ್ನಿ ಎಂದು ಆಹ್ವಾನ ನೀಡಿದ್ದರು. ಏನಾದರೂ ಚರ್ಚೆ ನಡೆದರೂ ನಡೆಯಬಹುದು. ಕಾರ್ಯಕ್ರಮಕ್ಕೆ ವಿಜಯೇಂದ್ರಗೆ ಆಹ್ವಾನ ನೀಡಿರುವ ಬಗ್ಗೆ ನಮಗೆ ಗೊತ್ತಿಲ್ಲ. ರಾಜ್ಯಾಧ್ಯಕ್ಷರು ಟೆನ್ಷನ್ ಆಗಿದ್ದರೋ ಇಲ್ಲವೋ ಗೊತ್ತಿಲ್ಲ ನಾವು ಮೆನ್ಷನ್ ಮಾಡೋಕೆ ಬಂದಿದ್ದೇವೆ. ಸೋಮಣ್ಣ ಮೂಲಕ ಸಂದೇಶ ನೀಡಲಾಗಿದೆ ಎಂದು ಯತ್ನಾಳ್ ತಿಳಿಸಿದರು.

## ಬುದ್ಧಿವಂತಿಕೆಯಿಂದ ಬಳಸಿ

ವ್ಯತ್ಯಾಸವನ್ನು ಅರ್ಥಮಾಡಿ ಕೊಳ್ಳುವುದು ಮುಖ್ಯ. ಒಂದು ಉದಾಹರಣೆಯನ್ನು ನೀಡುತ್ತಾ, ಕ್ರಿಕೆಟ್ ಆಟಗಾರರು ದಿನದ ಕೊನೆಯಲ್ಲಿ ತಮ್ಮ ತಪ್ಪುಗಳ ಬಗ್ಗೆ ಚಿಂತಿಸುತ್ತಾರೆ ಮತ್ತು ಅವುಗಳ ಮೇಲೆ ಕೆಲಸ ಮಾಡುತ್ತಾರೆ, ವಿದ್ಯಾರ್ಥಿಗಳು ಸಹ ಅದೇ ರೀತಿ ಮಾಡಬೇಕು ಎಂದು ಹೇಳಿದರು. ಹಿಂದಿನ ವರ್ಷದ ಪ್ರಶ್ನೆ ಪತ್ರಿಕೆಯನ್ನು ಬಿಡಿಸುವುದರಿಂದ ಪರೀಕ್ಷೆ ಬಗೆಗಿನ ಭಯ ಸ್ವಲ್ಪ ಕಡಿಮೆಯಾಗುತ್ತದೆ.

**ಸೂರ್ಯ ಸ್ನಾನ, ರೈತರ ಆಹಾರ ಪದ್ಧತಿಯನ್ನು ಮಕ್ಕಳು ಅಳವಡಿಸಿಕೊಳ್ಳಬೇಕು:** ಮಕ್ಕಳು ಸೂರ್ಯ ಸ್ನಾನ ಹಾಗೆಯೇ ರೈತರ ಆಹಾರ ಪದ್ಧತಿಗಳನ್ನು ಅಳವಡಿಸಿಕೊಳ್ಳುವುದು ಮುಖ್ಯ ಎಂದು ಪ್ರಧಾನಿ ನರೇಂದ್ರ ಮೋದಿ ಸಲಹೆ ನೀಡಿದ್ದಾರೆ. ಪರೀಕ್ಷಾ ಪೆ ಚರ್ಚಾ ಕಾರ್ಯಕ್ರಮದಲ್ಲಿ ಮಕ್ಕಳನ್ನುದ್ದೇಶಿಸಿ ಮಾತನಾಡಿದ ಅವರು, ರೈತರು ಬೆಳಗ್ಗೆ ಹೊಟ್ಟೆ ತುಂಬಾ ಊಟ ಮಾಡುತ್ತಾರೆ, ಆಮೇಲೆ ಕೆಲಸ ಸಂಜೆ ಸೂರ್ಯಾಸ್ತದ ಸಮಯದಲ್ಲಿ ಹೊಟ್ಟೆ ತುಂಬಾ ಊಟ ಇದು ಮನಸ್ಸನ್ನು ಕೂಡ ಶಾಂತವಾಗಿರುವುದಷ್ಟೇ ಅಲ್ಲದೆ ಆರೋಗ್ಯವನ್ನು ಕೂಡ ಉತ್ತಮ ರೀತಿಯಲ್ಲಿ ಕಾಪಾಡುತ್ತದೆ ಎಂದಿದ್ದಾರೆ.

ಪ್ರತಿಯೊಬ್ಬ ವಿದ್ಯಾರ್ಥಿಯೂ ಸೂರ್ಯನ ಸ್ನಾನ ಮಾಡುವ ಅಭ್ಯಾಸ ಮಾಡಿಕೊಳ್ಳಬೇಕು, ಬೆಳಿಗ್ಗೆ ಬೇಗ ಹೋಗಿ ಬಿಸಿಲಿನಲ್ಲಿ ಕುಳಿತುಕೊಳ್ಳಿ. ನಿಮ್ಮ ದೇಹದ ಹೆಚ್ಚಿನ ಭಾಗವನ್ನು ಸೂರ್ಯನ ಬೆಳಕಿಗೆ ಒಡ್ಡಲು ಪ್ರಯತ್ನಿಸಿ. ಇದಲ್ಲದೆ, ದೈಹಿಕ ಪೋಷಣೆಯ ಮಹತ್ವವನ್ನು ವಿವರಿಸುತ್ತಾ, ಗೋಧಿ, ರಾಗಿ, ಅಕ್ಕಿ, ಎಲ್ಲವನ್ನೂ ತಿನ್ನಿರಿ, ದಟ್ಟವಾದ ಮರದ ಕೆಳಗೆ ನಿಂತು ಆಳವಾದ ಉಸಿರನ್ನು ತೆಗೆದುಕೊಳ್ಳಿ ಎಂದರು.

ಕಳೆದ ಬಾರಿ 30 ಅಂಕಗಳನ್ನು ಪಡೆದಿದ್ದರೆ, ಈ ಬಾರಿ 35 ಅಂಕಗಳನ್ನು ಪಡೆಯಬೇಕು ಎಂದು ನೀವು ಯೋಚಿಸಬೇಕು, ನೀವು ಕ್ರಮೇಣ ನಿಮ್ಮ ಮನಸ್ಸನ್ನು ಸ್ಥಿರಗೊಳಿಸಿಕೊಳ್ಳಬೇಕು. ಪೋಷಕರು ಸಹ ತಮ್ಮ ಮಕ್ಕಳ ಕೌಶಲ್ಯಗಳ ಬಗ್ಗೆ ಗಮನ ಹರಿಸಬೇಕು. ಮಕ್ಕಳು ದುಃಖಿತರಾದರೆ ಮತ್ತು ದಣಿದಿದ್ದರೆ ಪರೀಕ್ಷೆಗಳಲ್ಲಿ ಉತ್ತಮವಾಗಿ ಬರೆಯಲು ಸಾಧ್ಯವಾಗುತ್ತದೆಯೇ? ಎಂದು ಪ್ರಶ್ನಿಸಿದರು.

ಪ್ರತಿಯೊಬ್ಬರಿಗೂ 24 ಗಂಟೆಗಳಿರುತ್ತವೆ. ಕೆಲವರು ಅನಗತ್ಯ ವಿಷಯಗಳಲ್ಲಿ ಅದನ್ನು ವ್ಯರ್ಥ ಮಾಡುತ್ತಾರೆ. ಕೆಲವರು ತಮ್ಮ ಗುರಿಯತ್ತ ಗಮನಹರಿಸುತ್ತಾರೆ ಮತ್ತು ಅದಕ್ಕಾಗಿ ಶ್ರಮಿಸುತ್ತಾರೆ. ಈ ಸಮಯವನ್ನು ಸಾಧ್ಯವಾದಷ್ಟು ಅತ್ಯುತ್ತಮವಾಗಿ ಬಳಸಿಕೊಳ್ಳಬೇಕು. ನಾಳೆ ನಾನು ಮಾಡಬೇಕಾದ ಕೆಲಸಗಳ ಪಟ್ಟಿಯನ್ನು ಮಾಡಿ.

ನಂತರ ಮರುದಿನ ನೀವು ಏನು ಮಾಡಿದ್ದೀರಿ ಮತ್ತು ಏನು ಮಾಡಲಿಲ್ಲ ಎಂದು ನೋಡಿ. ನಾವು ನಮ್ಮ ಹೆಚ್ಚಿನ ಸಮಯವನ್ನು ನಮ್ಮ ನೆಚ್ಚಿನ ವಿಷಯದ ಮೇಲೆ ಕಳೆಯುತ್ತೇವೆ. ಇತರ ವಿಷಯಗಳಿಗೂ ಸಮಯ ನೀಡಿ ಎಂದು ಸಲಹೆ ನೀಡಿದರು.

**ಮಕ್ಕಳನ್ನು ಮಾಡೆಲ್ ರೀತಿ ಪ್ರದರ್ಶನಕ್ಕಿಡಬೇಡಿ**

ಮಕ್ಕಳನ್ನು ಮಾಡೆಲ್‌ಗಳಂತೆ ಪ್ರದರ್ಶನಕ್ಕಿಡಬೇಡಿ ಎಂದು ಪೋಷಕರಿಗೆ ಪ್ರಧಾನಿ ನರೇಂದ್ರ ಮೋದಿ ಸಲಹೆ ನೀಡಿದ್ದಾರೆ. ಪರೀಕ್ಷಾ ಪೆ ಚರ್ಚಾ ಕಾರ್ಯಕ್ರಮದಲ್ಲಿ ಮಕ್ಕಳೊಂದಿಗೆ ಸಂವಾದ ನಡೆಸಿದ ಅವರು, ಪೋಷಕರು ಬೇರೆಯ ಮಕ್ಕಳನ್ನು ನೋಡಿ ತಮ್ಮ ಮಕ್ಕಳು ಹೀಗೆಯೇ ಇರಬೇಕು, ಬೇರೆಯವರ ಮನೆಯ ಮಕ್ಕಳಂತೆಯೇ ಓದಬೇಕೆಂದು ಬಯಸಬೇಡಿ. ನಿಮ್ಮ ಮಕ್ಕಳಿಗೆ ಯಾವ ವಿಷಯದ ಬಗ್ಗೆ ಹೆಚ್ಚು ಆಸಕ್ತಿ ಇರುತ್ತದೋ ಅದೇ ವಿಚಾರಗಳನ್ನು ಓದಲು ಅನುವು ಮಾಡಿಕೊಡಿ ಎಂದಿದ್ದಾರೆ.

ಮಕ್ಕಳು ಕೂಡ ತಮ್ಮ ಆಸಕ್ತಿಗಳನ್ನು ಮನಸ್ಸಿನಲ್ಲಿಟ್ಟುಕೊಳ್ಳುವುದುಯ ಬೇಡ, ಎಲ್ಲರೊಂದಿಗೂ ಮುಕ್ತವಾಗಿ ಮಾತನಾಡಿ, ಪೋಷಕರು ತಮ್ಮ ಆಸೆಗಳನ್ನು ಮಕ್ಕಳ ಮೇಲೆ ಹೇರಬಾರದು ಎಂದು ಪ್ರಧಾನಿ ಮೋದಿ ಹೇಳಿದರು. ಪ್ರತಿಯೊಂದು ಮಕ್ಕಳು ಒಂದಲ್ಲಾ ಒಂದು ಕ್ಷೇತ್ರದಲ್ಲಿ ಉತ್ತಮವಾಗಿರುತ್ತಾರೆ ಎಂದರು.

ನೀವು ಪ್ರಧಾನಿಯಾಗಿರದಿದ್ದರೆ ಮತ್ತು ಸಚಿವರಾಗಿದ್ದರೆ ನೀವು ಯಾವ ಇಲಾಖೆಯನ್ನು ಆಯ್ಕೆ ಮಾಡಿಕೊಳ್ಳುತ್ತಿದ್ದಿರಿ ಎಂದು. ಇದಕ್ಕೆ ಪ್ರಧಾನಿಯವರು, ಕೌಶಲ್ಯ ಬಹಳ ಮುಖ್ಯವಾದ ಕಾರಣ ನಾನು ಕೌಶಲ್ಯ ವಿಭಾಗವನ್ನು ಆಯ್ಕೆ ಮಾಡುತ್ತೇನೆ ಎಂದು ಹೇಳಿದರು. ಪೋಷಕರು ಸಹ ತಮ್ಮ ಮಕ್ಕಳ ಕೌಶಲ್ಯಗಳ ಬಗ್ಗೆ ಗಮನ ಹರಿಸಬೇಕು. ಮಕ್ಕಳು ದುಃಖಿತರಾದರೆ ಮತ್ತು ದಣಿದಿದ್ದರೆ ಪರೀಕ್ಷೆಗಳಲ್ಲಿ ಉತ್ತಮವಾಗಿ ಬರೆಯಲು ಸಾಧ್ಯವಾಗುತ್ತದೆಯೇ? ಎಂದು ಪ್ರಶ್ನಿಸಿದರು.

ನಾವು ರೋಬೋಟ್‌ಗಳಲ್ಲ, ಮನುಷ್ಯರು. ಮಕ್ಕಳನ್ನು ನಾಲ್ಕು ಗೋಡೆಗಳೊಳಗೆ ಬಂಧಿಸಿ ಪುಸ್ತಕಗಳ ಸೆರೆಮನೆಯನ್ನಾಗಿ ಮಾಡಿದರೆ, ಅವರು ಎಂದಿಗೂ ಬೆಳೆಯಲು ಸಾಧ್ಯವಾಗುವುದಿಲ್ಲ, ತೆರೆದ ಆಗಸವನ್ನು ಅವರಿಗಾಗಿ ನೀಡಬೇಕು ಸ್ವಾತಂತ್ರವೂ ಕೂಡ ಅಷ್ಟೇ ಮುಖ್ಯ ಎಂದು ಪ್ರಧಾನಿ ಹೇಳಿದರು.

# ಚುಟುಕು ಸಾಹಿತ್ಯದ ಶ್ರೀಮಂತಿಕೆ ಹೆಚ್ಚಲಿ




**ಕೊಪ್ಪಳ:** ಚುಟುಕು ಸಾಹಿತ್ಯಕ್ಕೆ ಅಪಾರ ಮಹತ್ವ ಇದೆ ಉದಯೋನ್ಮುಖ ಸಾಹಿತಿಗಳು ಹೆಚ್ಚಿನ ಸಂಖ್ಯೆಯಲ್ಲಿ ಚುಟುಕು ಸಾಹಿತ್ಯದಲ್ಲಿ ತೊಡಗಿಸಿಕೊಂಡು ಆದರ ಶ್ರೀಮಂತಿಕೆ ಹೆಚ್ಚಿಸುವ ಕಾರ್ಯ ನಡೆಯಬೇಕು ಎಂದು ಸಾಹಿತಿ ಶಿ.ಕಾ.ಬಡಿಗೇರ ಹೇಳಿದರು.

ಭಾಗ್ಯನಗರದಲ್ಲಿ ಕೊಪ್ಪಳ ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ ಆಯೋಜಿಸಿದ್ದ ಉಪನ್ಯಾಸ ಮತ್ತು ಜಿಲ್ಲಾ ಮಟ್ಟದ ಮುಕ್ತ ಚುಟುಕು ಕವಿಗೋಷ್ಠಿ ಚುಟುಕು ವಾಚಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಹಿಂದೆ ಅಖಂಡ ರಾಯಚೂರು ಜಿಲ್ಲೆ ಇದ್ದಾಗ ಕೊಪ್ಪಳ ಜಿಲ್ಲೆಯ ಅನೇಕ ಸಾಹಿತ್ಯ ಆಸಕ್ತರು ಚುಟುಕು ಸಾಹಿತ್ಯ ಪರಿಷತ್ ಚಟುವಟಿಕೆಗಳನ್ನು ನಡೆಸಲು ಅವಕಾಶ ಬೆಳೆಸಿಕೊಂಡು ಬಂದಿದ್ದಾರೆ ಈಗಲೂ ಸಹ ಪರಿಷತ್ತಿನ ಅಧ್ಯಕ್ಷ ಹಾಗೂ ಪದಾಧಿಕಾರಿಗಳು ಅದರ ಕಾಯ9ಚಟುವಟಿಕೆಗಳನ್ನು ವಿಸ್ತರಣೆ ಅತ್ಯಂತ ಲವಲವಿಕೆಯಿಂದ ಆಯೋಜನೆ ಮಾಡುತ್ತಿರುವುದು ಸಾಹಿತಿಗಳ ಉತ್ಸಾಹ ತುಂಬುವ ನಿಟ್ಟಿನಲ್ಲಿ ಉತ್ತಮ ಬೆಳವಣಿಗೆ ಯುವ ಸಾಹಿತಿಗಳನ್ನು ಸಾಮಾಜಿಕ ಜವಾಬ್ದಾರಿ ವಹಿಸಿಕೊಳ್ಳುವ ನಿಟ್ಟಿನಲ್ಲಿ ಉತ್ತಮ ಸಂದೇಶ ಮೂಡಲಿ ಎಂದು ಆಶಿಸಿದರು.

ಕೊಪ್ಪಳ ಜಿಲ್ಲೆ ಯಲ್ಲಿ ಚುಟುಕು ಸಾಹಿತ್ಯ ಬೆಳೆದ ಬಂದ ದಾರಿ ಕುರಿತು ಶಿಕ್ಷಕ,ಸಾಹಿತಿ ಕಲ್ಲಪ್ಪ ಕವಳಕೇರಿ ಮಾತನಾಡಿ, ಜಿಲ್ಲೆಯಲ್ಲಿ ಚುಟುಕು ಸಾಹಿತ್ಯ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿರುವ ಮಹನೀಯರಲ್ಲಿ ಸಾಕಷ್ಟು ಜನ ಇದ್ದಾರೆ,ಗ್ರಾಮೀಣ ಭಾಗದಲ್ಲಿಯೂ ಸಹ ಸಾಹಿತ್ಯಕ್ತರಿಗೆ ತಾವು ಪ್ಯಾಂಟು ಶರ್ಟು , ಮಹಿಳೆಯರಿಗೆ ಸೀರೆ ವಿತರಿಸಿ ಸನ್ಮಾನ ಕಾರ್ಯಕ್ರಮ ಮಾಡಿದ ಉದಾಹರಣೆಗಳಿವೆ, ಸಾಹಿತ್ಯ ಆಸಕ್ತರ ಸಂಖ್ಯೆ ಕೊಪ್ಪಳ ಜಿಲ್ಲೆಯಲ್ಲಿ ಕ್ರಿಯಾಶೀಲರಾಗಿದ್ದಾರೆ, ಬಹಳಷ್ಟು ಕವಿಗಳು, ಸಾಹಿತ್ಯ ರಚನೆಯಲ್ಲಿ ತೊಡಗಿಸಿಕೊಂಡಿದ್ದಾರೆ, ಅನೇಕರು ಸಾಹಿತ್ಯಿಕವಾಗಿ ಮುಂಚೂಣಿಯಲ್ಲಿದ್ದಾರೆ,

ಇಂದಿನ ದಿನಗಳಲ್ಲಿ ಸಾಹಿತ್ಯ ದ ಬಗ್ಗೆ ಜನರಲ್ಲಿ ಆಸಕ್ತಿ ಕಡಿಮೆ ಯಾಗತ್ತಿರುವುದಕ್ಕೆ, ವಿಷಾದ ವ್ಯಕ್ತಪಡಿಸುತ್ತ , ಕನ್ನಡ ಭಾಷೆಯನ್ನು, ಕನ್ನಡ ಸಾಹಿತ್ಯವನ್ನು ನಾವೇ ಉಳಿಸಿ ಬೆಳೆಸುವ ಸಂಕಲ್ಪವನ್ನು ಮಾಡಬೇಕು, ಎಂದು ಹೇಳಿದರು.

ಅಧ್ಯಕ್ಷತೆಯನ್ನು ವಹಿಸಿದ್ದ ಡಾ.ಮಹಾಂತೇಶ ನೆಲಾಗಣಿ ಅವರು , ಸಾಹಿತ್ಯ, ಸಾಂಸ್ಕೃತಿಕ , ಕಾರ್ಯಕ್ರಮಗಳು, ಹೆಚ್ಚು ಹೆಚ್ಚು,ನಡೆಯುವುದರಿಂದ, ಸಾಹಿತ್ಯವೂ ಬೆಳೆಯುತ್ತದೆ,ನಾವೂ ಬೆಳೆಯುತ್ತೇವೆ,ಎಂದು ಹೇಳಿದರು. ನಂತರ ನಡೆದ ಕವಿಗೋಷ್ಠಿ ಯಲ್ಲಿ ಹದಿನೈದಕ್ಕೂ ಹೆಚ್ಚಿನ ಸಂಖ್ಯೆಯಲ್ಲಿ ಕವಿ/ ಕವಿಯತ್ರಿ ಯರಾದ ಪುಷ್ಪಲತಾ ಯೋಳಭಾವಿ, ಎ.ಪಿ.ಅಂಗಡಿ, ವಿದ್ಯಾಶ್ರೀ ಹಿರೇಮಠ, ಅಕ್ಕಮಹಾದೇವಿ ಅಂಗಡಿ, ಈರಪ್ಪ ಬಿಜಲಿ, , ಬಾಳಪ್ಪ, ವೀರಾಪುರ,ಆನಂದ ಕಲಕ ಬಂಡಿ,ಅಮೀನ ಸಾಹೇಬ್ ಮುಲ್ಲಾ, ರವಿ ಹಿರೇಮನಿ, ಶಿವಪ್ರಸಾದ್ ಹಾದಿಮನಿ,ರವಿ ಸ್ವಾಮಿ ಹಿರೇಮಠ, ಮಹಾಲಕ್ಷ್ಮಿ,ಮುಂಡರಗಿ, ಮುಂತಾದವರು ಕವನ , ಚುಟುಕು ವಾಚನ ಮಾಡಿದರು. ಇದೇ ಸಂದರ್ಭದಲ್ಲಿ ಡಾಕ್ಟರೇಟ್ ಪದವಿ ಪಡೆದ ಮಹಾಂತೇಶ ನೆಲಾಗಣಿ ಅವರನ್ನು, ಕವಿಯತ್ರಿ, ಶಿಕ್ಷಕಿ, ಶ್ರೀಮತಿ ವಿದ್ಯಾಶ್ರೀ ಹಿರೇಮಠ ದಂಪತಿಗಳು ಸನ್ಮಾನಿಸಿದರು.

# ಸೂರ್ಯನಾರಾಯಣಸ್ವಾಮಿ ದೇವಾಲಯದಲ್ಲಿ ಮಾಘ ಮಾಸದ ಪೂಜಾ ಕಾರ್ಯಕ್ರಮ



**ಮುಳಬಾಗಿಲು:** ನಗರದ ಪುರಾಣ ಪ್ರಸಿದ್ಧವಾದ ಶ್ರೀ ಸೂರ್ಯನಾರಾಯಣಸ್ವಾಮಿ ದೇವಾಲಯದಲ್ಲಿ ಮಾಘ ಮಾಸದ ಪ್ರಯುಕ್ತ ಏರ್ಪಡಿಸಿದ ಪೂಜಾ ಕಾರ್ಯಕ್ರಮಗಳಲ್ಲಿ ಕಾಂಗ್ರೆಸ್ ಮುಖಂಡ ವಿ ಆದಿ ನಾರಾಯಣ ಭಾಗವಹಿಸಿದ್ದರು

ಈ ವೇಳೆ ಅವರು ಮಾತನಾಡಿ ದೇವಾಲಯ ಅತ್ಯಂತ ಪ್ರಾಚೀನವಾದದ್ದು ತನ್ನದೇ ಆದ ವೈಶಿಷ್ಟ್ಯತೆಯನ್ನು ಹೊಂದಿದೆ ಇಲ್ಲಿನ ದೇವರು ಮಹಿಮೆಯನ್ನು ಹೊಂದಿರುವ ಕಾರಣ ಹೆಚ್ಚಿನ ಭಕ್ತಾದಿಗಳು ಎಲ್ಲಿ ಆಗಮಿಸುತ್ತಾರೆ ಎಂದು ತಿಳಿಸಿದರು ದೇವಾಲಯದ ಸಮಗ್ರ ಅಭಿವೃದ್ಧಿಗೆ ಸಂಪೂರ್ಣ ಸಹಕಾರ ನೀಡುವುದಾಗಿ ತಿಳಿಸಿದರು ನಂತರ ಗಾಯತ್ರಿ ದೇವಾಲಯಕ್ಕೆ ಭೇಟಿ ನೀಡಿ ಪೂಜಾಗಳಲ್ಲಿ ಭಾಗವಹಿಸಿದ ನಂತರ ಮಾತನಾಡಿ ಬ್ರಾಹ್ಮಣ ಸಂಘದ ವತಿಯಿಂದ ನಿರ್ಮಿಸುತ್ತಿರುವ ಸಮುದಾಯ ಭವನಕ್ಕೆ ನನ್ನ ಕೈಲಾದಷ್ಟು ಆರ್ಥಿಕ ಸಹಾಯ ಮಾಡುವುದಾಗಿ ತಿಳಿಸಿದರು

ಆವಣಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ ಸಿ ನೀಲಕಂಠೇಗೌಡ. ದರಕಸ್ತು ಸಮಿತಿ ಸದಸ್ಯರಾದ ಜಮುನಳ್ಳಿ ಕೃಷ್ಣ. ಗುಜ್ಜನಹಳ್ಳಿ ಮಂಜುನಾಥ್. ತಾಲೂಕು ಬ್ರಾಹ್ಮಣ ಸಂಘ ಅಧ್ಯಕ್ಷ ಕಾಫಿಮಡಿ ಶ್ರೀನಿವಾಸ್. ಉಪಾಧ್ಯಕ್ಷ ಹೊಲ ಬಣ್ಣ. ಕಾರ್ಯದರ್ಶಿ ಹೆಚ್ಎಸ್ ಹರೀಶ್. ನಗರಸಭಾ ಸದಸ್ಯರಾದ ನಾಗರಾಜ್. ಮಹಮ್ಮದ್ ಜಬಿವುಲ್ಲಾ. ಅರ್ಚಕರಾದ ಎಂಪಿ ನಾಗಭೂಷಣಚಾರ್. ರವಿ. ಸೇರಿದಂತೆ ಇತರೆ ಮುಖಂಡರು ಹಾಜರಿದ್ದರು

# ಆಡಳಿತ ಮಂಡಳಿಯ ಚುನಾವಣೆ ಯಶಸ್ವಿ



**ಆನೇಕಲ್:** ರೇಷ್ಮೆ ಬೆಳೆಗಾರರ ಹಾಗೂ ರೈತರ ಸೇವಾ ಸಹಕಾರ ಸಂಘದ 2025–2030ನೇ ಸಾಲಿನ ಆಡಳಿತ ಮಂಡಳಿಯ ಚುನಾವಣೆಯು ಯಶಸ್ವಿಯಾಗಿ ನಡೆಯಿತು.

ಇನ್ನು 12 ನಿರ್ದೇಶಕ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ 10ಮಂದಿ ಅವಿರೋಧವಾಗಿ ಆಯ್ಕೆಗೊಂಡರು ಹಾಗೂ ಪರಿಶಿಷ್ಟ ಜಾತಿ ಮತ್ತು ಹಿಂದುಳಿದ ವರ್ಗ ಪ್ರವರ್ಗ 'ಎ' ಎರಡು ಸ್ಥಾನಕ್ಕೆ ಇದು ಚುನಾವಣೆ ನಿಗದಿಯಾಗಿತ್ತು ಆದರಂತೆ ಪರಿಶಿಷ್ಟ ಜಾತಿ ಮೀಸಲು ಸ್ಥಾನಕ್ಕೆ ಎಸ್.ವಿ ಶ್ವೇತಾ ರಾಘವೇಂದ್ರ ಮತ್ತು ಸಿ. ಗುರುಸ್ವಾಮಿ ಹಾಗೂ ಹಿಂದುಳಿದ ವರ್ಗ ಪ್ರವರ್ಗ 'ಎ' ಮೀಸಲು ಸ್ಥಾನಕ್ಕೆ ರಮೇಶ್ ಎಂ.ಜಿ ಮತ್ತು ವೆಂಕಟೇಶ್ ರವರು ಸ್ಪರ್ಧಿಸಿ ಎಂದು ಚುನಾವಣೆಯನ್ನು ಎದುರಿಸಿದರು.

2500ಕ್ಕೂ ಅಧಿಕ ಮತದಾರರನ್ನು ಹೊಂದಿರುವ ಇಂದು ನಡೆದ ಚುನಾವಣೆಯಲ್ಲಿ 804ಮಂದಿ ಮತದಾನ ಪ್ರಕ್ರಿಯಲ್ಲಿ ಪಾಲ್ಗೊಂಡಿದರು.

ಕಳೆದ ಎರಡು ಮೂರು ದಶಕಗಳಿಂದ ನಿರಂತರವಾಗಿ ನಮ್ಮ ಕುಟುಂಬವು ಸಕ್ರಿಯವಾಗಿ ರಾಜಕೀಯ ಮತ್ತು ಸಾಮಾಜಿಕ ಸೇವೆಯಲ್ಲಿ ಶ್ರಮಿಸುತ್ತಿದ್ದು ಹಿರಿಯರು ಮತ್ತು ಮುಖಂಡರ ಸಹಕಾರದಿಂದ ಸಹಕಾರಿ ಸಂಘಗಳಲ್ಲಿ ಸೇವೆಯನ್ನು ಸಲ್ಲಿಸಬೇಕು ಎಂಬ ಉದ್ದೇಶದಿಂದ ಚುನಾವಣೆಗೆ ನಿಂತಿದ್ದು ಮತದಾರರು ನಮಗೆ ಆಶೀರ್ವಾದ ಮಾಡಿ ಅರಿಸುತ್ತಾರೆ ಎಂಬ ವಿಶ್ವಾಸವಿದೆ ಈಗಾಗಲೇ ಸರ್ಜಾಪುರದ ರೇಷ್ಮೆ ಬೆಳೆಗಾರರ ಹಾಗೂ ರೈತರ ಸೇವಾ ಸಹಕಾರ ಸಂಘವು ರಾಜ್ಯದಲ್ಲಿಯೇ ಮಾದರಿ ಸಂಘವಾಗಿದ್ದು ಇನ್ನಷ್ಟು ಸಂಘವನ್ನು ಅಭಿವೃದ್ಧಿಪಡಿಸಿ ಸಹಕಾರಿ ವಲಯದಲ್ಲಿ ಉತ್ತಮವಾದ ಅಂತಹ ಯೋಜನೆಗಳನ್ನು ರೂಪಿಸಿ ರೈತರಿಗೆ ನೆರವಾಗುತ್ತೇವೆ ಎಂದು ಎಸ್.ವಿ ಶ್ವೇತಾ ರಾಘವೇಂದ್ರ ತಿಳಿಸಿದರು.

ಇನ್ನು ಅಭ್ಯರ್ಥಿಗಳ ಪರವಾಗಿ ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷರಾದ ಸಿ. ಮುನಿರಾಜು, ಹುಲ್ಲಹಳ್ಳಿ ಶ್ರೀನಿವಾಸ್, ಆಂಜಿನಪ್ಪ, ಎಡಿಎ ಜಯ್ಯಣ್ಣ, ಗೋಪಾಲ್ ರೆಡ್ಡಿ, ಮುರಳಿ ಕೃಷ್ಣ, ವಿಶ್ವನಾಥ ರೆಡ್ಡಿ, ಎಸ್ ವಿ ಟಿ ಮಂಜುನಾಥ್, ಬುಲೇಟ್ ಬಾಬು, ವಿಜಿ ಶೇಖರ್, ತಿಂಡ್ಲು ಸತೀಶ್, ಶಿವ ಶಂಕರ್, ಜಯಪ್ರಕಾಶ್ ಸೇರಿದಂತೆ ಬಿಜೆಪಿ ಪಕ್ಷದ ಮುಖಂಡರು ಪ್ರಚಾರ ನಡೆಸಿದರು.

# ದೇವಾಲಯ ಅಭಿವೃದ್ಧಿಪಡಿಸಲು ನೀಲ ನಕ್ಷೆ ಸಿದ್ಧ



ಶಿಡ್ಲಘಟ್ಟ : ತಾಲ್ಲೂಕಿನ ಪುರಾಣ ಪ್ರಸಿದ್ದ ತಲಕಾಯಲಬೆಟ್ಟದಲ್ಲಿನ ಶ್ರೀಭೂನೀಳಾ ಸಮೇತ ವೆಂಕಟರಮಣಸ್ವಾಮಿ ದೇವಾಲಯಕ್ಕೆ ರಾಜಗೋಪುರ, ಧ್ವಜಸ್ತಂಭ, ಗಣಪತಿ ಮಂಟಪ, ಅಶ್ವತ್ಥಕಟ್ಟೆಯನ್ನು ಸುಮಾರು 6 ಕೋಟಿ ರೂ.ಗಳ ವೆಚ್ಚದಲ್ಲಿ ಅಭಿವೃದ್ಧಿಪಡಿಸಲು ನೀಲ ನಕ್ಷೆ ಸಿದ್ಧವಾಗಿದೆ.

ಪಾಪಾಗ್ನಿ ನದಿ ತಟದಲ್ಲಿ ನೆಲೆಸಿರುವ, ತಿರುಪತಿ ತಿಮ್ಮಪ್ಪನ ಬೆಟ್ಟದ ಸಾಲಿಗೆ ಹೊಂದಿಕೊಂಡ ದಕ್ಷಿಣ ಕಾಶಿ ಎಂದೇ ಪ್ರಸಿದ್ದಿಯಾದ ತಲಕಾಯಲಬೆಟ್ಟದಲ್ಲಿ ನೆಲೆಸಿರುವ ಶ್ರೀವೆಂಕಟರಮಣಸ್ವಾಮಿ ದೇವಾಲಯವು ಮುಜರಾಯಿ ಇಲಾಖೆಗೆ ಸೇರಿದ್ದು ತಾಲ್ಲೂಕಿನ ಏಕೈಕ ಗ್ರೇಡ್–1 ದೇವಾಲಯ ಇದಾಗಿದೆ.

ನೂತನವಾಗಿ ದೇವಾಲಯದ ರಚನೆಯಾದ ವ್ಯವಸ್ಥಾಪನಾ ಸಮಿತಿಯು ದೇವಾಲಯದ ಅಭಿವೃದ್ಧಿ ಮತ್ತು ಭಕ್ತರಿಗೆ ಇನ್ನಷ್ಟು ಮೂಲ ಸೌಕರ್ಯಗಳನ್ನು ಕಲ್ಪಿಸಲು ಮುಂದಾಗಿದ್ದು ನೀಲ ನಕ್ಷೆ ಸಿದ್ದಪಡಿಸಿದೆ, ಸರ್ಕಾರ ಮತ್ತು ದಾನಿಗಳ ನೆರವಿನಿಂದ ಈ ಎಲ್ಲಾ ಮೂಲ ಅಭಿವೃದ್ಧಿ ಸೌಕರ್ಯಗಳನ್ನು ಕಲ್ಪಿಸಲು ಮುಂದಾಗಿದೆ.

ರಾಜಗೋಪುರ ನಿರ್ಮಾಣಕ್ಕೆ ನೆರವು ನೀಡುವಂತೆ ಮುಜರಾಯಿ ಇಲಾಖೆ ಸಚಿವರಾದ ರಾಮಲಿಂಗಾರೆಡ್ಡಿ ಅವರಿಗೆ ವ್ಯವಸ್ಥಾಪನಾ ಸಮಿತಿಯಿಂದ ಮನವಿ ಮಾಡಿದ್ದು, 2 ಕೋಟಿ ರೂ.ಗಳ ಅನುದಾನ ಬಿಡುಗಡೆ ಮಾಡುವ ಭರವಸೆ ನೀಡಿದ್ದಾರೆ.

ಇನ್ನು ವ್ಯವಸ್ಥಾಪನಾ ಸಮಿತಿಯಲ್ಲೂ ಸುಮಾರು 2 ಕೋಟಿ ಅನುದಾನವಿದ್ದು, ಅದರಲ್ಲೂ ಗರಿಷ್ಠ ಶೇ 50ರಷ್ಟು ಅನುದಾನವನ್ನು ಕಾಮಗಾರಿಗಳಿಗೆ ಬಳಸಿ ಕೊಳ್ಳಬಹುದಾಗಿದೆ,ಜತೆಗೆ ದಾನಿಗಳು, ಭಕ್ತರು, ಸಚಿವರು, ಶಾಸಕರ, ವಿಧಾನಪರಿಷತ್ ಸದಸ್ಯರ, ಸಂಸದರ ಅನುದಾನ ಬಳಸಿಕೊಳ್ಳಲು ಚಿಂತಿಸಿದ್ದು, ಈಗಾಗಲೆ ಅವರೆಲ್ಲರನ್ನೂ ಸಂಪರ್ಕಿಸಿರುವ ವ್ಯವಸ್ಥಾಪನಾ ಸಮಿತಿ ಮುಖ್ಯಸ್ಥರಿಗೆ ನೆರವು ನೀಡುವ ಭರವಸೆ ನೀಡಿದ್ದಾರೆ.

ಫೆ.12ರಂದು ದೇವಾಲಯದ ಬ್ರಹ್ಮರಥೋತ್ಸವ ನಡೆಯಲಿದ್ದು, ಅಂದು ಈ ಎಲ್ಲಾ ಅಭಿವೃದ್ಧಿ ಕಾಮಗಾರಿಗಳಿಗೂ ಸಚಿವರಾದ ರಾಮಲಿಂಗಾರೆಡ್ಡಿ, ಉಸ್ತುವಾರಿ ಸಚಿವರಾದ ಡಾ.ಎಂ.ಸಿ.ಸುಧಾಕರ್, ಶಾಸಕರಾದ ಬಿ.ಎನ್. ರವಿಕುಮಾರ್ ಅವರಿಂದ ಭೂಮಿ ಪೂಜೆ ನೆರವೇರಿಸುವರು.

ವ್ಯವಸ್ಥಾಪನಾ ಸಮಿತಿಯ ಅಧ್ಯಕ್ಷ ಡಿ.ಪಿ.ನಾಗರಾಜ್ ಮಾತನಾಡಿ, ದೇವಾಲಯದ ಅಭಿವೃದ್ಧಿ ಜತೆಗೆ ಭಕ್ತರಿಗೆ ಇನ್ನಷ್ಟು ಸವಲತ್ತು ಒದಗಿಸಲು ನಮ್ಮ ವ್ಯವಸ್ಥಾಪನಾ ಸಮಿತಿಯಿಂದ 6 ಕೋಟಿ ರೂ.ಗಳ ವೆಚ್ಚದಲ್ಲಿ ಅಭಿವೃದ್ಧಿ ಕಾರ್ಯ ಕೈಗೊಳ್ಳಲು ಯೋಜನೆ ರೂಪಿಸಲಾಗಿದೆ. ಸರ್ಕಾರ ಹಾಗು ದಾನಿಗಳಿಂದ ಆರ್ಥಿಕ ನೆರವು ಕೇಳಲಾಗಿದೆ ,ಈ ದೇವಾಲಯದ ಭಕ್ತರು ರಾಜ್ಯದ ಉದ್ದಗಲಕ್ಕೂ ಇದ್ದು, ಅವರನ್ನು ಸಂಪರ್ಕಿಸಿ ಅವರಿಂದ ನೆರವು ಪಡೆದು ಮುಂದಿನ 2 ವರ್ಷದಲ್ಲಿ ಈ ಎಲ್ಲಾ ಅಭಿವೃದ್ಧಿ ಕಾರ್ಯಗಳನ್ನು ಪೂರ್ಣಗೊಳಿಸಲು ಉದ್ದೇಶಿಸಿದೆ ಎಂದರು.

# ಮೋರಾರ್ಜಿ ವಸತಿ ಶಾಲೆಗೆ ಕಂಪ್ಯೂಟರ್‌ಗಳ ವಿತರಣೆ




**ಚೇಳೂರು:** ಚೇಳೂರು ತಾಲ್ಲೂಕಿನ ಗಡಿಗವಾರಹಳ್ಳಿ ಸಮಾಜ ಕಲ್ಯಾಣ ಇಲಾಖೆಯ ಮೋರಾರ್ಜಿ ದೇಸಾಯಿ ವಸತಿ ಶಾಲೆಗೆ ಬೆಂಗಳೂರು ನಗರದ ಕೂಲಿಂಗ್ಸ್ ಎರೋಸ್ಪೇಸ್ ಗ್ರೂಪ್. ವತಿಯಿಂದ 10 ಲಕ್ಷರೂ ಬೆಲೆ ಬಾಳುವ ಕಂಪ್ಯೂಟರ್‌ಗಳು. ಸೇರಿದಂತೆ ಇದಕ್ಕೆ ಸಂಬಂಧಿಸಿದ ಎಲ್ಲಾ ಭಾಗಗಳು ದೇಣಿಗೆಯಾಗಿ ವಸತಿ ಶಾಲೆಯ ನೂರಾರು ಮಕ್ಕಳ ಉತ್ತಮ ವಿದ್ಯಾಭ್ಯಾಸಕ್ಕಾಗಿ ಮುಂದಿನ ಉಜ್ವಲ ಭವಿಷ್ಯತ್‌ಗಾಗಿ ನೀಡಿದರು.

20 ಕಂಪ್ಯೂಂಟರ್‌ಗಳ ಕೊಠಡಿ ಇತರೆ ಕೊಠಡಿಗಳನ್ನು ಬೆಂಗಳೂರು ನಗರದ ಕೂಲಿಂಗ್ಸ್ ಎರೋಸ್ಪೇಸ್ ವತಿಯಿಂದ ಗಿಡಗಳಿಗೆ ನೀರು ಹಾಕಿ ನೆಡುವ ಮೂಲಕ ಚಾಲನೆ ನೀಡಿದರು.

ನಂತರ ಕಾರ್ಯಕ್ರಮಗಳನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿದರು ಸಮಾರಂಭದಲ್ಲಿ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಅದ್ದೂರಿಯಾಗಿ ನಡೆಸಿಕೊಟ್ಟರು.

ಕಾರ್ಯಕ್ರಮದಲ್ಲಿ ಕ್ರೆ ಸ್ ಕಾರ್ಯನಿರ್ವಾಹಕ ಅಧಿಕಾರಿ ಪಿ.ಎಸ್.ಕಾಂತರಾಜ್ ಮಾತನಾಡಿ ಹೆತ್ತ ತಂದೆ, ತಾಯಿ.ಗುರು ಹಿರಿಯರನ್ನು ಗೌರವಿಸುವುದನ್ನು ಬಾಲ್ಯದಿಂದಲ್ಲೇ ಮೈಗೂಡಿಸಿಕೊಂಡಾಗ ಮಾತ್ರ ಸಮಾಜದಲ್ಲಿ ಉತ್ತಮ ಸುಸಂಸ್ಕೃತರಾಗಲು ಸಾಧ್ಯ ಬಡತನ ಎಲ್ಲಿ ಇರುತ್ತೋ ಅಲ್ಲಿ ಓದಿಗೆ ಅವಕಾಶ ಇರುತ್ತೆ ಐಎಎಸ್, ಐಪಿಎಸ್. ಸೇರಿದಂತೆ ಬಹುತೇಕ ಉನ್ನತ ಹುದ್ದೆಗಳಲ್ಲಿ ನಗರ ಪ್ರದೇಶದ ವಿದ್ಯಾರ್ಥಿಗಳಗಿಂತ ಗ್ರಾಮೀಣ ಪ್ರದೇಶಗಳ ಬಡವಿದ್ಯಾರ್ಥಿಗಳೇ ಹೆಚ್ಚಾಗಿದ್ದಾರೆ ಎಂದ ಅವರು ಈ ಹಿಂದೆ ಮಕ್ಕಳಿಗೆ ಊಟ ತಿನ್ನಿಸಲು ಪ್ರಕೃತಿಯಲ್ಲಿನ ಗಿಡ ಮರಗಳನ್ನ ಆಕಾಶದಲ್ಲಿನ ಚಂದ್ರನನ್ನು ತೋರಿಸುತ್ತಿದ್ದರು ಆದರೆ ಇಂದಿನ ಯಾಂತ್ರಿಕ ಮತ್ತು ತಂತ್ರಜ್ಞಾನ ಯುಗದಲ್ಲಿ ಪೋಷಕರು ಮಕ್ಕಳಿಗೆ ಮೊಬೈಲ್ ತೋರಿಸುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ ಎಂದರು.

ವಸತಿ ಶಾಲೆಗೆ ನೀಡಿದ ಕಂಪ್ಯೂಟರ್‌ಗಳು ಮತ್ತು ವಸ್ತು ಪ್ರದರ್ಶನ ಕುರಿತು ಮಕ್ಕಳು ಆಂಗ್ಲ ಭಾಷೆಯಲ್ಲಿ ಬೆಂಗಳೂರು ಕೂಲಿಂಗ್ಸ್ ಎರೋಸ್ಪೇಸ್ ಗ್ರೂಪ್ ನವರಿಗೆ ಮಾಹಿತಿ ನೀಡಿ ಶಹಬ್ಬಾಸ್‌ಗಿರಿ ಪಡೆದುಕೊಂಡು ಬಂದ ಆತಿಥಿಗಳು ಶಾಲೆಯ ಬಗ್ಗೆ ಆಡಳಿತ. ಶಾಲಾ ಸ್ವಚ್ಛತೆ ಬಗ್ಗೆ ಶಿಕ್ಷರ ವೃಂದದ ಮೇಲೆ ಮೆಚ್ಚುಗೆ ವ್ಯಕ್ತಪಡಿಸಿದರು. ಸಮಾರಂಭದಲ್ಲಿ ಕ್ರೆ ಸ್ ಎ.ಡಿ. ಲಕ್ಷ?ಮಣ ಬಬಲಿ. ಎ.ಇ. ಮಹದೇವಪ್ಪ. ನಿರ್ದೇಶಕ ಪರಮಜೀತ್‌ಬಾಟ್ಯ. ಆದಿಶೇಷು. ಅಮಿತ್ ಸಾರ್ವಕರ್. ಪ್ರದೀಪ್ ಬಚ್ಚಾಲ್. ಎಸ್.ಜಿ.ಪ್ರದೀಪ್. ಸಮರ್ಥೇಟ್. ಪ್ರಾಜೆಕ್ಟ್ ಮ್ಯಾನೇಜರ್ ಜಿ.ಎಂ. ಮುನೇಗೌಡ. ವೇಲು. ವಸತಿ ಶಾಲೆಯ ಪ್ರಾಶುಂಪಾಲ ಸಿ.ಕೆ.ಚಂದ್ರಪ್ಪ. ಶಿಕ್ಷಕ ವೃಂದ.ಸಿಬ್ಬಂದಿ ವರ್ಗ ಭಾಗವಹಿಸಿದ್ದರು.

# ದೆಹಲಿ ಚುನಾವಣೆಯಲಿ ಬಿಜೆಪಿ ಭರ್ಜರಿ ಗೆಲುವು ಕಾರ್ಯಕರ್ತರ ಸಂಭ್ರಮ



**ಶಿಡ್ಲಘಟ್ಟ:** ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಭರ್ಜರಿ ಗೆಲುವು ಸಾಧಿಸಿರುವ ಹಿನ್ನಲೆಯಲ್ಲಿ ನಗರದ ಬಿಜೆಪಿ 'ಸೇವಾ ಸೌಧ' ಕಚೇರಿ ಮುಂದೆ ಪಕ್ಷದ ಮುಖಂಡರು, ಕಾರ್ಯಕರ್ತರು ಪಟಾಕಿ ಸಿಡಿಸಿ ಪರಸ್ಪರ ಸಿಹಿ ಹಂಚಿ ವಿಜಯೋತ್ಸವವನ್ನು ಸಂಭ್ರಮದಿಂದ ಆಚರಣೆ ಮಾಡಿದರು.

ಗ್ರಾಮಾಂತರ ಮಂಡಲ ಅಧ್ಯಕ್ಷರಾದ ಸೀಕಲ್ ಆನಂದ್ ಗೌಡ ಮಾತನಾಡಿ,ಕರ್ನಾಟಕ ಹಾಗು ತೆಲಂಗಾಣ ರಾಜ್ಯಗಳಲ್ಲಿ ಉಚಿತ ಭಾಗ್ಯಗಳನ್ನು ಆಮಿಷಗಳನ್ನು ಕೊಟ್ಟು ಕಾಂಗ್ರೆಸ್ ಪಕ್ಷ ಅಧಿಕಾರದ ಚುಕ್ಕಾಣಿ ಹಿಡಿದು ರಾಜ್ಯಗಳನ್ನು ದಿವಾಳಿ ಮಾಡುವ ನಿಟ್ಟಿನಲ್ಲಿ ಮುಂದಾಗಿದೆ, ಅದರ ವಿರುದ್ಧವಾಗಿ ಯಾವುದೇ ಉಚಿತ ಭಾಗ್ಯಗಳನ್ನು ಘೋಷಣೆ ಮಾಡದೇ ಪ್ರಧಾನಿ ನರೇಂದ್ರ ಮೋದಿ ಅವರು ನೀಡಿರುವ ದೂರದೃಷ್ಟಿ ಯೋಜನೆಗಳಿಂದ ದೆಹಲಿಯಲ್ಲಿ ಬಿಜೆಪಿ ಜಯಭೇರಿ ಬಾರಿಸಿದೆ ಎಂದು ತಿಳಿಸಿದರು.

ದೆಹಲಿಯಲ್ಲಿ ಸತತವಾಗಿ 27 ವರ್ಷಗಳ ಕಾಲ ಅನ್ಯ ಪಕ್ಷದವರು ಸರ್ಕಾರ ನಡೆಸಿ ಯಾವುದೇ ಅಭಿವೃದ್ಧಿ ಕೆಲಸಗಳನ್ನು ಮಾಡದೆ ಇರುವುದರಿಂದ ಮತದಾರರು ತಕ್ಕ ಉತ್ತರ ನೀಡುವ ಮೂಲಕ ಬಿಜೆಪಿಯನ್ನು ಗೆಲ್ಲಿಸಿದ್ದಾರೆ ಎಂದರು.

ಚುನಾವಣೆಯಲ್ಲಿ ಎಎಪಿ ಮತ್ತು ಕಾಂಗ್ರೆಸ್, ಪಕ್ಷದ ಅಭ್ಯರ್ಥಿಗಳನ್ನು ಹಿಂದಿಕ್ಕಿ ಬಿಜೆಪಿಯು ಅತ್ಯಧಿಕ ಮತಗಳನ್ನು ಪಡೆದು ಏಕೈಕ ಬಹುದೊಡ್ಡ ಪಕ್ಷವಾಗಿ ಹೊರ ಹೊಮ್ಮಿರುವುದು ಪಕ್ಷದ ಕಾರ್ಯಕರ್ತರಲ್ಲಿ ಸ್ಪೂರ್ತಿ ಹೆಚ್ಚಿಸಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿನಗರಸಭೆ ಸದಸ್ಯ ನಾರಾಯಣಸ್ವಾಮಿ, ಬಿಜೆಪಿ ನಗರ ಘಟಕದ ಅಧ್ಯಕ್ಷ ನರೇಶ್,ಡಾ.ಸತ್ಯನಾರಾಯಣ ರಾವ್, ಬಳೆ ಜಗದೀಶ್,ಮಧು, ಅತಾವುಲ್ಲ,ರಾಮಚಂದ್ರ, ಪುರುಷೋತ್ತಮ್,ರಾಮಾಂಜಿ, ಮೋಹನ್ ಹಾಗು ಬಿಜೆಪಿ ಕಾರ್ಯಕರ್ತರು ಸಂಭ್ರಮಾಚರಣೆಯಲ್ಲಿ ಪಾಲ್ಗೊಂಡಿದ್ದರು.

# ವೇಣುಗೋಪಾಲಸ್ವಾಮಿ ಬ್ರಹ್ಮರಥೋತ್ಸವ



**ಶಿಡ್ಲಘಟ್ಟ:** ಶಿಡ್ಲಘಟ್ಟದ ಊರ ದೇವರೆಂದೇ ಖ್ಯಾತವಾದ ನಗರದ ಪುರಾತನ ಶ್ರೀ ವೇಣುಗೋಪಾಲಸ್ವಾಮಿ ದೇವಾಲಯದಲ್ಲಿ ಬ್ರಹ್ಮರಥೋತ್ಸವ ಸಹಿತ ಎಲ್ಲಾ ಕೈಂಕರ್ಯಗಳು ಪಾಂಚರಾತ್ರಾಗಮ ಪದ್ಧತಿಯಲ್ಲಿ ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು.

ತಹಶೀಲ್ದಾರ್ ಬಿ.ಎನ್.ಸ್ವಾಮಿ ರಥೋತ್ಸವಕ್ಕೆ ಚಾಲನೆ ನೀಡಿದರು.

ತಮಟೆ ವಾದನ, ಮಂಗಳ ವಾದ್ಯಗಳ ಮಧ್ಯೆ ರಥವನ್ನು ಅಶೋಕ ರಸ್ತೆಯಲ್ಲಿ ಮೆರವಣಿಗೆ ಮಾಡಲಾಯಿತು. ಮಹಿಳೆಯರು ತೆಂಗಿನಕಾಯಿ ಒಡೆದು, ಪೂಜೆ ಸಲ್ಲಿಸಿ, ಆರತಿ ಬೆಳಗಿದರು. ಮಯೂರ ವೃತ್ತದಲ್ಲಿ ಪಾನಕ ಮತ್ತು ಹೆಸರುಬೇಳೆ ಕೋಸಂಬರಿ ಹಂಚಲಾಯಿತು.


ಶ್ರೀವೇಣುಗೋಪಾಲಸ್ವಾಮಿ ದೇವಾಲಯದಲ್ಲಿ ಪೂಜಾ ಕಾರ್ಯಕ್ರಮಗಳು ಒಂದು ವಾರದ ಕಾಲ ನಡೆಯಲಿದ್ದು, ನಗರದ ಎಲ್ಲ ಸಮುದಾಯಗಳವರೂ ವಿವಿಧ ಪೂಜಾ ಕೈಂಕರ್ಯಗಳಲ್ಲಿ ಭಾಗಿಯಾಗುವುದು ವಿಶೇಷವಾಗಿದೆ.

ನಗರ ಸೇರಿದಂತೆ ಸುತ್ತಮುತ್ತಲಿನ ಗ್ರಾಮಸ್ಥರು ರಥೋತ್ಸವದಲ್ಲಿ ಪಾಲ್ಗೊಂಡಿದ್ದರು.

ಕಾಂಗ್ರೆಸ್ ಮುಖಂಡರಾದ ಬಿ.ವಿ.ರಾಜೀವ್ ಗೌಡ, ಆಂಜಿನಪ್ಪ(ಪುಟ್ಟು), ಮಾಜಿ ಶಾಸಕ ಎಂ.ರಾಜಣ್ಣ,

ಗ್ರಾಮಾಂತರ ಮಂಡಲ ಬಿಜೆಪಿ ಅಧ್ಯಕ್ಷ ಆನಂದಗೌಡ, ಶ್ರೀವೇಣುಗೋಪಾಲಸ್ವಾಮಿ ದೇವಾಲಯ ಅಭಿವೃದ್ಧಿ ಸಮಿತಿಯ ಬಳೆರಘು, ಲಕ್ಷ್ಮೀನಾರಾಯಣ, ಆನಂದ, ಅರ್ಚಕ ವೈ.ಎನ್. ದಾಶರಥಿಭಟ್ಟಾಚಾರ್ಯ, ಶ್ರೀ ವೇಣುಗೋಪಾಲಸ್ವಾಮಿ ಸೇವಾ ಮತ್ತು ಅಭಿವೃದ್ಧಿ ಟ್ರಸ್ಟ್ ಸದಸ್ಯರು ಹಾಜರಿದ್ದರು.

# ಠಾಣೆಯಲ್ಲಿದ್ದ ವಾಹನ ಕದ್ದು, ಸಿಕ್ಕಿ ಬಿದ್ದ ಕಳ್ಳರು!



**ವರದಿ:** ರಾಮಸಮುದ್ರ
**ಎಸ್.ವೀರಭದ್ರಸ್ವಾಮಿ**

**ಚಾಮರಾಜನಗರ:** ಕಳ್ಳರು, ದರೋಡೆಕೋರರಿಗೆ ಜನಸಾಮಾನ್ಯರ ಮನೆಯಾದರೇನು, ಪೊಲೀಸರ ಮನೆಯಾದರೇನೂ ಸಿಕ್ಕಿಧ್ದು ಗೋರೊದು ಸಾಮಾನ್ಯ ಆದರೆ ರಾಜಾರೋಷವಾಗಿ ಪ್ರಕರಣವೊಂದರಲ್ಲಿ ಠಾಣೆಯೊಂದರಲ್ಲಿ ಜಪ್ತಿಯಾಗಿದ್ದ ವಾಹನ ಕದ್ದು ಇದೀಗ ಸಿಕ್ಕಿಬಿದ್ದಿದ್ದಾರೆ.

ಚಾಮರಾಜನಗರದ ಅರ್ಪಾಜ್,ಇರ್ಪಾನ್ ಎಂಬ ಆರೋಪಿಗಳನ್ನ ಪಟ್ಟಣ ಪೊಲೀಸ್ ಸಿಬ್ಬಂದಿಗಳ ಸಹಕಾರದಿಂದ ಸೆನ್ ಪೊಲೀಸರು ಜೈಲಿಗಟ್ಟಿದ್ದಾರೆ.

ಚಾಮರಾಜನಗರದ ಸಿಇಎನ್ ಪೊಲೀಸ್ ಠಾಣೆಯಲ್ಲಿ ಭಾನುವಾರತಡರಾತ್ರಿ 2 ಗಂಟೆ ಸುಮಾರಿಗೆ ಪೊಲೀಸ್ ಠಾಣೆಗೆ ನುಗ್ಗಿದ ಕಳ್ಳ ಠಾಣೆಯಲ್ಲಿ ನಿಲ್ಲಿಸಿದ್ದ ಬೈಕ್ ಸಮೇತ ಪರಾರಿಯಾಗಿದ್ದನು.ಇದು ಸಿಸಿ ಕ್ಯಾಮರಾದಲ್ಲಿ ದೃಶ್ಯ ಸೆರೆಯಾಗಿತ್ತು.ಈ ಬೈಕ್ ಎನ್‌ಡಿ ಪಿಎಸ್ ಪ್ರಕರಣದಲ್ಲಿ ವಶಕ್ಕೆ ಪಡೆದುಕೊಂಡಿದ್ದ ಬೈಕ್ ಆಗಿದ್ದು. ಪ್ರಕರಣ ದಾಖಲಿಸಿಕೊಂಡು ಸ್ಥಳೀಯ ಪೊಲೀಸ್ ಸಿಬ್ಬಂದಿ ಕ್ರೈಂ ವಿಭಾಗದ ಷಣ್ಮೂರ್ತಿ ಹಾಗೂ ಮೋಹನ್ ಅವರ ನೆರವಿನಿಂದ ಎಸ್ಕೇಪ್ ಆಗಿರುವ ಕಳ್ಳನನ್ನ ದಿನ ಮುಗಿಯೊದರೊಳಗಾಗಿ ಹುಡುಕಿ ಬಂಧಿಸಿ ಸೆನ್ ಇನ್ಸ್ ಪೆಕ್ಟರ್ ಸಾಗರ್ ಅವರು ಜೈಲಿಗಟ್ಟಿದ್ದಾರೆ.

# ಗುರುಕುಲದಲ್ಲಿ ವಿದ್ಯಾಗಣಪತಿ ಪ್ರತಿಷ್ಠಾಪನೆ



**ಕುಕನೂರು:** ಪಟ್ಟಣದ ವಿದ್ಯಾನಂದ ಗುರುಕುಲ ಪ್ರಾಂಗಣದಲ್ಲಿ ನೂತನ ವಿದ್ಯಾಗಣಪತಿ ದೇವತಾ ಪ್ರತಿಷ್ಠಾಪನೆ ಮತ್ತು ಕಳಶಾರೋಹಣ ಕಾರ್ಯಕ್ರಮ ನಡೆಯಿತು.

ಮೂರ್ತಿ ಪ್ರತಿಷ್ಠಾಪನೆ ನಿಮಿತ್ತ ಗಣಪತಿ ಹೋಮ ಹವನ ಮಾಡಲಾಯಿತು. ಈ ಸಂದರ್ಭದಲ್ಲಿ ವಿದ್ಯಾನಂದ ಗುರುಕುಲ ಶಿಕ್ಷಣ ಸಂಸ್ಥೆಯ ವಿಶ್ವಸ್ತ ಮಂಡಳಿಯ ಅಧ್ಯಕ್ಷರು, ಕಾರ್ಯದರ್ಶಿಗಳು, ಸದಸ್ಯರು ಉಪಸ್ಥಿತರಿದ್ದರು.

# ಮುಚ್ಚಿದ ಮಳಿಗೆಗಳ ಮುಂದೆ ಅಂಗಡಿ ತೆರೆದು ವ್ಯಾಪಾರ..!

## "ಪ್ರಾಧಿಕಾರಕ್ಕೆ ಪಂಗನಾಮ: ಅಧಿಕಾರಿಗಳಿಗೆ ಹಣದ ಉಗಮ"

**ವರದಿ: ಪ್ರಕಾಶ್ ಕಾಮಗೆರೆ**

**ಹನೂರು:** ಕೋಟಿ ಒಡೆಯ ಮಾದಪ್ಪನ ನಾಡಿನಲ್ಲಿ ಪವಾಡ ಪುರುಷನೆಂಬ ಬಿರುದಾಂಕಿತ ಮಾದಪ್ಪನನ್ನೇ ಮೀರಿಸಿ ಪವಾಡ ಮೆರೆದು ಲೂಟಿ ಹೊಡೆಯುತ್ತಿರುವ ಅಧಿಕಾರಿಗಳ ಅಟ್ಟಹಾಸ ಹೇಳ ತೀರದಾಗಿದೆ.

ಇದಕ್ಕೊಂದು ತಾಜಾ ಉದಾಹರಣೆ ಎಂದರೆ ಮಲೆ ಮಹದೇಶ್ವರ ಬೆಟ್ಟ ದೇಗುಲದ ಮುಂಭಾಗದಲ್ಲಿರುವ ಮೂಡಲ ಮಲೆ ವಾಣಿಜ್ಯ ಸಂಕೀರ್ಣದಲ್ಲಿನ 22 ಮುಚ್ಚಿದ ಮಳಿಗೆಗಳ ಮುಂದೆ ಯಾವುದೇ ಬಾಡಿಗೆಯಿಲ್ಲದೆ ಕಳೆದ ಏಳೆಂಟು ವರ್ಷಗಳಿಂದ ಬಿಟ್ಟಿಯಾಗಿ ಅಂಗಡಿಯಿಟ್ಟು ವ್ಯಾಪಾರ ಮಾಡಲು ಅನುವು ಮಾಡಿಕೊಟ್ಟ ಅಧಿಕಾರಿಗಳು ಒಳಗೊಳಗೆ ವರ್ತಕರಿಂದ ಲಕ್ಷಾಂತರ ರೂ ಪಡೆಯುವ ಮೂಲಕ ಪ್ರಾಧಿಕಾರಕ್ಕೆ ಪಂಗನಾಮ ಹಾಕಿ ತಮಗೆ ಹಣದ ಉಗಮ ಆಗುವ ರೀತಿ ವ್ಯವಸ್ಥೆ ಮಾಡಿಕೊಂಡಿರುವುದು ರಾಜಾರೋಷವಾಗಿ ನಡೆದುಕೊಂಡೇ ಬಂದಿದ್ದರೂ ಪ್ರಶ್ನಿಸುವವರೇ ಇಲ್ಲವಾಗಿದೆ.

ಮ.ಬೆಟ್ಟ ದೇಗುಲದ ಮುಂದಿನ ರಂಗ ಮಂದಿರದ ಮುಂಭಾಗ ಭಕ್ತಾದಿಗಳು ವಿಶ್ರಮಿಸಲು ನಿರ್ಮಿಸಿರುವ ಬೃಹತ್ ವಿಶ್ರಾಂತಿ ತಾಣದ ಮೇಲ್ಛಾವಣಿ ಕಾಮಗಾರಿ ನಡೆಯುತ್ತಿದ್ದ



ವೇಳೆ 2016 ರಲ್ಲಿ ಸುಮಾರು ಒಂದೂವರೆ ವರ್ಷಗಳ ಕಾಲ ಈ ಅಂಗಡಿಗಳಿಗೆ ಸಂಪರ್ಕ ಕಲ್ಪಿಸುವ ಪೊಲೀಸ್ ಠಾಣೆ ರಸ್ತೆ, ಪಾರ್ಕಿಂಗ್ ಸ್ಥಳದ ರಸ್ತೆ ಹಾಗೂ ತಮಿಳುನಾಡು ಕಡೆಯಿಂದ ಬರುವ ರಸ್ತೆಗಳಿಗೆ ಬ್ಯಾರಿಕೇಡ್ ಅಳವಡಿಸಿ ಜನರ ಓಡಾಟವನ್ನು ನಿರ್ಬಂಧಿಸಲಾಗಿತ್ತು.

ಈ ಹಿನ್ನೆಲೆಯಲ್ಲಿ ತಮಗೆ ವ್ಯಾಪಾರವಿಲ್ಲದೆ ನಷ್ಟವುಂಟಾಗಿರುವುದರಿಂದ ಆ ಸಂದರ್ಭದಲ್ಲಿನ ಬಾಡಿಗೆಯನ್ನು ಕಡಿತಗೊಳಿಸುವಂತೆ ಕೋರಿ ಅಲ್ಲಿನ ವರ್ತಕರು ಹೈಕೋರ್ಟ್ ಮೆಟ್ಟಲೇರಿದ್ದರು. ವರ್ತಕರ ಮನವಿಗೆ ಸ್ಪಂಧಿಸಿದ ನ್ಯಾಯಾಲಯ ಹತ್ತು ತಿಂಗಳ ಬಾಡಿಗೆಯನ್ನು ಕಡಿತಗೊಳಿಸಲು ಪ್ರಾಧಿಕಾರಕ್ಕೆ ಆದೇಶ ನೀಡಿತು.

ಇದಾದ ತರುವಾಯ ಕಾಮಗಾರಿ ಮುಗಿದು 2017 ರಲ್ಲಿ ಮುಚ್ಚಿದ್ದ ಎಲ್ಲಾ ರಸ್ತೆಗಳ ಬ್ಯಾರಿಕೇಡ್‌ಗಳನ್ನು ತೆರವುಗೊಳಿಸಿ ಮುಕ್ತ ಸಂಚಾರಕ್ಕೆ ಅನುವು ಮಾಡಿಕೊಡಲಾಯಿತು. ನಂತರ ಎಂದಿನಂತೆ ವ್ಯಾಪಾರ ವಹಿವಾಟುಗಳು ನಡೆಯುತ್ತಿದ್ದರೂ ವ್ಯಾಪಾರಿಗಳು ಬಾಡಿಗೆ ನೀಡಲು ಹಿಂದೇಟು ಹಾಕಿದರು. ನಾನಾ ನೆಪವೊಡ್ಡಿ ಮತ್ತೊಮ್ಮೆ ಕೊಳ್ಳೇಗಾಲದ ಜೆಎಂಎಫ್‌ಸಿ ನ್ಯಾಯಾಲಯದಲ್ಲಿ ದಾವೆ ಹೂಡಿದಾಗ ನ್ಯಾಯಾಲಯ ಯಥಾಸ್ಥಿತಿ ಕಾಪಾಡುವಂತೆ ತಡೆಯಾಜ್ಞೆ ನೀಡಿದೆಯೆನ್ನಲಾಗಿದ್ದು ನಂತರದಲ್ಲೂ ಬಾಡಿಗೆ ಪಾವತಿಸದ ಕಾರಣ 2021 ರಲ್ಲಿ ಅಂದಿನ ಪ್ರಾಧಿಕಾರದ ಕಾರ್ಯದರ್ಶಿಯಾಗಿದ್ದ ಜಯವಿಭವಸ್ವಾಮಿಯವರು ಎಲ್ಲಾ 22 ಅಂಗಡಿ ಮಳಿಗೆಗಳನ್ನು ಮುಚ್ಚಿ ಬೀಗ ಜಡಿದರು.


ಇದಾಗಿ ಅವರ ನಿರ್ಗಮನದ ತರುವಾಯ ಐದಾರು ತಿಂಗಳ ನಂತರದಲ್ಲಿ ಬಂದ ಪ್ರಾಧಿಕಾರದ ಕಾರ್ಯದರ್ಶಿ ಮತ್ತಿತರೆ ಆಯಕಟ್ಟಿನ ಅಧಿಕಾರಿಗಳನ್ನು ಸರಿಪಡಿಸಿಕೊಂಡ ವರ್ತಕರು ಮುಚ್ಚಿದ ಮಳಿಗೆ ಮುಚ್ಚಿದ ಹಾಗೆ ಇದ್ದರೂ ಅದರ ಮುಂದೆ ಮೇಲ್ಛಾವಣಿ ಅಳವಡಿಸಿಕೊಂಡು ಎಂದಿನಂತೆ ಲಕ್ಷಾಂತರ ರೂಪಾಯಿ ಬಂಡವಾಳ ಹೂಡಿ ಸಾಮಾನು ಸರಂಜಾಮುಗಳನ್ನು ಪೇರಿಸಿಕೊಂಡು ವ್ಯಾಪಾರ ವಹಿವಾಟಿನಲ್ಲಿ ತೊಡಗಿದರು.

ಇದು ಅಂದಿನಿಂದ ಮುಂದುವರೆದು ಸುಮಾರು ಎಂಟು ವರ್ಷಗಳಿಂದ ಇಲ್ಲಿಯ ತನಕ ನಡೆದುಕೊಂಡು ಬರುತ್ತಿದ್ದರೂ ಈ ವಿವಾಧಕ್ಕೆ ತಾರ್ಕಿಕ ಅಂತ್ಯ ಕಾಣಿಸಿದರೆ ಎಲ್ಲಿ ತಮ್ಮ ಆದಾಯಕ್ಕೆ ಕುತ್ತಾಗುವುದೋ ಎಂದು ವಿವಾಧದಲ್ಲೇ ಇರಿಸಿದ ಪ್ರಾಧಿಕಾರದ ಅಧಿಕಾರಿಗಳು ತಮ್ಮ ಆದಾಯವನ್ನು ವೃದ್ಧಿಸಿಕೊಳ್ಳುತ್ತಿರುವುದಾಗಿ ಗಂಭೀರ ಆರೋಪಗಳು ಕೇಳಿ ಬರುತ್ತಿದೆ.

ಈ ಬಾಬತ್ತಿನಿಂದಲೇ ಪ್ರಾಧಿಕಾರಕ್ಕೆ ಕೋಟ್ಯಾಂತರ ರೂ ನಷ್ಟವಾಗಿದ್ದು ಅದು ಅಧಿಕಾರಿಗಳ ತಿಜೋರಿ ತುಂಬಿರುವುದಾಗಿ ಸ್ಥಳೀಯರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಇದನ್ನು ಹೊರತು ಪಡಿಸಿ ಇದೇ ಲೈನಿನ ಉಳಿಕೆ 12 ಅಂಗಡಿಗಳು ಹಾಗೂ ಉತ್ಸವ ಕೌಂಟರ್ ಬಳಿ ಇರುವ ಒಂದು ಅಂಗಡಿ ಸೇರಿದಂತೆ ಒಟ್ಟು 13 ಅಂಗಡಿಗಳಿಂದಲೇ ನಿಯಮದಂತೆ ಕೋಟ್ಯಾಂತರ ರೂ ಬಾಡಿಗೆ ಸಂದಾಯವಾಗಿದೆ.

ಇದೀಗ ಮುಂದಿನ ಫೆಬ್ರವರಿ ಎರಡನೇ ವಾರದಲ್ಲಿ ಮ.ಬೆಟ್ಟದಲ್ಲೆ ಸರ್ಕಾರದ ಮಹತ್ವದ ಸಂಪುಟ ಸಭೆ ಜರುಗಲಿದ್ದು ಆಗಲಾದರೂ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಮುಖ್ಯಮಂತ್ರಿಗಳು ಈ ವಿವಾಧಕ್ಕೆ ತಾರ್ಕಿಕ ಅಂತ್ಯ ಕಾಣಿಸಿ ಅನ್ಯರ ಪಾಲಾಗುತ್ತಿರುವ ಪ್ರಾಧಿಕಾರದ ಆದಾಯಕ್ಕೆ ಆದ್ಯತೆ ನೀಡಿ, ಕರ್ತವ್ಯ ಲೋಪ ಎಸಗಿ ಅಕ್ರಮ ಅಂಗಡಿಗಳ ವ್ಯಾಪಾರಕ್ಕೆ ಅನುವು ಮಾಡಿಕೊಟ್ಟು ಸ್ವ ಆದಾಯಕ್ಕೆ ಮುಂದಾಗಿ ತಮ್ಮ ಜೇಬು ತುಂಬಿಸಿಕೊಂಡಿರುವ ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡು ಸೋರಿಕೆಯಾದ ಹಣ ವಸೂಲಿಗೆ ಮುಂದಾಗುವರೇ ಕಾದು ನೋಡಬೇಕಾಗಿದೆ.

# ಇಂದಿನಿಂದ 2ನೇ ಹಂತದ ಅನಿರ್ದಿಷ್ಟಾವಧಿ ಮುಷ್ಕರ



**ಆನೇಕಲ್:** ಕರ್ನಾಟಕ ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ಸಮಸ್ಯೆ ಗಳು ಮತ್ತು ಬೇಡಿಕೆಗಳ ಈಡೇರಿಕೆಗಾಗಿ ಆಗ್ರಹಿಸಿ ಕರ್ನಾಟಕ ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ಕೇಂದ್ರ ಸಂಘದ ಆದೇಶದ ಮೇರೆಗೆ ಜಿಲ್ಲೆಯಲ್ಲೂ ಇಂದಿನಿಂದ 2ನೇ ಹಂತದ ಅನಿರ್ದಿಷ್ಟಾವಧಿ ಮುಷ್ಕರ ಹಮ್ಮಿಕೊಳ್ಳಲಾಗಿದೆ ಎಂದು ತಾಲ್ಲೂಕು ಅಧ್ಯಕ್ಷ ಎಸ್.ಎ ಶ್ರೀನಿವಾಸ್ ತಿಳಿಸಿದ್ದಾರೆ.

ಅವರು ಆನೇಕಲ್ ಪಟ್ಟಣದ ತಾಲೂಕು ಕಚೇರಿಯಲ್ಲಿ ಅನಿರ್ದಿಷ್ಟಾವಧಿ ಮುಷ್ಕರ ನಡೆಸುವ ಬಗ್ಗೆ ತಹಶೀಲ್ದಾರ್ ರವರ ಪರವಾಗಿ ಶಿರಸ್ತೇದಾರ್ ಚಂದ್ರಶೇಖರ್ ರವರಿಗೆ ಮನವಿ ಸಲ್ಲಿಸಿ ಮಾತನಾಡಿದರು

2024ರ ಸೆ. 26ರಿಂದ ಅ.3ರ ವರೆಗೆ ರಾಜ್ಯಾದ್ಯಂತ ಹಮ್ಮಿಕೊಂಡಿದ್ದ ಗ್ರಾಮ ಆಡಳಿತ ಮತ್ತು ಅಧಿಕಾರಿಗಳ ಅನಿರ್ದಿಷ್ಟಾವಧಿ ಮುಷ್ಕರದ ಸಂದರ್ಭದಲ್ಲಿ ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಗ್ರಾಮ ಆಡಳಿತ ಅಧಿಕಾರಿಗಳ ಬೇಡಿಕೆಗಳನ್ನು ಈಡೇರಿಸುವುದಾಗಿ ಭರವಸೆ ನೀಡಿದ್ದರಿಂದ ಮುಷ್ಕರ ಹಿಂಪ ಡೆಯಲಾಗಿತ್ತು. ಆದರೆ, ಈವರೆಗೂ ಭರವಸೆ ಈಡೇರಿಸದ ಕಾರಣ 2ನೇ ಹಂತದ ಅನಿರ್ದಿಷ್ಟಾವಧಿ ಮುಷ್ಕರವನ್ನು ಹಮ್ಮಿಕೊಳ್ಳಲಾಗಿದೆ.

ಗ್ರಾಮ ಆಡಳಿತ ಅಧಿಕಾರಿಗಳ ಪ್ರಮುಖ ಬೇಡಿಕೆಗಳಾದ ರಾಜ್ಯಾದ್ಯಂತ ಆಧಾರ ಸೀಡಿಂಗ್ ಪ್ರಕ್ರಿಯೆಯಲ್ಲಿ ಪತ್ತೆಯಾಗಿರುವ 51.5 ಲಕ್ಷ ಮೃತ ಖಾತೆದಾರರ ಪಹಣಿ ದಾಖಲೆ ಅಭಿಯಾನ ಮಾದರಿಯಲ್ಲಿ ವಾರಸುದಾರರ ಹೆಸರುಗಳಿಗೆ ಪೌತಿ ಖಾತೆ ದಾಖಲಿಸುವಂತೆ ಇ ಪೌತಿ ಖಾತಾ ಅಂದೋಲನ ಕೈಬಿಡಬೇಕು. ಚಿಕ್ಕಮಗಳೂರು ಜಿಲ್ಲೆಯಲ್ಲಿ 30 ಗ್ರಾಮ ಆಡಳಿತ ಅಧಿಕಾರಿಗಳ ವಾರ್ಷಿಕ ವೇತನ ಬಡ್ತಿಯನ್ನು ತಡೆದು ನೈಸರ್ಗಿಕ ನ್ಯಾಯ ತತ್ವಗಳನ್ನು ಹಾಗೂ ಎಲ್ಲ ನಿಯಮಗಳನ್ನು ಉಲ್ಲಂಘಿಸಿ ಹೊರಡಿಸಿರುವ ದಂಡನಾ ಆದೇಶವನ್ನು ಕೂಡಲೇ ಹಿಂಪಡೆಯಬೇಕು. ಅಂತರ್ ಜಿಲ್ಲಾ ವರ್ಗಾವಣೆಯ ಕೆಸಿಎಸ್‌ಆರ್ ನಿಯಮ 16ಎರ ಉಪಖಂಡ(2)ನ್ನು ಮರುಸ್ಥಾಪಿಸುವ ಬಗ್ಗೆ ಅಥವಾ ಇತರೆ ಎಲ್ಲಾ ಇಲಾಖೆಗಳಲ್ಲಿರುವಂತೆ ಕಂದಾಯ ಇಲಾಖೆಯಲ್ಲಿ ವರ್ಗಾವಣೆಗಾಗಿ ವಿಶೇಷ ಮಾರ್ಗಸೂಚಿ ರಚಿಸಬೇಕು. ಗ್ರಾಮ ಆಡಳಿತ ಅಧಿಕಾರಿಗಳಿಗೆ ಸುಸಜ್ಜಿತ ಕಚೇರಿ, ಗುಣಮಟ್ಟದ ಟೇಬಲ್, ಖುರ್ಚಿ, ಅಲ್ಮೇರಾ, ಮೊಬೈಲ್, ಲ್ಯಾಪ್ಟಾಪ್, ಪ್ರಿಂಟರ್ ಹಾಗೂ ಸ್ಕ್ಯಾನರ್‌ಗಳನ್ನು ಒದಗಿಸಬೇಕು. ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಯನ್ನು ತಾಂತ್ರಿಕ ಹುದ್ದೆಗಳಿಗೆ ನೀಡುವ ವೇತನ ಶ್ರೇಣಿ ನಿಗದಿಪಡಿಸಿ ಆದೇಶ ನೀಡಬೇಕು.

ಕಂದಾಯ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರಕಾರಿ ನೌಕರರ ಎಲ್ಲಾ ವೃಂದಗಳನ್ನು ಒಳಗೊಂಡಂತೆ ನೀಡುತ್ತಿರುವ ಅನುಕಂಪದ ನೇಮಕಾತಿಯ ಹುದ್ದೆಯ ವೃಂದ ಹಾಗೂ ನೇಮಕಾತಿ ತಿದ್ದುಪಡಿ ಮಾಡಬೇಕು. ಕರ್ತವ್ಯ ನಿರ್ವಹಿಸುವ ಸಂದರ್ಭದಲ್ಲಿ ಜೀವಹಾನಿ ಸಂಭವಿಸಿದಲ್ಲಿ ಗ್ರಾಮ ಆಡಳಿತ ಅಧಿಕಾರಿಗಳ ಕುಟುಂಬಕ್ಕೆ 50 ಲಕ್ಷ ರೂ. ಪರಿಹಾರ ಮಂಜೂರು ಮಾಬೇಕು. ಪ್ರಯಾಣ ಭತ್ಯೆಯನ್ನು 500ರಿಂದ 5000 ರೂ. ಹೆಚ್ಚುವರಿ ಮಾಡಬೇಕು. ಬೆಳೆ ಸಮೀಕ್ಷೆ, ಬೆಳೆ ಹಾನಿ ಪರಿಹಾರದ ಕೆಲಸವನ್ನು ಕೃಷಿ, ತೋಟಗಾರಿಕೆ ಇಲಾಖೆಗೆ ನಿರ್ವಹಿಸುವಂತೆ ಆದೇಶಿಸಬೇಕು. ಮ್ಯೂಟೇಶನ್ ಅವಧಿ ದಿನವನ್ನು ವಿಸ್ತರಿಸಬೇಕು.

ಪ್ರೋಟೋಕಾಲ್ ಕೆಲಸದಿಂದ ಗ್ರಾಮ ಆಡಳಿತ ಅಧಿಕಾರಿಗಳಿಗೆ ಕೈಬಿಡಬೇಕು. ಜಾಬ್ ಚಾರ್ಟ್ ನಿಗದಿಪಡಿಸಬೇಕು. ದಫರ್ ಹಾಗೂ ಜಮಾಬಂದಿಯನ್ನು ರದ್ದುಪಡಿಸ ಬೇಕು. ಹಾಗೂ ರಾಜ್ಯದ ಗ್ರಾಮ ಸಹಾಯಕರಿಗೆ ಸೇವಾಭದ್ರತೆಯನ್ನು ಒದಗಿಸುವುದು ಸೇರಿ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ 2ನೇ ಹಂತದ ಅನಿರ್ದಿಷ್ಟಾವಧಿ ಮುಷ್ಕರ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ. ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ಕೇಂದ್ರ ಸಂಘದ ಆನೇಕಲ್ ತಾಲ್ಲೂಕು ಘಟಕದ ಉಪಾಧ್ಯಕ್ಷ ಮಹಾಂತೇಶ್, ಪ್ರಧಾನ ಕಾರ್ಯದರ್ಶಿ ಚಂದ್ರಪ್ಪ ಮೈಂದೂರು, ಸಂಘಟನ ಕಾರ್ಯದರ್ಶಿ ಶ್ರೀನಿವಾಸ್ ಪಧಾಧಿಕಾರಿಗಳಾದ ಶಶಿಧರ್, ಪಲ್ಲವಿ, ದೀಪಕ್ ಸೇರಿದಂತೆ ಪದಾಧಿಕಾರಿಗಳು ಹಾಗೂ ತಾಲ್ಲೂಕಿನ ಎಲ್ಲ ಗ್ರಾಮ ಆಡಳಿತ ಅಧಿಕಾರಿಗಳು ಹಾಜರಿದ್ದರು.

# ಮಧ್ವಾಚಾರ್ಯರ ನೆನಪಿನಲ್ಲಿ ಮಧ್ವ ನವಮಿ ಆಚರಣೆ



**ಶಿಡ್ಲಘಟ್ಟ :** ಮಧ್ವ ನವಮಿಯಂದು ತತ್ವಜ್ಞಾನಿ ಮತ್ತು ಆಚಾರ್ಯ ಮಧ್ವಾಚಾರ್ಯರ ಸ್ಮರಣೆ ಮಾಡಲಾಗುತ್ತದೆ, ದ್ವೈತ ಸಿದ್ಧಾಂತವನ್ನು ಪ್ರತಿಪಾದಿಸಿದ ಮಧ್ವಾಚಾರ್ಯರ ನೆನಪಿನಲ್ಲಿ ಮಧ್ವ ನವಮಿ ಆಚರಿಸಲಾಗುತ್ತದೆ ಎಂದು ಶ್ರೀ ರಾಘವೇಂದ್ರ ಸೇವಾ ಟ್ರಸ್ಟ್ ಅಧ್ಯಕ್ಷ ಎಸ್ .ವಿ.ನಾಗರಾಜರಾವ್ ತಿಳಿಸಿದರು.

ನಗರದ ರಾಘವೇಂದ್ರಸ್ವಾಮಿ ದೇವಾಲಯದಲ್ಲಿ ಮಧ್ವ ನವಮಿಯ ಪ್ರಯುಕ್ತ ಆಯೋಜಿಸಿದ್ದ ವಿಶೇಷ ಪೂಜೆಯ ಬಗ್ಗೆ ಅವರು ಮಾತನಾಡಿದರು.

ಮಾಧ್ವಾಚಾರ್ಯರು ಬದರಿಕಾಶ್ರಮವನ್ನು ಪ್ರವೇಶಿಸಿದ ದಿನವಾಗಿದ್ದು, ಈ ದಿನವನ್ನು ಮಧ್ವ ನವಮಿ ಎಂದು ಕರೆಯಲಾಗುತ್ತದೆ,ಭಕ್ತರು ಮಧ್ವಾಚಾರ್ಯರ ಗಮನಾರ್ಹ ಜೀವನ ಮತ್ತು ಆಧ್ಯಾತ್ಮಿಕ ಪರಂಪರೆಯನ್ನು ಗೌರವಿಸಲು ಈ ದಿನವನ್ನು ಆಚರಿಸುವುದಾಗಿ ಹೇಳಿದರು.

ನೆಟ್ಟ ದ್ವೈತ ಮತವೆಂಬ ಬೀಜ ಹೆಮ್ಮರವಾಗಿ, ಶ್ರೀಪದ್ಮನಾಭತೀರ್ಥರು, ಶ್ರೀಪಾದರಾಜರು, ಶ್ರೀವ್ಯಾಸತೀರ್ಥರು, ತೀರ್ಥರು, ಶ್ರೀಪುರಂದರದಾಸರು, ಶ್ರೀಜಯತೀರ್ಥರು, ಶ್ರೀವಾದಿರಾಜರು, ಶ್ರೀವಿಜಯೀಂದ್ರ ಶ್ರೀರಘೋತ್ತಮತೀರ್ಥರು, ಶ್ರೀಕನಕದಾಸರು ಎಂಬ ಅಸಂಖ್ಯ ಪುಷ್ಪಗಳನ್ನು ಅರಳಿಸಿದೆ,ಕಲಿಯುಗದಲ್ಲಿ ದೀನರ ಪಾಲಿಗೆ ದೈವವೆನಿಸಿ ಸಲಹುತ್ತಿರುವ ಮಂತ್ರಾಲಯ ಪ್ರಭುಗಳಾದ ಶ್ರೀರಾಘವೇಂದ್ರತೀರ್ಥರೆಂಬ ಅಮೃತ ಫಲವನ್ನು ಸಹ ನೀಡಿದೆ ಹಾಗಾಗಿ ರಾಘವೇಂದ್ರಸ್ವಾಮಿ ಅವರ ಮಠದಲ್ಲಿ ವಿಶೇಷ ಪೂಜೆ ಆಯೋಜಿಸಲಾಗಿದೆ ಎಂದರು. ಈ ಸಂದರ್ಭದಲ್ಲಿ ಟ್ರಸ್ಟ್ ಕಾರ್ಯದರ್ಶಿ ಎನ್. ಶ್ರೀಕಾಂತ್, ಎಂ.ವಾಸುದೇವರಾವ್, ಎ.ಎಸ್. ರವಿ, ಕೆ.ಮಂಜುನಾಥ ಮುಂತಾದವರು ಹಾಜರಿದ್ದರು.



**ಕೆ.ಆರ್.ಪೇಟೆ ತಾಲ್ಲೂಕಿನಲ್ಲಿ ನಡೆದ ಪಿ.ಎಲ್.ಡಿ ಬ್ಯಾಂಕ್ ಚುನಾವಣೆಯಲ್ಲಿ ಶಾಸಕ ಹೆಚ್.ಟಿ.ಮಂಜು ಹಾಗೂ ಪತ್ನಿ ರಮಾಮಂಜು ಪಟ್ಟಣದ ಪ್ರಾಥಮಿಕ ಕೃಷಿ ಭೂ ಅಭಿವೃದ್ದಿ ಬ್ಯಾಂಕ್‌ಗೆ ಭೇಟಿ ನೀಡಿ ಸರತಿ ಸಾಲಿನಲ್ಲಿ ನಿಂತು ಮತ ಚಲಾಯಿಸಿದರು.**

# ವೇಣುಗೋಪಾಲಸ್ವಾಮಿ ಬ್ರಹ್ಮರಥೋತ್ಸವ

**ಶಿಡ್ಲಘಟ್ಟ :** ಶಿಡ್ಲಘಟ್ಟದ ಊರ ದೇವರೆಂದೇ ಖ್ಯಾತಿ ಹೊಂದಿರುವ ನಗರದ ಪುರಾತನ ಶ್ರೀ ವೇಣುಗೋಪಾಲಸ್ವಾಮಿ ದೇವಾಲಯದಲ್ಲಿ ಬ್ರಹ್ಮರಥೋತ್ಸವ ಸಹಿತ ಎಲ್ಲಾ ಕೈಂಕರ್ಯಗಳು ಪಾಂಚರಾತ್ರಾಗಮ ಪದ್ಧತಿಯಲ್ಲಿ ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು.

ತಹಶೀಲ್ದಾರ್ ಬಿ.ಎನ್.ಸ್ವಾಮಿ ರಥೋತ್ಸವಕ್ಕೆ ಚಾಲನೆ ನೀಡಿದರು.

ತಮಟೆ ವಾದನ, ಮಂಗಳ ವಾದ್ಯಗಳ ಮಧ್ಯೆ ರಥವನ್ನು ಅಶೋಕ ರಸ್ತೆಯಲ್ಲಿ ಮೆರವಣಿಗೆ ಮಾಡಲಾಯಿತು. ಮಹಿಳೆಯರು ತೆಂಗಿನಕಾಯಿ ಒಡೆದು, ಪೂಜೆ ಸಲ್ಲಿಸಿ, ಆರತಿ ಬೆಳಗಿದರು. ಮಯೂರ ವೃತ್ತದಲ್ಲಿ ಪಾನಕ ಮತ್ತು ಹೆಸರುಬೇಳೆ ಕೋಸಂಬರಿ ಹಂಚಲಾಯಿತು.

ಶ್ರೀವೇಣುಗೋಪಾಲಸ್ವಾಮಿ ದೇವಾಲಯದಲ್ಲಿ ಪೂಜಾ ಕಾರ್ಯಕ್ರಮಗಳು ಒಂದು ವಾರದ ಕಾಲ ನಡೆಯಲಿದ್ದು, ನಗರದ ಎಲ್ಲ ಸಮುದಾಯಗಳವರೂ ವಿವಿಧ ಪೂಜಾ ಕೈಂಕರ್ಯಗಳಲ್ಲಿ ಭಾಗಿಯಾಗುವುದು ವಿಶೇಷವಾಗಿದೆ. ನಗರ ಸೇರಿದಂತೆ ಸುತ್ತಮುತ್ತಲಿನ ಗ್ರಾಮಸ್ಥರು ರಥೋತ್ಸವದಲ್ಲಿ ಪಾಲ್ಗೊಂಡಿದ್ದರು. ಕಾಂಗ್ರೆಸ್ ಮುಖಂಡರಾದ ಬಿ.ವಿ.ರಾಜೀವ್ ಗೌಡ, ಆಂಜಿನಪ್ಪ(ಪುಟ್ಟು), ಮಾಜಿ ಶಾಸಕ ಎಂ.ರಾಜಣ್ಣ, ಗ್ರಾಮಾಂತರ ಮಂಡಲ ಬಿಜೆಪಿ ಅಧ್ಯಕ್ಷ ಆನಂದಗೌಡ, ಶ್ರೀವೇಣುಗೋಪಾಲಸ್ವಾಮಿ ದೇವಾಲಯ ಅಭಿವೃದ್ದಿ ಸಮಿತಿಯ ಬಳೆರಘು, ಲಕ್ಷ್ಮಿನಾರಾಯಣ, ಆನಂದ, ಅರ್ಚಕ ವೈ.ಎನ್. ದಾಶರಥಿಭಟ್ಟಾಚಾರ್ಯ, ಶ್ರೀ ವೇಣುಗೋಪಾಲಸ್ವಾಮಿ ಸೇವಾ ಮತ್ತು ಅಭಿವೃದ್ಧಿ ಟ್ರಸ್ಟ್ ಸದಸ್ಯರು ಹಾಜರಿದ್ದರು.

# ರಾಜೇಶ್‌ಗೆ ಗ್ರಾಮೀಣ ಶಿಕ್ಷಣ ರತ್ನ ಪ್ರಶಸ್ತಿ



**ಹುಣಸೂರು:** ಕರ್ನಾಟಕ ರಾಜ್ಯ ಗ್ರಾಮೀಣ ಶಿಕ್ಷಕರ ಸಂಘ ರಾಜ್ಯ ಘಟಕ ಹುಬ್ಬಳ್ಳಿ(ರಿ) ವತಿಯಿಂದ ಬೆಂಗಳೂರಿನ ನೆಲಮಂಗಲದಲ್ಲಿ ನಡೆದ ಗ್ರಾಮೀಣ ಶಿಕ್ಷಣ ರತ್ನ ರಾಜ್ಯ ಮಟ್ಟದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮೈಸೂರು ಜಿಲ್ಲೆಯ ಹುಣಸೂರು ತಾಲೂಕಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಬೆಂಕಿಪುರ ಮುಖ್ಯ ಶಿಕ್ಷಕರಾದ ಎಸ್ ರಾಜೇಶ್ ಬಿಳಿಕೆರೆ ಇವರಿಗೆ ರಾಜ್ಯ ಮಟ್ಟದ ಗ್ರಾಮೀಣ ಶಿಕ್ಷಣ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಬಿಳಿಕೆರೆ ಎಸ್ ರಾಜೇಶ್ ಈ ಪ್ರಶಸ್ತಿ ನನ್ನ ಜವಾಬ್ದಾರಿಯನ್ನು ಹೆಚ್ಚಿಸಿದೆ. ಗ್ರಾಮೀಣ ಪ್ರದೇಶದಲ್ಲಿ ತೆರೆಮರೆಯಲ್ಲಿ ಸೇವೆ ಸಲ್ಲಿಸುತ್ತಿರುವ ನನ್ನಂಥಹ ಹಲವಾರು ಶಿಕ್ಷಕರನ್ನು ಗುರುತಿಸಿ ಪ್ರಶಸ್ತಿ ನೀಡುತ್ತಿರುವ ಗ್ರಾಮೀಣ ಶಿಕ್ಷಕರ ಸಂಘಕ್ಕೆ ಅಭಿನಂದನೆಗಳು. ಇಲಾಖೆಗೆ ಸೇರಿದಾಗಿನಿಂದ ಇಲ್ಲಿಯವರೆಗೆ ಕಾಯಾ ವಾಚಾ ಮನಸಾ ಪ್ರಾಮಾಣಿಕವಾಗಿ ಸೇವೆ ಸಲ್ಲಿಸುತ್ತಾ ಬಂದಿದ್ದೇನೆ. ಮುಂದೆಯೂ ನನ್ನ ಕರ್ತವ್ಯಗಳನ್ನು ಚಾಚೂ ತಪ್ಪದೇ ಪಾಲಿಸುವ ಮೂಲಕ ಸಾವಿರಾರು ಮಕ್ಕಳ ಜ್ಞಾನಾರ್ಜನೆಗೆ ದೊರಕಿರುವ ಅವಕಾಶವನ್ನು ಸದ್ಬಳಕೆ ಮಾಡಿಕೊಂಡು ಶಿಕ್ಷಕ ಸೇವೆಯ ಪಾವಿತ್ರತೆಯನ್ನು ಕಾಪಾಡುತ್ತೇನೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಗ್ರಾಮೀಣ ಶಿಕ್ಷಕರ ಸಂಘದ ಪದಾಧಿಕಾರಿಗಳು, ಹುಣಸೂರು ತಾಲ್ಲೂಕಿನ ಶಿಕ್ಷಕ ಸಮೂಹ ಹಾಜರಿದ್ದು ಪ್ರಶಸ್ತಿವಿಜೇತರನ್ನು ಅಭಿನಂದಿಸಿತು.

# ಹಳೆಯ ಪಿಂಚಣಿ ಜಾರಿಗೊಳಿಸಲು ಒತ್ತಾಯ

**ಶಿಡ್ಲಘಟ್ಟ :** ನೂತನ ಪಿಂಚಣಿ ಯೋಜನೆ (ಎನ್‌ಪಿಎಸ್) ರದ್ದುಪಡಿಸಿ ಹಳೆಯ ಪಿಂಚಣಿ ಪದ್ಧತಿ ಜಾರಿಗೊಳಿಸಬೇಕು ಎಂದು ಅಧ್ಯಕ್ಷ ಶಿಕ್ಷಕ ವಿ.ಎನ್.ಗಜೇಂದ್ರ ಒತ್ತಾಯಿಸಿದರು. ಹಳೆಯ ಪಿಂಚಣಿ ಪದ್ಧತಿ ಮರು ಜಾರಿಗೆ ಆಗ್ರಹಿಸಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಹಮ್ಮಿಕೊಂಡಿದ್ದ ಒಂದು ದಿನದ ಸಾಂಕೇತಿಕ ಪ್ರತಿಭಟನೆಯಲ್ಲಿ ಭಾಗವಹಿಸಲು ತಾಲೂಕಿನಿಂದ 500ಕ್ಕೂ ಹೆಚ್ಚು ಸರ್ಕಾರಿ ನೌಕರರು ಕೋಟೆ ವೃತ್ತದಿಂದ ಪ್ರಯಾಣ ಬೆಳೆಸಿದ ಸಂದರ್ಭದಲ್ಲಿ ಅವರು ಮಾತನಾಡಿದರು. ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಈ ಹಿಂದೆ ವಿರೋಧ ಪಕ್ಷದಲ್ಲಿದ್ದಾಗ, ಸರ್ಕಾರ ಅಧಿಕಾರಕ್ಕೆ ಬಂದರೆ ಹಳೆಯ ಪಿಂಚಣಿ ಪದ್ಧತಿ ಮರು ಜಾರಿ ಮಾಡುವುದಾಗಿ ಭರವಸೆ ನೀಡಿತ್ತು,ಆದರೆ ಅಧಿಕಾರಕ್ಕೆ ಬಂದು ಎರಡು ವರ್ಷವಾದರೂ ಕೊಟ್ಟ ಮಾತಿನಂತೆ ನಡೆದುಕೊಂಡಿಲ್ಲ, ಕೇಳಿದ್ದಕ್ಕೆ ಪಂಚ ಗ್ಯಾರಂಟಿಗಳ ಜಾರಿ ನಂತರ 6ನೇ ಗ್ಯಾರಂಟಿಯಾಗಿ ಹಳೇ ಪಿಂಚಣಿ ಯೋಜನೆ ಜಾರಿ ಮಾಡಲಾಗುವುದು ಎಂದಿದ್ದರು.

ಆದರೆ ಈಗ ಪಂಚ ಗ್ಯಾರಂಟಿ ಯೋಜನೆಗಳು ಜಾರಿಯಾಗಿವೆ ಮುಂಬರುವ ಬಜೆಟ್‌ನಲ್ಲಿ ಹಳೆಯ ಪಿಂಚಣಿ ಯೋಜನೆ ಜಾರಿಗೆ ಸರ್ಕಾರ ಮುಂದಾಗಬೇಕು ಎಂದು ಒತ್ತಾಯಿಸಿದರು.



**ಹಳೆಯ ಪಿಂಚಣಿ ಪದ್ಧತಿ ಮರು ಜಾರಿಗೆ ಆಗ್ರಹಿಸಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಹಮ್ಮಿಕೊಂಡಿದ್ದ ಒಂದು ದಿನದ ಸಾಂಕೇತಿಕ ಪ್ರತಿಭಟನೆಯ ಸ್ಥಳಕ್ಕೆ ಕೃಷಿ ಸಚಿವರಾದ ಚೆಲುವರಾಯಸ್ವಾಮಿ ಭೇಟಿ ನೀಡಿ ಮಾತನಾಡಿದ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬಳಿ ನಿಮ್ಮ ಸಮಸ್ಯೆಗಳನ್ನು ತಿಳಿಸಿ ಚರ್ಚಿಸಿ ಶೀಘ್ರದಲ್ಲೇ ಬಗೆ ಹರಿಸಲಾಗುವುದು ಎಂದು ಭರವಸೆ ನೀಡಿದರು. ಈ ಸಂದರ್ಭದಲ್ಲಿ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಕೆ.ಎನ್.ಸುಬ್ಬಾರೆಡ್ಡಿ, ಎನ್‌ಪಿಎಸ್ ನೌಕರರ ಸಂಘದ ಕಾರ್ಯದರ್ಶಿ ನರಸಿಂಹರಾಜು, ಉಪಾಧ್ಯಕ್ಷ ಪಿಡಿಓ ರಮಾಕಾಂತ್, ಖಜಾಂಚಿ ಆರೋಗ್ಯ ಇಲಾಖೆ ಟಿ.ಟಿ.ನರಸಿಂಹಪ್ಪ, ಕಂದಾಯ ಇಲಾಖೆಯ ಜಾರ್ಜ್, ಅನುದಾನಿತ ಶಿಕ್ಷಕರ ಸಂಘದ ವೆಂಕಟೇಶ್, ಜಿ.ಎನ್. ರಮೇಶ್ ಸೇರಿ ವಿವಿಧ ಇಲಾಖೆಗಳ ಎನ್‌ಪಿಎಸ್ ನೌಕರರು ಪಾಲ್ಗೊಂಡಿದ್ದರು.**

# ಮಹಾಕುಂಭದ ಎಫೆಕ್ಟ್: ತುಂಬಿ ತುಳುಕುತ್ತಿದೆ ಕಾಶಿ



**ವಾರಾಣಸಿ:** ಮಹಾಕುಂಭ ಮೇಳಕ್ಕೆ ಪ್ರಯಾಗ್‌ರಾಜ್‌ಗೆ ಆಗಮಿಸುತ್ತಿರುವ ಭಕ್ತರ ದಂಡು, ವಾರಾಣಸಿಗೂ ಭೇಟಿ ನೀಡುತ್ತಿದೆ. ಪರಿಣಾಮವಾಗಿ ಇಲ್ಲೂ ಕೂಡ ಜನಸಂದಣಿ ಹೆಚ್ಚಿದೆ. ಕಳೆದ 9 ದಿನದಲ್ಲೇ ಸುಮಾರು 50 ಲಕ್ಷ ಯಾತ್ರಿಕರು ವಾರಾಣಸಿಗೆ ಭೇಟಿ ನೀಡಿದ್ದಾರೆ. ಇನ್ನು ವಾರಾಂತ್ಯದಲ್ಲಂತೂ ಈ ಸಂಖ್ಯೆ ಹೆಚ್ಚಿದೆ. ಫೆ. 8ರಂದು ಅತಿ ಹೆಚ್ಚಿನ ಸಂಖ್ಯೆಯಲ್ಲಿ ಯಾತ್ರಿಗರು ಆಗಮಿಸಿದ್ದು, ವಾರಾಣಸಿಯ ಗಡಿಯಲ್ಲಿಯೇ ಹೊರಗಿನ ವಾಹನಗಳ ಪ್ರವೇಶವನ್ನು ನಿಷೇಧಿಸಲಾಗಿದೆ. ನಗರದಲ್ಲಿ ಮಾರ್ಗ ಬದಲಾವಣೆ ಮಾಡಲಾಗಿದೆ. ಇದರ ಹೊರತಾಗಿಯೂ ವಾರಾಣಸಿಗೆ ನಿತ್ಯ 8 ರಿಂದ 10 ಲಕ್ಷ ಜನ ಆಗಮಿಸುತ್ತಿದ್ದಾರೆ. ದೇವರ ದರ್ಶನ ಪಡೆಯಲು ಭಕ್ತರು 4 ಕಿ.ಮೀ ಉದ್ದದ ಸರತಿ ಸಾಲಿನಲ್ಲಿ ನಿಲ್ಲಬೇಕಾದ ಪರಿಸ್ಥಿತಿ ಉಂಟಾಗಿದೆ.

9 ದಿನದ ಯಾತ್ರಿಕರ ಸಂಖ್ಯೆ: ಫೆ.1ರಿಂದ ಫೆ.9ರವರೆಗೆ ದೇಗುಲಕ್ಕೆ ಭೇಟಿ ನೀಡಿದ ಭಕ್ತರ ಸಂಖ್ಯೆ ಯನ್ನು ಆಡಳಿತ ಮಂಡಳಿ ಬಿಡುಗಡೆ ಮಾಡಿದೆ. ಅದರಲ್ಲಿ 5,69,360 ಮಂದಿ ಭಕ್ತರು ಭೇಟಿ ನೀಡಿದ್ದಾರೆ. ಫೆ. 1ರಂದು 1, 4,61,759, ಫೆ. 2ರಂದು 5,84,224, ಫೆಬ್ರವರಿ 3ರಂದು 5,09,133, ಫೆ 4ರಂದು 4,89,223, ಫೆಬ್ರವರಿ 5ರಂದು 4,56,586, ಫೆಬ್ರವರಿ 6, 4,94,854, ಫಬ್ರವರಿ 7, 6,21,307 ಭೇಟಿ ನೀಡಿದ್ದಾರೆ. ಫೆಬ್ರವರಿ 8ರಂದು 4,39,690 ಭಕ್ತರು ದೇವರ ದರ್ಶನ ಪಡೆದಿದ್ದಾರೆ.

ಈ ತಿಂಗಳಲ್ಲಿ 50 ಲಕ್ಷಕ್ಕೂ ಹೆಚ್ಚು ಭಕ್ತರು ಭೇಟಿ ನೀಡಿದ್ದು, ದಾಖಲೆ ನಿರ್ಮಾಣವಾಗಿದೆ. ಈ ಮಟ್ಟದ ಜನಸಂದಣಿಯನ್ನು ಇದುವರೆಗೆ ಶ್ರಾವಣ ಮತ್ತು ಶಿವರಾತ್ರಿಯಲ್ಲೂ ಕಂಡಿಲ್ಲ ಎಂದು ಹೇಳಲಾಗುತ್ತಿದೆ.

ವಿಶೇಷ ವ್ಯವಸ್ಥೆ: ಈ ಕುರಿತು ಮಾತನಾಡಿರುವ ದೇಗುಲದ ಪಿಆರ್‌ಒ ಗಜೇಂದ್ರ, ಮಹಾಕುಂಭಮೇಳಕ್ಕೆ ಹಿನ್ನೆಲೆ ಕಾಶಿ ವಿಶ್ವನಾಥನಿಗೆ ಬರುವ ಭಕ್ತರ ಸಂಖ್ಯೆ ಹೆಚ್ಚಿದೆ. ಈ ಅಂಶವನ್ನು ಗಮನದಲ್ಲಿರಿಸಿಕೊಂಡು ದೇಗುಲದಲ್ಲಿ ವಿಶೇಷ ವ್ಯವಸ್ಥೆ ಮಾಡಲಾಗಿದೆ. ಭಕ್ತರ ಜಸಂದಣಿ ನಿರ್ವಹಣೆಗೆ ಹೆಚ್ಚಿನ ಭದ್ರತೆ ನಿಯೋಜಿಸಲಾಗಿದೆ. ಹಾಗೇ ಆರೋಗ್ಯ ಮತ್ತು ಶೌಚ ವ್ಯವಸ್ಥೆಗೆ ಆದ್ಯತೆ ನೀಡಲಾಗಿದೆ. ಭಕ್ತರ ಅನುಕೂಲಕ್ಕಾಗಿ ವಿಶೇಷ ಸರತಿ ಸಾಲನ್ನು ವ್ಯವಸ್ಥೆ ಮಾಡಲಾಗಿದೆ.

ಲಕ್ಷ ದಾಟುತ್ತಿರುವ ಭಕ್ತರ ಸಂಖ್ಯೆ: ಮಹಾಕುಂಭ ಮೇಳ ಶುರುವಾದಾಗಿನಿಂದ ಆಯೋಧ್ಯೆ ಮತ್ತು ವಾರಾಣಸಿಗೆ ಬರುವ ಭಕ್ತರು ಸಂಖ್ಯೆ ಹೆಚ್ಚಿದೆ. ವಾರಣಾಸಿಯ ಗಂಗಾನದಿಯಲ್ಲಿ 8 ರಿಂದ 10 ಲಕ್ಷ ಜನರು ಸ್ನಾನ ಮಾಡುತ್ತಿದ್ದಾರೆ. ಈ ಸಂಖ್ಯೆ ಭಕ್ತರು ಆಗಮಿಸುತ್ತಿರುವ ಹಿನ್ನೆಲೆ ರೈಲು ನಿಲ್ದಾಣ, ಬಸ್ ನಿಲ್ದಾಣಗಳು ಜನಸಂದಣಿಯಿಂದ ತುಂಬಿದೆ. ನಗರದ ರಸ್ತೆಗಳಲ್ಲಿ ಪ್ರವಾಸಿ ವಾಹನಗಳ ಸಾಲುಗಟ್ಟಿ ನಿಂತಿದೆ. ಇದರಿಂದ ಜನರಿಗೆ ಓಡಾಡುವುದೇ ಸವಾಲಾಗಿದೆ. ಈ ಹಿನ್ನೆಲೆಯಲ್ಲಿ ವಾರಾಣಸಿ ಗಡಿಯಲ್ಲಿಯೇ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಲಾಗುತ್ತಿದ್ದು, ವಾಹನಗಳ ಸಂಖ್ಯೆ ಹೆಚ್ಚಾಗದಂತೆ ಗಮನ ವಹಿಸಲಾಗುತ್ತಿದೆ.

# ಮಹಾಕುಂಭ ಮೇಳ: ತ್ರಿವೇಣಿ ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿದ ರಾಷ್ಟ್ರಪತಿ ದ್ರೌಪದಿ ಮುರ್ಮು



**ಪ್ರಯಾಗ್‌ರಾಜ್,** ಉತ್ತರಪ್ರದೇಶ: ಜಗತ್ತಿನ ಅತಿದೊಡ್ಡ ಧಾರ್ಮಿಕ ಕಾರ್ಯಕ್ರಮವಾದ ಪ್ರಯಾಗರಾಜ್‌ದ ಮಹಾ ಕುಂಭಮೇಳದಲ್ಲಿ ಪವಿತ್ರ ಸ್ನಾನ ಮಾಡಲು ಭಕ್ತರ ದಂಡು ದೇಶ ವಿದೇಶಗಳಿಂದ ಆಗಮಿಸುತ್ತಿದೆ. ಈಗಾಗಲೇ ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಹಲವು ಪ್ರಮುಖ ರಾಜಕೀಯ ನಾಯಕರುಗಳು ಕೂಡ ತ್ರಿವೇಣಿ ಸಂಗಮಕ್ಕೆ ಭೇಟಿ ನೀಡುತ್ತಿದ್ದಾರೆ.

ಇದೀಗ ರಾಷ್ಟ್ರಪತಿ ದ್ರೌಪದಿ ಮುರ್ಮು ಕೂಡ ಆಗಮಿಸಿ ಪವಿತ್ರ ಸ್ನಾನ ನಡೆಸಿದ್ದಾರೆ.

ಇಂದು ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ಗೆ ಆಗಮಿಸಿದ ರಾಷ್ಟ್ರಪತಿ ದ್ರೌಪದಿ ಮುರ್ಮು, ಗಂಗಾ – ಯಮುನಾ – ಸರಸ್ವತಿ ನದಿ ಸೇರುವ ತ್ರಿವೇಣಿ ಸಂಗಮದಲ್ಲಿ ಮುಳುಗೆದ್ದು, ಪ್ರಾರ್ಥನೆ ಸಲ್ಲಿಸಿದರು. ಇದಕ್ಕೂ ಮುನ್ನ ಉತ್ತರ ಪ್ರದೇಶ ರಾಜ್ಯಪಾಲರಾದ ಅನಂದಿಬೇನ್ ಪಾಟೇಲ್, ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಇಂದು ಬೆಳಗ್ಗೆ ರಾಷ್ಟ್ರಪತಿಗಳನ್ನು ಆತ್ಮೀಯವಾಗಿ ಬರಮಾಡಿಕೊಂಡರು. ತ್ರಿವೇಣಿ ಸಂಗಮಕ್ಕೆ ಆಗಮಿಸಿದ ಅವರು ಇದೆ ವೇಳೆ, ಅಲ್ಲಿದ್ದ ಪಕ್ಷಿಗಳಿಗೂ ಕಾಳುಗಳನ್ನು ನೀಡಿದ್ದು ಕಂಡು ಬಂದಿತು.

ಉತ್ತರಾಖಂಡ್ ಸಿಎಂರಿಂದಲೂ ಪವಿತ್ರ ಸ್ನಾನ: ಈ ನಡುವೆ ಉತ್ತರಾಖಂಡ್ ಸಿಎಂ ಪುಷ್ಕರ್ ಸಿಂಗ್ ಧಾಮಿ ಕೂಡ ಅವರ ಕುಟುಂಬದೊಂದಿಗೆ ಆಗಮಿಸಿ ತ್ರಿವೇಣಿ ಸಂಗಮದಲ್ಲಿ ಪವಿತ್ರ ಸ್ನಾನ ನಡೆಸಿದ್ದಾರೆ. ಈ ವೇಳೆ ಮಾತನಾಡಿದ ಅವರು, ಈ ರೀತಿಯ ಅದ್ಭುತ ಅವಕಾಶ ಲಭ್ಯವಾಗಿರುವುದಕ್ಕೆ ಕೃತಜ್ಞತೆ ಹೊಂದಿರುವುದಾಗಿ ತಿಳಿಸಿದರು. 2027ರಲ್ಲಿ ಹರಿದ್ವಾರದಲ್ಲಿ ನಡೆಯಲಿರುವ ಕುಂಭ ಮೇಳಕ್ಕೆ ತಯಾರಿ ನಡೆಸುವುದಾಗಿ ತಿಳಿಸಿದರು. ಜಗತ್ತಿನ ಎಲ್ಲ ಮೂಲೆಯಿಂದ ಜನರು ಇಲ್ಲಿ ಪವಿತ್ರ ಸ್ನಾನಕ್ಕೆ ಆಗಮಿಸುತ್ತಿದ್ದಾರೆ. ಇಂದು ನಾನು ಇಲ್ಲಿರುವುದು ಅದೃಷ್ಟವೇ ಸರಿ. 2027ರಲ್ಲಿ ಹರಿದ್ವಾರದಲ್ಲಿ ಕುಂಭ ಮೇಳ ನಡೆಯಲಿದ್ದು, ಈಗಾಗಲೇ ನಾವು ಸಿದ್ಧತೆ ನಡೆಸಿರುವುದಾಗಿ ತಿಳಿಸಿದರು.

**420 ಮಿಲಿಯನ್ ಭಕ್ತರಿಂದ ಸ್ನಾನ:** ಭಾನುವಾರ ಒಂದೇ ದಿನದಂದು 8.429 ಮಿಲಿಯನ್ ಭಕ್ತರು ಪವಿತ್ರ ಸ್ನಾನ ನೆರವೇರಿಸಿದ್ದಾರೆ. ಮಹಾಕುಂಭ ಆರಂಭವಾದಾಗಿನಿಂದ ಇಲ್ಲಿಯವರೆಗೆ 420 ಮಿಲಿಯನ್ ಭಕ್ತರು ಪವಿತ್ರ ಸ್ನಾನ ನಡೆಸಿದ್ದಾರೆ ಎಂದು ಉತ್ತರ ಪ್ರದೇಶ ಸರ್ಕಾರ ತಿಳಿಸಿದೆ. ಜನವರಿ 13ರ ಪುಷ್ಯ ಪೂರ್ಣಿಮೆಯಿಂದ ಆರಂಭವಾಗಿರುವ ಮಹಾಕುಂಭ ಮೇಳೆ. ಜಗತ್ತಿನ ಅತಿದೊಡ್ಡ ಧಾರ್ಮಿಕ ಮತ್ತು ಆಧ್ಯಾತ್ಮಿಕ ಕಾರ್ಯವಾಗಿದ್ದು, ಎಲ್ಲೆಡೆಯಿಂದ ಜನರನ್ನು ಆಕರ್ಷಿಸುತ್ತಿದೆ. ಈ ಮಹಾ ಕುಂಭಮೇಳ ಫೆ 26ರಂದು ಮುಕ್ತಾಯವಾಗಲಿದೆ.

# ರಾಜ್ ಠಾಕ್ರೆ ಭೇಟಿಯಾದ ಸಿಎಂ ದೇವೇಂದ್ರ ಫಡ್ನವೀಸ್



**ಮುಂಬೈ:** ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರು ಮಹಾರಾಷ್ಟ್ರ ನವನಿರ್ಮಾಣ ಸೇನೆ ಅಧ್ಯಕ್ಷ ರಾಜ್ ಠಾಕ್ರೆ ಅವರನ್ನು ಭೇಟಿ ಮಾಡಿದ್ದಾರೆ. ಶಿವಾಜಿ ಪಾರ್ಕ್ ಪ್ರದೇಶದಲ್ಲಿರುವ ರಾಜ್ ಠಾಕ್ರೆ ಅವರ ಶಿವತೀರ್ಥ ನಿವಾಸದಲ್ಲಿ ಈ ಭೇಟಿ ನಡೆದಿದೆ.

ಸಿಎಂ ಫಡ್ನವೀಸ್ ಅವರೊಂದಿಗೆ ಮೋಹಿತ್ ಕಮಬೋಸೆ ಹಾಜರಿದ್ದರು. ಮನಸೆ ಕಡೆಯಿಂದ ಬಾಳಾ ನಂದಗಾಂವಕರ, ನಿತಿನ್ ಸರದೇಸಾಯಿ ಮತ್ತು ಸಂದೀಪ ದೇಶಪಾಂಡೆ ಸಭೆಯಲ್ಲಿ ಹಾಜರಿದ್ದರು.

ಲೋಕಸಭಾ ಚುನಾವಣೆಯಲ್ಲಿ ಭೇಷರತ್ ಬೆಂಬಲ ನೀಡಿದ್ದ ರಾಜ್ : ಲೋಕಸಭಾ ಚುನಾವಣೆಯಲ್ಲಿ ಎಂ ಎನ್ ಎಸ್ ಅಧ್ಯಕ್ಷ ರಾಜ್ ಠಾಕ್ರೆ ಮಹಾಯುತಿಗೆ ಬೇಷರತ್ತಾಗಿ ಬೆಂಬಲ ನೀಡಿದ್ದರು. ಆದರೆ ವಿಧಾನಸಭಾ ಚುನಾವಣೆಯಲ್ಲಿ ಎಂ ಎನ್ ಎಸ್ ಸ್ವಂತ ಬಲದ ಮೇಲೆ ಸ್ಪರ್ಧಿಸಿತ್ತು. ಆದರೆ ಅದರ ಯಾವ ಶಾಸಕರೂ ಆಯ್ಕೆಯಾಗಲಿಲ್ಲ.

ಸ್ಥಳೀಯಸಂಸ್ಥೆ ಚುನಾವಣೆ ಹಿನ್ನೆಲೆ ನಡೆಯಿತಾ ಭೇಟಿ:ಸದ್ಯ ಮಹಾರಾಷ್ಟ್ರದಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆಗಳು ನಡೆಯಬೇಕಿವೆ. ಎಂ ಎನ್ ಎಸ್ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಸ್ವಂತವಾಗಿ ಸ್ಪರ್ಧಿಸುತ್ತದೆಯೇ ಅಥವಾ ಮಹಾಯುತಿ ಮೈತ್ರಿಕೂಟವನ್ನು ಬೆಂಬಲಿಸುತ್ತದೆಯೇ ಎಂದು ನೋಡಬೇಕಾಗಿದೆ.

ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಮತ್ತು ರಾಜ್ ಠಾಕ್ರೆ ಸ್ಥಳೀಯ ಸಂಸ್ಥೆಗಳ ಚುನಾವಣೆಯ ಬಗ್ಗೆ ಚರ್ಚಿಸುವ ಸಾಧ್ಯತೆಯಿದೆ. ಮತ್ತೊಂದೆಡೆ, ರಾಜ್ ಠಾಕ್ರೆ ಪುತ್ರ ಅಮಿತ್ ಠಾಕ್ರೆ ಅವರನ್ನು ಬಿಜೆಪಿ ಕೋಟಾದಿಂದ ವಿಧಾನ ಪರಿಷತ್ತಿಗೆ ಕಳುಹಿಸುವ ಸಾಧ್ಯತೆಯಿದೆ.

ಏತನ್ಮಧ್ಯೆ ಈ ಬಗ್ಗೆ ಪ್ರತಿಕ್ರಿಯೆ ನೀಡಿದ ಸಂಜಯ್ ರಾವುತ್, "ರಾಜ್ ಠಾಕ್ರೆ ಶಿವಾಜಿ ಪಾರ್ಕ್‌ನಲ್ಲಿ ಒಂದು ಹೋಟೆಲ್ ಆರಂಭಿಸಿದ್ದಾರೆ. ಅದು ನನಗೆ ತಿಳಿದಿರುವುದು ಅಷ್ಟೆ. ಜನರು ನಿರಂತರವಾಗಿ ಚಹಾ ಕುಡಿಯಲು ಅಲ್ಲಿಗೆ ಹೋಗುತ್ತಿದ್ದಾರೆ. ಹೋಟೆಲ್‌ಗೆ ಎಲ್ಲರಿಗೂ ಮುಕ್ತ ಪ್ರವೇಶವಿದೆ. ರಾಜಕೀಯದಲ್ಲಿ ಇಂಥ ಚಹಾ ಸಭೆಗಳು ನಡೆಯುತ್ತಿರುವುದು ಒಳ್ಳೆಯದು. ಜನರು ಅಲ್ಲಿಗೆ ಹೋಗಿ ದೃಶ್ಯಾವಳಿಗಳನ್ನು ನೋಡಬೇಕು" ಎಂದು ಹೇಳಿದರು.

# ಎಲ್ಲರಿಗೂ ಆಹಾರ ಭದ್ರತೆ ನೀಡಲು ತ್ವರಿತವಾಗಿ ಜನಗಣತಿ ನಡೆಸಿ: ಕೇಂದ್ರಕ್ಕೆ ಸೋನಿಯಾ ಗಾಂಧಿ ಒತ್ತಾಯ

**ನವದೆಹಲಿ:** ದೇಶದಲ್ಲಿ ಆದಷ್ಟು ಬೇಗ ಜನಗಣತಿ ನಡೆಬೇಕೆಂದು ಕಾಂಗ್ರೆಸ್ ಹಿರಿಯ ನಾಯಕಿ ಸೋನಿಯಾ ಗಾಂಧಿ ಸೋಮವಾರ ಕೇಂದ್ರ ಸರಕಾರಕ್ಕೆ ಆಗ್ರಹಿಸಿದ್ದಾರೆ. ಆಹಾರ ಭದ್ರತಾ ಕಾನೂನಿನಡಿ ಸೌಲಭ್ಯಗಳಿಂದ ವಂಚಿತರಾಗಿರುವ ದೇಶದ ಸುಮಾರು 14 ಕೋಟಿ ಜನರಿಗೆ ಆಹಾರ ಭದ್ರತೆ ಒದಗಿಸಲು ಬೇಗನೆ ಜನಸಂಖ್ಯಾ ಗಣತಿ ನಡೆಸಬೇಕು ಎಂದು ಅವರು ಹೇಳಿದ್ದಾರೆ.



ರಾಜ್ಯಸಭೆಯಲ್ಲಿ ಇದೇ ಮೊದಲ ಬಾರಿಗೆ ಶೂನ್ಯ ವೇಳೆಯಲ್ಲಿ ಮಾತನಾಡಿದ ಸೋನಿಯಾ ಗಾಂಧಿ, ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ ಅಡಿ ಫಲಾನುಭವಿಗಳನ್ನು ಈಗಲೂ 2011 ರ ಜನಗಣತಿಯ ಆಧಾರದಲ್ಲಿ ಗುರುತಿಸಲಾಗುತ್ತಿದೆಯೇ ಹೊರತು ಇತ್ತೀಚಿನ ಜನಸಂಖ್ಯೆಯ ಅಂಕಿ – ಅಂಶಗಳ ಮೇಲಲ್ಲ ಎಂದು ಹೇಳಿದರು.

ನಾವು ತಂದ ಆಹಾರ ಭದ್ರತೆ ಕಾಯ್ದೆಯೇ ಕೋವಿಡ್ ನಲ್ಲಿ ಪ್ರಮುಖ ಪಾತ್ರ ವಹಿಸಿದ್ದು: ಸೆಪ್ಟೆಂಬರ್ 2013 ರಲ್ಲಿ ಯುಪಿಎ ಸರ್ಕಾರ ಪರಿಚಯಿಸಿದ ದೇಶದ 140 ಕೋಟಿ ಜನಸಂಖ್ಯೆಗೆ ಆಹಾರ ಮತ್ತು ಪೌಷ್ಠಿಕಾಂಶದ ಭದ್ರತೆಯನ್ನು ಖಾತ್ರಿಪಡಿಸುವ ಗುರಿ ಹೊಂದಿರುವ ಹೆಗ್ಗುರುತು ಕಾಯ್ದೆಯಾಗಿದೆ. ವಿಶೇಷವಾಗಿ ಕೋವಿಡ್ –19 ಬಿಕ್ಕಟ್ಟಿನ ಸಮಯದಲ್ಲಿ ಲಕ್ಷಾಂತರ ದುರ್ಬಲ ಕುಟುಂಬಗಳನ್ನು ಹಸಿವಿನಿಂದ ರಕ್ಷಿಸುವಲ್ಲಿ ಈ ಶಾಸನವು ಪ್ರಮುಖ ಪಾತ್ರ ವಹಿಸಿದೆ ಎಂದು ಸೋನಿಯಾ ಬಣ್ಣಿಸಿದರು.

ಫಲಾನುಭವಿಗಳಿಗೆ ನೀಡಲಾಗುವ ಆಹಾರದ ಕೋಟಾವನ್ನು ಈಗಲೂ 2011 ರ ಜನಗಣತಿಯ ಆಧಾರದ ಮೇಲೆ ನಿರ್ಧರಿಸಲಾಗುತ್ತಿದೆ. ಆದರೆ, ಈ ಅಂಕಿ – ಸಂಖ್ಯೆಗಳು ಒಂದು ದಶಕದಷ್ಟು ಹಳೆಯದಾಗಿವೆ ಎಂದು ಅವರು ಹೇಳಿದರು.

ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ, 2013ರ ಅನ್ವಯ ದೇಶದ ಗ್ರಾಮೀಣ ಜನಸಂಖ್ಯೆಯ 75 ಪ್ರತಿಶತ ಮತ್ತು ನಗರ ಜನಸಂಖ್ಯೆಯ 50 ಪ್ರತಿಶತದಷ್ಟು ಜನರಿಗೆ ಸಾರ್ವಜನಿಕ ಪಡಿತರ ವಿತರಣಾ ವ್ಯವಸ್ಥೆ (ಟಿಪಿಡಿಎಸ್) ಅಡಿಯಲ್ಲಿ ಸಬ್ಸಿಡಿ ದರದಲ್ಲಿ ಆಹಾರ ಧಾನ್ಯಗಳನ್ನು ನೀಡಲಾಗುತ್ತಿದೆ. 2011 ರ ಜನಗಣತಿಯ ಪ್ರಕಾರ ಸುಮಾರು 81.35 ಕೋಟಿಯಷ್ಟು ಜನರಿಗೆ ಈ ವ್ಯವಸ್ಥೆಯಡಿ ಆಹಾರ ಧಾನ್ಯ ಪೂರೈಸಲಾಗುತ್ತಿದೆ. ಪ್ರಸ್ತುತ, ಕೇಂದ್ರ ಸರ್ಕಾರವು ಆಹಾರ ಭದ್ರತಾ ಕಾನೂನಿನ ಅಡಿಯಲ್ಲಿ ಪ್ರತಿ ವ್ಯಕ್ತಿಗೆ ತಿಂಗಳಿಗೆ 5 ಕೆಜಿ ಉಚಿತ ಆಹಾರ ಧಾನ್ಯಗಳನ್ನು ಒದಗಿಸುತ್ತದೆ.

"ಸ್ವತಂತ್ರ ಭಾರತದ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಹತ್ತು ವರ್ಷಗಳಿಗೊಮ್ಮೆ ನಡೆಯಬೇಕಾದ ಜನಗಣತಿ ನಾಲ್ಕು ವರ್ಷಗಳಿಗಿಂತ ಹೆಚ್ಚು ವಿಳಂಬವಾಗಿದೆ. ಮೂಲತಃ 2021 ರಲ್ಲಿ ಜನಗಣತಿ ನಡೆಯಬೇಕಿತ್ತು. ಆದರೆ, ಈಗ ಜನಗಣತಿ ಯಾವಾಗ ನಡೆಯಲಿದೆ ಎಂಬುದರ ಬಗ್ಗೆ ಇನ್ನೂ ಸ್ಪಷ್ಟತೆ ಸಿಗುತ್ತಿಲ್ಲ. ಬಜೆಟ್ ಅವಲೋಕಿಸಿದರೆ ಈ ವರ್ಷವೂ ಜನಗಣತಿ ನಡೆಯುವ ಸಾಧ್ಯತೆಗಳು ಕಾಣಿಸುತ್ತಿಲ್ಲ" ಎಂದು ಅವರು ಹೇಳಿದರು.

ಹೊಸದಾಗಿ ಜನಗಣತಿ ನಡೆಯದ್ದರಿಂದ ಸುಮಾರು 14 ಕೋಟಿ ಅರ್ಹ ಭಾರತೀಯರು ಆಹಾರ ಸೌಲಭ್ಯಗಳಿಂದ ವಂಚಿತರಾಗುತ್ತಿದ್ದಾರೆ ಎಂದು ಅವರು ನುಡಿದರು.

# ಎಐ ಶೃಂಗಸಭೆ, ಫ್ರಾನ್ಸ್‌ಗೆ ಹೊರಟ ಪ್ರಧಾನಿ ಮೋದಿ

ಪ್ರಧಾನಿ ನರೇಂದ್ರ ಮೋದಿ ಫ್ರಾನ್ಸ್‌ನಲ್ಲಿ ನಡೆಯಲಿರುವ ಎಐ ಕ್ರಿಯಾ ಶೃಂಗಸಭೆಯಲ್ಲಿ ಪಾಲ್ಗೊಳ್ಳಲು ಭಾರತದಿಂದ ಫ್ರಾನ್ಸ್‌ನತ್ತ ಪ್ರಯಾಣ ಬೆಳೆಸಿದ್ದಾರೆ. ಅವರು ಫ್ರೆಂಚ್ ಅಧ್ಯಕ್ಷ ಮ್ಯಾಕ್ರನ್ ಅವರೊಂದಿಗೆ ಫ್ರಾನ್ಸ್‌ನಲ್ಲಿ ಮೊದಲ ಭಾರತೀಯ ಕಾನ್ಸುಲೇಟ್ ಅನ್ನು ಉದ್ಘಾಟಿಸಲು ಮಾರ್ಸಿಲ್ಲೆಗೆ ಭೇಟಿ ನೀಡಲಿದ್ದಾರೆ ಮತ್ತು ಅಂತಾರಾಷ್ಟ್ರೀಯ ಥರ್ಮೋನ್ಯೂಕ್ಲಿಯರ್ ಪ್ರಾಯೋಗಿಕ ರಿಯಾಕ್ಟರ್ ಯೋಜನೆ ಬಗ್ಗೆ ಮಾಹಿತಿ ಪಡೆಯಲಿದ್ದಾರೆ.

ಫ್ರಾನ್ಸ್ ನಂತರ, ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಆಹ್ವಾನದ ಮೇರೆಗೆ ಅವರು ಎರಡು ದಿನಗಳ ಅಮೆರಿಕ ಭೇಟಿಗೆ ಭೇಟಿ ನೀಡಲಿದ್ದಾರೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಎಐ ಮಹತ್ವಾಕಾಂಕ್ಷೆಗಳು ಮತ್ತು ಚೀನಾದ ಚಾಟ್‌ಬಾಟ್ ಡೀಪ್‌ಸೀಕ್ ಬಗ್ಗೆ ಪ್ಯಾರಿಸ್‌ನಲ್ಲಿ ಕೃತಕ ಬುದ್ಧಿಮತ್ತೆ ಶೃಂಗಸಭೆ ಪ್ರಾರಂಭವಾಗಲಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಮಂಗಳವಾರ ಫ್ರೆಂಚ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಅವರೊಂದಿಗೆ ಎಐ ಶೃಂಗಸಭೆ –2025 ರ ಸಹ–ಅಧ್ಯಕ್ಷತೆ ವಹಿಸಲಿದ್ದಾರೆ. ಅಮೆರಿಕದ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಕೂಡ ಉಪಸ್ಥಿತರಿರುತ್ತಾರೆ. ಪ್ರಧಾನಿ ಮೋದಿ ಬುಧವಾರ ಫ್ರೆಂಚ್ ಕಂಪನಿಗಳ ಮುಖ್ಯಸ್ಥರನ್ನು ಭೇಟಿ ಮಾಡಲಿದ್ದಾರೆ. ಸಮ್ಮೇಳನದಲ್ಲಿ, ಜಾಗತಿಕ ನಾಯಕರು, ಅಧಿಕಾರಿಗಳು ಮತ್ತು ತಜ್ಞರು ಎಐ ತಂತ್ರಜ್ಞಾನದ ಅಭಿವೃದ್ಧಿಗೆ ನಿರ್ದೇಶನ ನೀಡುವ ವಿಷಯದ ಕುರಿತು ಚರ್ಚಿಸಲಿದ್ದಾರೆ. ಜಾಗತಿಕವಾಗಿ ಹೆಚ್ಚುತ್ತಿರುವ ಚೀನಾದ ಪ್ರಭಾವವನ್ನು ತಗ್ಗಿಸುವುದಕ್ಕಾಗಿ ಭಾರತ– ಮಧ್ಯಪ್ರಾಚ್ಯ–ಯುರೋಪ್ ಆರ್ಥಿಕ ಕಾರಿಡಾರ್ ನಿರ್ಮಾಣದ ಬಗ್ಗೆ ಪ್ರಧಾನಿ ಮೋದಿ ಹಾಗೂ ಟ್ರಂಪ್ ಮಾತುಕತೆ ನಡೆಸಲಿದ್ದಾರೆ ಎನ್ನಲಾಗಿದೆ.

ಇಂದು ಬಹುರಾಷ್ಟ್ರೀಯ ಮೂಲಸೌಕರ್ಯ ಉಪಕ್ರಮವಾಗಿದ್ದು, ಗೌತಮ್ ಅದಾನಿ ಅವರು ಇದರಲ್ಲಿ ಪ್ರಮುಖ ಹೂಡಿಕೆದಾರರಾಗಿದ್ದಾರೆ. ಭಾರತವನ್ನು ಮಧ್ಯಪ್ರಾಚ್ಯದ ಮೂಲಕ ಯುರೋಪ್‌ಗೆ ಸಂಪರ್ಕಿಸುವ ಆರ್ಥಿಕ ಕಾರಿಡಾರ್ ಇದಾಗಿದ್ದು, ಚೀನಾದ ಒನ್‌ಬೆಲ್ಟ್ ಒನ್ ರೋಡ್ ಯೋಜನೆಗೆ ಸಡ್ಡು ಹೊಡೆಯಲು ಇದನ್ನು ನಿರ್ಮಾಣ ಮಾಡಲಾಗುತ್ತಿದೆ. ಮೊದಲ ದಿನ ಪ್ಯಾರಿಸ್‌ಗೆ ಭೇಟಿ ನೀಡಲಿರುವ ಪ್ರಧಾನಿ ಮೋದಿ, ಎಐ ಸಮ್ಮೇಳನದಲ್ಲಿ ಭಾಗಿಯಾಗಲಿದ್ದಾರೆ. ಬಳಿಕ ಮಾರ್ಸಿಲ್ಲೆಯಲ್ಲಿ ನಿರ್ಮಾಣ ಮಾಡಲಾಗಿರುವ ಭಾರತದ ದೂತಾವಾಸ ಕಚೇರಿಯನ್ನು ಉದ್ಘಾಟನೆ ಮಾಡಲಿದ್ದಾರೆ. ಬಳಿಕ 1ನೇ ಮಹಾಯುದ್ಧದ ಸಮಯದಲ್ಲಿ ಮಡಿದ ಭಾರತೀಯ ಸೈನಿಕರಿಗೆ ಗೌರವ ಸಲ್ಲಿಸಲಿದ್ದಾರೆ.

ಕಳೆದ 2 ವರ್ಷದಲ್ಲಿ 2ನೇ ಬಾರಿ ಮೋದಿ ಫ್ರಾನ್ಸ್ ಭೇಟಿ ಕೈಗೊಳ್ಳುತ್ತಿದ್ದು, ಇದಾದ ಬಳಿಕ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಭೇಟಿ ಮಾಡುವುದಕ್ಕಾಗಿ ಅಮೆರಿಕಕ್ಕೆ ಪ್ರವಾಸ ಕೈಗೊಳ್ಳಲಿದ್ದಾರೆ. ಪ್ರಧಾನಿ ಮೋದಿ ಅವರು ಫೆ.12ರಿಂದ 2 ದಿನಗಳ ಕಾಲ ಅಮೆರಿಕ ಪ್ರವಾಸ ಕೈಗೊಳ್ಳಲಿದ್ದು, ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಮೋದಿ ಅವರ ಈ ಭೇಟಿ ಉಭಯ ದೇಶಗಳ ನಡುವಿನ ಸಂಬಂಧವನ್ನು ಮತ್ತಷ್ಟು ಬಲಗೆಣಟಿಜಜಜಿಟಿಜಜಳಿಸಲಿದೆ ಎಂದು ವಿದೇಶಾಂಗ ಸಚಿವಾಲಯ ಹೇಳಿದೆ. ಡೊನಾಲ್ಡ್ ಟ್ರಂಪ್ 2ನೇ ಬಾರಿಗೆ ಅಮೆರಿಕ ಅಧ್ಯಕ್ಷರಾದ ಬಳಿಕ ಪ್ರಧಾನಿ ಮೋದಿ ಅವರು ಅಮೆರಿಕಕ್ಕೆ ಮೊದಲ ಬಾರಿ ಭೇಟಿ ನೀಡುತ್ತಿದ್ದಾರೆ. ಭಾರತ ಸೇರಿದಂತೆ ಬ್ರಿಕ್ಸ್ ರಾಷ್ಟ್ರಗಳ ಮೇಲೆ ತೆರಿಗೆ ವಿಧಿಸುವುದಾಗಿ ಟ್ರಂಪ್ ಘೋಷಿಸಿದ ಬಳಿಕ ಈ ಭೇಟಿ ಮಹತ್ವ ಪಡೆದಿದೆ.

# ಈ ವರ್ಷ 80ಕ್ಕೂ ಹೆಚ್ಚು ನಕ್ಸಲರ ಹತ್ಯೆ

**ಬಿಜಾಪುರ (ಛತ್ತೀಸ್‌ಗಢ):** ನಕ್ಸಲ್ ನಿಗ್ರಹ ಪಡೆ ಮತ್ತು ನಕ್ಸಲರ ನಡುವಣ ಗುಂಡಿನ ಚಕಮಕಿಯಲ್ಲಿ 31 ಮಂದಿ ಮಾವೋಗಳು ಸಾವನ್ನಪ್ಪಿದ್ದು, ಇಬ್ಬರು ಯೋಧರು ಹುತಾತ್ಮರಾಗಿದ್ದಾರೆ. ಮತ್ತಿಬ್ಬರು ಯೋಧರು ಗಾಯಗೊಂಡಿದ್ದಾರೆ. ಈ ವೇಳೆ ನಕ್ಸಲರಿಂದ ಭಾರೀ ಪ್ರಮಾಣದ ಶಸ್ತ್ರಾಸ್ತ್ರಗಳನ್ನು ವಶಕ್ಕೆ ಪಡೆಯಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಅಪಾರ ಪ್ರಮಾಣದ ಶಸ್ತ್ರಾಸ್ತ್ರಗಳ ವಶ: ಘಟನೆ ಕರಿತು ಮಾಹಿತಿ ನೀಡಿರುವ ದಂತೇವಾಡ ಡಿಐಜಿ ಕಮಲೋಚನ್ ಕಶ್ಯಪ್, ಬಿಜಾಪುರ ಜಿಲ್ಲೆಯ ಇಂದ್ರಾವತಿ ರಾಷ್ಟ್ರೀಯ ಉದ್ಯಾನವನದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮಾವೋಗಳು ಇರುವ ಖಚಿತ ಮಾಹಿತಿ ದೊರೆತಿತ್ತು. ಈ ಮಾಹಿತಿ ಹಿನ್ನೆಲೆ ನಮ್ಮ ನಕ್ಸಲ್ ನಿಗ್ರಹ ಪಡೆ ಭಾನುವಾರ ಬೆಳಗ್ಗೆ ದಾಳಿ ನಡೆಸಿ, 31 ನಕ್ಸಲರನ್ನು ಹೊಡೆದುರುಳಿಸಿದೆ.

ಈ ಸಂದರ್ಭದಲ್ಲಿ ನಮ್ಮ ಇಬ್ಬರು ಯೋಧರು ವೀರಮರಣವನ್ನಪ್ಪಿದರೆ, ಮತ್ತಿಬ್ಬರು ಗಾಯಗೊಂಡಿದ್ದಾರೆ. ಅವರನ್ನ ಆಸ್ಪತ್ರೆಗೆ ಸೇರಿಸಲಾಗಿದೆ. ಕಾರ್ಯಾಚರಣೆ ವೇಳೆ, ಎಕೆ 47, ಐಎನ್‌ಎಸ್‌ಎಸ್, ಎಸ್‌ಎಲ್‌ಆರ್ ಬಿಜಿಎಲ್ ಲಾಂಚರ್ ಸೇರಿದಂತೆ ಶಸ್ತ್ರಾಸ್ತ್ರಗಳು, ಕಾರ್ಟ್ರಿಡ್ಜ್‌ಗಳು, ಬಿಜಿಎಲ್ ಸೆಲ್ ಟಿಫಿನ್ ಬಾಂಬ್‌ಗಳು, ನಕ್ಸಲೀಯ ದಾಖಲೆಗಳು, ನಕ್ಸಲೀಯ ಸಮವಸ್ತ್ರಗಳು, ಇತರ ಸ್ಫೋಟಕ ವಸ್ತುಗಳು ಮತ್ತು ದೈನಂದಿನ ಬಳಕೆಯ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅವರು ವಿವರಣೆ ನೀಡಿದ್ದಾರೆ.

ಅಪಾಯಕಾರಿ ಸುಖಾ ಕೂಡ ವಶಕ್ಕೆ: ಇದೆ ವೇಳೆ ನಕ್ಸಲರು ಸುಖಾ ಎಂದು ಕರೆಯುವ ಲಾಂಚರ್ ಅನ್ನು ಸಹ ವಶಪಡಿಸಿಕೊಳ್ಳಲಾಗಿದೆ. ಇದು ಅತ್ಯಂತ ದೊಡ್ಡ ಸ್ಫೋಟಕವಾಗಿದ್ದು, ಹೆಚ್ಚು ಹಾನಿಕಾರಕವಾಗಿದೆ. ಇದನ್ನು ಬ್ಯಾಟರಿ ಮೂಲಕ ಕಾರ್ಯಾಚರಣೆ ಮಾಡಲಾಗುತ್ತದೆ. ನಕ್ಸಲರ ತಾಂತ್ರಿಕ ತಂಡ ಇದನ್ನು ತಯಾರಿಸಿದೆ ಎಂದು ಡಿಐಜಿ ಮಾಹಿತಿ ನೀಡಿದರು. ಶೋಧದ ವೇಳೆ ಯಾವುದೇ ಗನ್ ಫ್ಯಾಕ್ಟರಿ ಪತ್ತೆಯಾಗಿಲ್ಲ. ಬಿಜಾಪುರ ಮತ್ತು ಸುಕ್ಮಾದ ಗಡಿ ಪ್ರದೇಶದ ಧರ್ಮಾವರಂ ಶಿಬಿರದಲ್ಲಿಯೂ ಸೈನಿಕರು ಸುಖಾವನ್ನು ಬಳಸಲಾಗಿದೆ ಎಂದು ಕಶ್ಯಪ್ ಹೇಳಿದರು. ಮತ್ತಷ್ಟು ಕಾರ್ಯಾಚರಣೆ ನಡೆಯಲಿವೆ: ಬಿಜಾಪುರದ ಇಂದ್ರಾವತಿ ಹುಲಿ ಸಂರಕ್ಷಿತಾರಣ್ಯದಲ್ಲಿ ನಕ್ಸಲ್ ಚಟುವಟಿಕೆಗಳನ್ನು ತಡೆಯುವ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅಧಿಕಾರಿಗಳು, ಹಲವು ವರ್ಷಗಳಿಂದ ಇಂದ್ರಾವತಿ ಹುಲಿ ಸಂರಕ್ಷಿತ ಪ್ರದೇಶದ ಅಣ್ಣಾಪುರ ಮತ್ತು ಬಡೇ ಕಾಕ್ಲೇರ್ ನಕ್ಸಲರ ಮೂಲ ಪ್ರದೇಶವಾಗಿದೆ. ಇದನ್ನು ಕೇವಲ ಒಂದು ಅಥವಾ ಎರಡು ಎನ್‌ಕೌಂಟರ್‌ಗಳ ಆಧಾರದ ಮೇಲೆ ಹೇಳಲಾಗುವುದಿಲ್ಲ. ಇಲ್ಲಿ ಅನೇಕ ಕಾರ್ಯಾಚರಣೆಗಳನ್ನು ನಡೆಸಬೇಕಿದೆ ಎಂದು ಸೇನಾಧಿಕಾರಿಗಳು ಹೇಳಿದ್ದಾರೆ.

2025ನೇ ಸಾಲಿನಲ್ಲಿ ಛತ್ತೀಸ್‌ಗಢದಲ್ಲಿ ಹತ್ಯೆಗೀಡಾದವರ ಒಟ್ಟು ಸಂಖ್ಯೆ 81ಕ್ಕೆ ಏರಿಕೆ ಆಗಿದೆ. ಡಿಸೆಂಬರ್ 2023 ರಿಂದ ಛತ್ತೀಸ್‌ಗಢದಲ್ಲಿ ಮುಖ್ಯಮಂತ್ರಿ ವಿಷ್ಣು ದೇವ್ ಸಾಯಿ ಅವರ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ, ಮಾವೋವಾದಿ ವಿರೋಧಿ ಕಾರ್ಯಾಚರಣೆಗಳು ಮತ್ತು ಎನ್‌ಕೌಂಟರ್‌ಗಳು ಹೆಚ್ಚಾಗಿವೆ. ಕಳೆದ ವರ್ಷ 219 ಮಾವೋವಾದಿಗಳು ಎನ್‌ಕೌಂಟರ್‌ಗಳಲ್ಲಿ ಮೃತಪಟ್ಟಿದ್ದಾರೆ ಎಂದು ಅಧಿಕಾರಿಗಳ ಮೂಲಗಳು ಹೇಳಿವೆ.

# ಮೂಲಸೌಕರ್ಯ ಅಭಿವೃದ್ಧಿಗೆ ಗಣನೀಯ ವೆಚ್ಚ: ಸಚಿವ ಜ್ಯೋತಿರಾದಿತ್ಯ

**ನವದೆಹಲಿ:** ಕಳೆದ ಒಂದು ವರ್ಷದಲ್ಲಿ ಮೋದಿ ನೇತೃತ್ವದ ಸರ್ಕಾರ ದೇಶದಲ್ಲಿ ಮೂಲಸೌಕರ್ಯ ಅಭಿವೃದ್ಧಿಗೆ 11 ಲಕ್ಷ ಕೋಟಿ ರೂ ವೆಚ್ಚ ಮಾಡಿದೆ. ಹಿಂದೆ ಕಾಂಗ್ರೆಸ್ ನೇತೃತ್ವದ ಯುಪಿಎ ಸರ್ಕಾರ ಇದ್ದಾಗ ಒಂದು ವರ್ಷದಲ್ಲಿ ಇನ್‌ಫ್ರಾಸ್ಟ್ರಕ್ಚರ್ ಅಭಿವೃದ್ಧಿಗೆ ವ್ಯಯಿಸುತ್ತಿದ್ದುದು 2 ಲಕ್ಷ ಕೋಟಿ ರೂ ಮಾತ್ರವೇ ಎಂದು ಕೇಂದ್ರ ಸಚಿವ ಜ್ಯೋತಿರಾದಿತ್ಯ ಸಿಂದಿಯಾ ಎರಡು ಸರ್ಕಾರಗಳ ಸಾಧನೆಗಳನ್ನು ತುಲನೆ ಮಾಡಿದ್ದಾರೆ. 'ಹಿಂದೆ ಶೇ. 90ರಷ್ಟು ಫೋನ್‌ಗಳನ್ನು ಆಮದು ಮಾಡಿಕೊಳ್ಳಲಾಗುತ್ತಿತ್ತು. ಈಗ ಶೇ. 90ರಷ್ಟು ಫೋನ್‌ಗಳನ್ನು ಭಾರತದಲ್ಲೇ ತಯಾರಿಸಲಾಗುತ್ತಿದೆ. 1.28 ಲಕ್ಷ ಕೋಟಿ ರೂ ಮೌಲ್ಯದ ಸ್ಮಾರ್ಟ್‌ಫೋನ್‌ಗಳನ್ನು ರಫ್ತು ಮಾಡಲಾಗುತ್ತಿದೆ' ಎಂದು ಸಚಿವರು ಹೇಳಿದ್ದಾರೆ. ಹಿಂದಿನ ಯುಪಿಎ ಸರ್ಕಾರದ ಅವಧಿಯಲ್ಲಿ ಬ್ಯಾಂಕುಗಳಿಗೆ ಅನುತ್ಪಾದಕ ಆಸ್ತಿಗಳ (ಎನ್‌ಪಿಎ) ಹೊರೆ ಬಹಳ ಇತ್ತು. 2014ರಲ್ಲಿ ಬ್ಯಾಂಕುಗಳ ಎನ್‌ಪಿಎ ಪ್ರಮಾಣ ಶೇ. 11.5ರಷ್ಟಿತ್ತು. ಈಗ ಅದು ಶೇ. 2.6ಕ್ಕೆ ಇಳಿಕೆ ಆಗಿದೆ ಎಂದು ಮಾಜಿ ಕಾಂಗ್ರೆಸ್ಸಿಗರೂ ಆದ ಜ್ಯೋತಿರಾದಿತ್ಯ ಸಿಂದಿಯಾ ಅಭಿಪ್ರಾಯಪಟ್ಟಿದ್ದಾರೆ. ಕಳೆದ ಒಂದು ವರ್ಷದಲ್ಲಿ 2,031 ಕಿಮೀಯಷ್ಟು ರೈಲ್ವೆ ಲೈನ್‌ಗಳು, ಆರು ಸಾವಿರ ಕಿಮೀ ರಾಷ್ಟ್ರೀಯ ಹೆದ್ದಾರಿಗಳನ್ನು ನಿರ್ಮಿಸಲಾಗಿದೆ. ಟೆಲಿಕಾಂ ಸೆಕ್ಟರ್‌ನಲ್ಲಿ 10,000ಕ್ಕೂ ಹೆಚ್ಚು ಗ್ರಾಮಗಳಲ್ಲಿ ಟವರ್‌ಗಳನ್ನು ಸ್ಥಾಪಿಸುವ ಮೂಲಕ ಕನೆಕ್ಟಿವಿಟಿ ಹೆಚ್ಚಿಸಲಾಗಿದೆ ಎಂದು ಕೇಂದ್ರ ಸಚಿವರು ಮಾಹಿತಿ ನೀಡಿದ್ದಾರೆ.

ಭಾರತದ ರಫ್ತು ಒಂದು ವರ್ಷದಲ್ಲಿ 600 ಬಿಲಿಯನ್ ಡಾಲರ್‌ಗೆ ಏರಿದೆ. ವಿದೇಶ ವಿನಿಮಯ ಮೀಸಲು ನಿಧಿ ವಿಶ್ವದಲ್ಲೇ ನಾಲ್ಕನೇ ಗರಿಷ್ಠ ಮಟ್ಟದಲ್ಲಿದೆ. ಜಾಗತಿಕ ಆರ್ಥಿಕತೆ ಶೇ. 3.2ರಷ್ಟು ಬೆಳೆದರೆ ಭಾರತದ ಪ್ರಗತಿ ಶೇ. 6.5ರಷ್ಟಿದೆ. 2027ರೊಳಗೆ ಭಾರತ ಮೂರನೇ ಅತಿದೊಡ್ಡ ಆರ್ಥಿಕತೆಯಾಗುವ ಗುರಿ ಇದೆ. ಮುಂದಿನ ಎರಡು ವರ್ಷದಲ್ಲಿ ಜರ್ಮನಿ ಮತ್ತು ಜಪಾನ್ ಆರ್ಥಿಕತೆಗಳನ್ನು ಭಾರತ ಹಿಂದಿಕ್ಕಲಿದೆ. 2028ರಲ್ಲಿ 5 ಟ್ರಿಲಿಯನ್ ಡಾಲರ್, ಹಾಗು 2030ರೊಳಗೆ 6 ಟ್ರಿಲಿಯನ್ ಡಾಲರ್ ಗಾತ್ರದ ಆರ್ಥಿಕತೆಯಾಗುವ ಗುರಿ ಇಡಲಾಗಿದೆ ಎಂದು ಸಿಂದಿಯಾ ತಿಳಿಸಿದ್ದಾರೆ.

# 'ಎಲ್ಲಾ ದೆವ್ವ'ಗಳನ್ನು ಕಿತ್ತೊಗೆಯುವ ಪಣ ತೊಟ್ಟ ಬಾಂಗ್ಲಾ



**ಢಾಕಾ/ನವದೆಹಲಿ:** ಬಾಂಗ್ಲಾದೇಶದ ಭದ್ರತಾ ಪಡೆ ಹೊಸದಾಗಿ "ಆಪರೇಷನ್ ಡೆವಿಲ್ ಹಂಟ್" ಎಂಬ ಹೆಸರಿನಡಿ 1,308 ಜನರನ್ನು ಬಂಧಿಸಿವೆ. ರಾಷ್ಟ್ರದಲ್ಲಿನ ತೀವ್ರ ವಿಧ್ವಂಸಕತೆಯ ಮಧ್ಯೆ ರಾತ್ರೋರಾತ್ರಿ ಈ ಆಪರೇಷನ್‌ನ್ನು ಕಾರ್ಯಗತಗೊಳಿಸಲಾಗಿದೆ. ಕಳೆದ ನಾಲ್ಕು ದಿನಗಳಿಂದ ಬಾಂಗ್ಲಾ ಅಶಾಂತಿಯಿಂದ ಕೂಡಿದೆ. ಮಧ್ಯಂತರ ಸರ್ಕಾರವು 'ಎಲ್ಲಾ ದೆವ್ವಗಳನ್ನು' ಬೇರು ಸಹಿತ ಕಿತ್ತೊಗೆಯುವವರೆಗೂ ಈ ಆಪರೇಷನ್‌ನ್ನು ಮುಂದುವರೆಸುವುದಾಗಿ ಪ್ರತಿಜ್ಞೆ ಮಾಡಿದೆ.

ಏನಿದು ಡೆವಿಲ್ ಹಂಟ್: ಕಾರ್ಯಾಚರಣೆಯ ಗುರಿಗಳ ಬಗ್ಗೆ ಗೃಹ ವ್ಯವಹಾರಗಳ ಸಲಹೆಗಾರ ಎಂಡಿ ಜಹಾಂಗೀರ್ ಆಲಂ ಚೌಧ್‌ರಿ ಹೇಳಿದ್ದು ಹೀಗೆ. "ದೆವ್ವ' ಎಂದರೆ ಏನು? ಅದು ದುಷ್ಟ ಶಕ್ತಿಗಳನ್ನು ಸೂಚಿಸುತ್ತದೆ. ಈ ಕಾರ್ಯಾಚರಣೆಯು ದೇಶವನ್ನು ಅಸ್ಥಿರಗೊಳಿಸಲು ಪ್ರಯತ್ನಿಸುವ, ಕಾನೂನು ಮುರಿಯಲು, ಅಪರಾಧ ಚಟುವಟಿಕೆಗಳಲ್ಲಿ ತೊಡಗಿರುವ ಮತ್ತು ಭಯೋತ್ಪಾದನಾ ಕೃತ್ಯಗಳನ್ನು ಎಸಗುವವರನ್ನು ಗುರಿಯಾಗಿರಿಸಿಕೊಂಡಿದೆ" ಎಂದು ಅವರು ವಿವರಿಸಿದ್ದಾರೆ.

ಢಾಕಾದ ಹೊರವಲಯದಲ್ಲಿರುವ ಅವಾಮಿ ಲೀಗ್ ನಾಯಕನ ಮನೆಯಲ್ಲಿ ನಡೆದ ಕೆಲ ವಿಧ್ವಂಸಕ ಕೃತ್ಯಗಳ ಸಂದರ್ಭದಲ್ಲಿ ವಿದ್ಯಾರ್ಥಿ ಕಾರ್ಯಕರ್ತರು ಗಾಯಗೊಂಡಿದ್ದರು. ಇದಾದ ನಂತರ ಮುಖ್ಯ ಸಲಹೆಗಾರ ಮುಹಮ್ಮದ್ ಯೂನಸ್ ನೇತೃತ್ವದ ಮಧ್ಯಂತರ ಸರ್ಕಾರ ಶನಿವಾರ ಈ "ಆಪರೇಷನ್ ಡೆವಿಲ್ ಹಂಟ್" ಗೆ ಆದೇಶ ನೀಡಿದೆ. ಸೇನಾ ಪಡೆಗಳು, ಪೊಲೀಸರು ಮತ್ತು ಅವರ ವಿಶೇಷ ಘಟಕಗಳನ್ನು ಒಳಗೊಂಡ ಜಂಟಿ ಪಡೆಗಳು ಕಾರ್ಯಾಚರಣೆ ಪ್ರಾರಂಭಿಸಿದ 24 ಗಂಟೆಗಳಲ್ಲಿ ದೇಶದ ವಿವಿಧ ಭಾಗಗಳಲ್ಲಿ ಪ್ರಮುಖವಾಗಿ 274 ಜನರನ್ನು ಬಂಧಿಸಿವೆ ಎಂದು ಅಲ್ಲಿನ ಪ್ರಮುಖ ಮಾಧ್ಯಮಗಳು ಭಾನುವಾರ ತಿಳಿಸಿವೆ.

ಇನ್ನು ಮಾಧ್ಯಮ ವರದಿಗಳ ಪ್ರಕಾರ, ಪದಚ್ಯುತ ಪ್ರಧಾನಿ ಶೇಖ್ ಹಸೀನಾ ಅವರ ಅವಾಮಿ ಲೀಗ್‌ನ 81 ಕಾರ್ಯಕರ್ತರನ್ನು ಢಾಕಾದ ಹೊರವಲಯದಲ್ಲಿರುವ ಗಾಜಿಪುರದಿಂದ ಬಂಧಿಸಲಾಗಿದೆ. ಈ ವೇಳೆ ಅಲ್ಲಿ ಘರ್ಷಣೆ ಕಂಡಿದ್ದು ಕೂಡಲೇ ಆಪರೇಷನ್ ಡೆವಿಲ್ ಹಂಟ್‌ಗೆ ಆದೇಶ ನೀಡಲು ಅಧಿಕಾರಿಗಳನ್ನು ಪ್ರೇರೇಪಿಸಿತು ಎಂದು ಹೇಳಲಾಗಿದೆ.

ಮೀಸಲಾತಿ ವಿಚಾರವಾಗಿ ಭುಗಿಲೆದ್ದ ಆಕ್ರೋಶ, ವಿದ್ಯಾರ್ಥಿಗಳ ಚಳವಳಿ ಶೇಖ್ ಹಸೀನಾ ಸರ್ಕಾರವನ್ನು ಕಿತ್ತೊಗೆದು, ಅವರನ್ನು ದೇಶದಿಂದ ಹೊರಹೋಗುವಂತೆ ಮಾಡಿದೆ. ಆಗ ಆರಂಭವಾದ ಹಿಂಸಾಚಾರ ಹೊಸ ಮಧ್ಯಂತರ ಸರ್ಕಾರ ಬಂದ ಮೇಲೂ ಮುಂದುವರೆದಿದೆ. ಬಾಂಗ್ಲಾದೇಶದಲ್ಲಿ ಅಲ್ಲಿನ ಅಲ್ಪಸಂಖ್ಯಾತ ಹಿಂದೂಗಳ ಮೇಲೆ ನಿರಂತರ ದಾಳಿ ಮುಂದುವರೆದಿದೆ. ಈ ನಡುವೆ ಮೊನ್ನೆ ಮೊನ್ನೆ ಬಾಂಗ್ಲಾ ದೇಶದ ಮೊದಲ ಪ್ರಧಾನಿ ನಿವಾಸದ ಮೇಲೆ ದಾಳಿ ನಡೆಸಿ ಬೆಂಕಿ ಹಚ್ಚಲಾಗಿದೆ.

# ಹೆಚ್ಚಿದ ಟಾಕ್ಸಿಕ್ ಬಜೆಟ್



'ಕೆಜಿಎಫ್' ಹಾಗೂ 'ಕೆಜಿಎಫ್ 2' ಸಿನಿಮಾದ ಮೂಲಕ ಪ್ಯಾನ್ ಇಂಡಿಯಾ ಮಟ್ಟದಲ್ಲಿ ಖ್ಯಾತಿ ಪಡೆದ ಯಶ್ ಅವರು ಈಗ ಗೀತು ಮೋಹನ್‌ದಾಸ್ ಜೊತೆ 'ಟಾಕ್ಸಿಕ್' ಚಿತ್ರಕ್ಕಾಗಿ ಒಂದಾಗಿದ್ದಾರೆ. ಈ ಸಿನಿಮಾ ಇತ್ತೀಚೆಗೆ ಅಧಿಕೃತವಾಗಿ ಘೋಷಣೆ ಆಗಿದ್ದು, ಯಶ್ ಬರ್ತ್‌ಡೇ ದಿನ ಟೀಸರ್ ಕೂಡ ರಿಲೀಸ್ ಆಗಿದೆ. ಈ ಚಿತ್ರದ ಬಜೆಟ್ ಶೇ.40 ಏರಿಕೆ ಆಗಿದೆ. ಇದಕ್ಕೆ ಕಾರಣ ಆಗಿದ್ದು, ಯಶ್ ಹಾಗೂ ಗೀತು ಮೋಹನ್‌ದಾಸ್ ಅವರ ನಿರ್ಧಾರ ಎಂದು ಹೇಳಲಾಗಿದೆ.

'ಟಾಕ್ಸಿಕ್' ಸಿನಿಮಾದಲ್ಲಿ ಯಶ್ ಜೊತೆ ಕಿಯಾರಾ ಅಡ್ವಾಣಿ, ನಯನತಾರಾ, ಹುಮಾ ಖುರೇಷಿ, ತಾರಾ ಸುತಾರಿಯಾ ಈ ಚಿತ್ರದಲ್ಲಿ ನಟಿಸಿದ್ದಾರೆ. ಈ ಸಿನಿಮಾದ ಶೂಟ್ ಭರ್ಜರಿ ವೇಗದಲ್ಲಿ ಸಾಗುತ್ತಿದೆ. ಇದನ್ನು ಕನ್ನಡದ ಜೊತೆ ಪರ ಭಾಷೆಗೆ ಡಬ್ ಮಾಡಿ ರಿಲೀಸ್ ಮಾಡುವ ಆಲೋಚನೆ ಇದೆ. ಈಗ ಇಂಗ್ಲಿಷ್ ಭಾಷೆಯಲ್ಲೂ ಸಿನಿಮಾ ಶೂಟ್ ಆಗುತ್ತಿದೆ ಎಂದು ಹೇಳಲಾಗಿದೆ.

'ಟಾಕ್ಸಿಕ್' ಸಿನಿಮಾ ಕನ್ನಡದ ಜೊತೆಗೆ ಇಂಗ್ಲಿಷ್‌ನಲ್ಲೂ ಶೂಟ್ ಆಗುತ್ತಿದೆ! ಹೌದು ಯಶ್ ಹಾಗೂ ಇತರ ಕಲಾವಿದರು ಕನ್ನಡದ ಜೊತೆಗೆ ಇಂಗ್ಲಿಷ್‌ನಲ್ಲೂ ಡೈಲಾಗ್ ಹೇಳುತ್ತಿದ್ದಾರೆ. ಈ ಮೂಲಕ ಸಿನಿಮಾನ ಪ್ಯಾನ್ ವರ್ಲ್ಡ್ ಮಟ್ಟದಲ್ಲಿ ರಿಲೀಸ್ ಮಾಡಲು ತಂಡ ಪ್ಲ್ಯಾನ್ ಮಾಡಿದೆ.

'ಟಾಕ್ಸಿಕ್' ಚಿತ್ರವನ್ನು ಇಂಗ್ಲಿಷ್‌ಗೆ ಡಬ್ ಮಾಡಬಹುದು. ಆದರೆ, ತಂಡದವರು ಹಾಗೆ ಮಾಡದೆ ಅದೇ ಭಾಷೆಯಲ್ಲಿ ಶೂಟ್ ಮಾಡುವ ಆಲೋಚನೆ ಮಾಡಿದ್ದಾರೆ. ಎರಡು ಭಾಷೆಗಳಲ್ಲಿ ಚಿತ್ರವನ್ನು ಒಟ್ಟಿಗೆ ಶೂಟ್ ಮಾಡುವ ನಿರ್ಧಾರದಿಂದ ಚಿತ್ರದ ಬಜೆಟ್ ಶೇ.40 ಏರಿಕೆ ಆಗಿದೆ. ಈ ಬಜೆಟ್‌ನ ಭರಿಸಲು 'ಟಾಕ್ಸಿಕ್' ನಿರ್ಮಾಣ ಸಂಸ್ಥೆ ರೆಡಿ ಇದೆ.

'ಟಾಕ್ಸಿಕ್' ಭಾರತ ಚಿತ್ರರಂಗದ ದುಬಾರಿ ಸಿನಿಮಾ ಎನಿಸಿಕೊಳ್ಳಲಿದೆ ಎಂದು ಹೇಳಲಾಗುತ್ತಿದೆ. ಈಗಾಗಲೇ ಬೆಂಗಳೂರು, ಗೋವಾ ಮೊದಲಾದ ಕಡೆಗಳಲ್ಲಿ ಶೂಟ್ ಮಾಡಲಾಗಿದೆ. ಈ ಚಿತ್ರವನ್ನು ಇಂಗ್ಲಿಷ್‌ನಲ್ಲಿ ಹಂಚಿಕೆ ಮಾಡಲು ಎಲ್ಲ ರೀತಿಯ ಸಿದ್ಧತೆ ನಡೆಯುತ್ತಿದೆ. ಹಾಲಿವುಡ್ ನಿರ್ಮಾಣ ಸಂಸ್ಥೆಗಳ ಜೊತೆ ಈಗಾಗಲೇ ಯಶ್ ಮಾತುಕತೆ ನಡೆಸಿದ್ದಾರೆ.

# ರಶ್ಮಿಕಾ ಲುಕ್‌ಗೆ ಫ್ಯಾನ್ಸ್ ಫಿದಾ



ವಿಕಿ ಕೌಶಲ್ ಮತ್ತು ರಶ್ಮಿಕಾ ಮಂದಣ್ಣ ಅಭಿನಯದ 'ಛವಾ' ಚಿತ್ರಕ್ಕೆ ಮಹಾರಾಷ್ಟ್ರದಲ್ಲಿ ಭರ್ಜರಿ ಪ್ರತಿಕ್ರಿಯೆ ಸಿಗುತ್ತಿದೆ. ಫೆಬ್ರವರಿ 9 ರಂದು ಇಬ್ಬರು ನಟರು ಮುಂಬೈನ ಚಿತ್ರಮಂದಿರದಲ್ಲಿ ಚಿತ್ರದ ಪ್ರಚಾರ ಮಾಡಿದರು.

ಫೆಬ್ರವರಿ 14 ರಂದು ಛಾವ ಚಿತ್ರ ಬಿಡುಗಡೆಯಾಗುತ್ತಿದೆ. ಇದಕ್ಕೂ ಮೊದಲು ಮುಂಬೈನ ಹಲವು ಭಾಗದಲ್ಲಿ ವಿಕ್ಕಿ ಹಾಗೂ ರಶ್ಮಿಕಾ ಪ್ರಚಾರ ಮಾಡುತ್ತಿದ್ದಾರೆ. ಪ್ರಚಾರಕ್ಕೆ ಆಗಮಿಸಿದ ರಶ್ಮಿಕಾ ಮಂದಮ್ಣ ಕೇಸರಿ ಡ್ರೆಸ್ ಮೂಲಕ ಮಿಂಚಿದ್ದಾರೆ. ಸಂಭಾಜಿ ಮಹಾರಾಜರ ಪತ್ನಿ ಯೇಸುಭಾಯಿ ಭೋನ್ಸಾಲೆ ಪಾತ್ರ ನಿರ್ವಹಿಸಿರುವ ರಶ್ಮಿಕಾ ಮಂದಣ್ಣ ಪ್ರಚಾರದ ವೇಳೆ ಧರಿಸಿದ್ದ ಡ್ರೆಸ್ ಎಲ್ಲರ ಗಮನಸೆಳೆದಿದೆ.

ರಶ್ಮಿಕಾ ಮಂದಣ್ಣ ಕೇಸರಿ ಡ್ರೆಸ್‌ನಲ್ಲಿ ಮಿಂಚಿದ್ದಾರೆ. ಹೊಸ ಲುಕ್ ಅಭಿಮಾನಿಗಳನ್ನು ಮತ್ತಷ್ಟು ಆಕರ್ಷಿಸಿದೆ. ಮುಂಬೈನ ಹಲವು ಕಡೆ ಪ್ರಚಾರ ಆರಂಭಗೊಂಡಿದೆ.ದಾದಾರ್‌ನ ಚಿತ್ರ ಸಿನಿಮಾ ಥಿಯೇಟರ್‌ಗೆ ಆಗಮಿಸಿದ ವಿಕ್ಕಿ ಹಾಗೂ ರಶ್ಮಿಕಾ ಮಂದಣ್ಣಗೆ ಭರ್ಜರಿ ಸ್ವಾಗತ ನೀಡಲಾಗಿತ್ತು.

ಕಿಕ್ಕಿರಿದು ಸಂಖ್ಯೆಯಲ್ಲಿ ಅಭಿಮಾನಿಗಳು ಸೇರಿದ್ದರು. ಈ ವೇಳೆ ಸಂಭಾಜಿ ಮಹಾರಾಜ್ ಕಿ ಜೈ ಎಂದು ಘೋಷಣೆಗಳು ಮೊಳಗಿತ್ತು. ಚಿತ್ರದ ಕುತೂಹಲ ತೀವ್ರ ಹೆಚ್ಚಾಗಿದೆ. ಛಾವ ಚಿತ್ರ ಬಾಲಿವುಡ್‌ನಲ್ಲಿ ಹೊಸ ಮೈಲಿಗಲ್ಲು ಸೃಷ್ಟಿಸುವ ಸಾಧ್ಯತೆ ಇದೆ.

'ಛವಾ' ಚಿತ್ರ ಛತ್ರಪತಿ ಶಿವಾಜಿ ಮಹಾರಾಜರ ಪುತ್ರ ಛತ್ರಪತಿ ಸಂಭಾಜಿ ಮಹಾರಾಜರ ಜೀವನಾಧಾರಿತ. ಅತೀ ಸೂಕ್ಷ್ಮ ವಿಚಾರವಾಗಿರುವ ಕಾರಣ ಚಿತ್ರ ತಂಡ ಹೆಚ್ಚು ಮುತುವರ್ಜಿ ವಹಿಸಿ ಈ ಚಿತ್ರ ನಿರ್ಮಾಣ ಮಾಡಿದೆ. ಈ ಚಿತ್ರದಲ್ಲಿ ರಶ್ಮಿಕಾ ಮಂದಣ್ಣ ಹಾಗೂ ವಿಕ್ಕಿ ಕೌಶಾಲ್ ಅಭಿನಯಕ್ಕೆ ಮೆಚ್ಚುಗೆ ವ್ಯಕ್ತವಾಗುತ್ತಿದೆ. ಟ್ರೇಲರ್‌ನಲ್ಲಿ ಇಬ್ಬರ ಅಭಿನಯಕ್ಕೆ ಮನ್ನಣೆ ಸಿಕ್ಕಿತ್ತು.

ಟ್ರೇಲರ್ ಬೆನ್ನಲ್ಲೇ ಚಿತ್ರದ ಹಾಡೊಂದನ್ನು ಬಿಡುಗಡೆ ಮಾಡಿತ್ತು. ಲೆಝಿಮ್ ನೃತ್ಯದ ಈ ಹಾಡು ವಿವಾದಕ್ಕೆ ಕಾರಣವಾಗಿತ್ತು. ಮಹಾರಾಷ್ಟ್ರದಲ್ಲಿ ಹಲವು ಸಂಘಟನೆಗಳು ಈ ಹಾಡಿಗೆ ಆಕ್ಷೇಪ ವ್ಯಕ್ತಪಡಿಸಿತ್ತು. ಹೀಗಾಗಿ ಚಿತ್ರತಂಡ ಈ ಹಾಡಿಗೆ ಕತ್ತರಿ ಹಾಕಿತ್ತು.

ಲಕ್ಷ್ಮಣ್ ಉಟೇಕರ್ 'ಛವಾ' ಚಿತ್ರವನ್ನು ನಿರ್ದೇಶಿಸಿದ್ದಾರೆ. ವಿಕಿ ಕೌಶಲ್ ಸಂಭಾಜಿ ಪಾತ್ರದಲ್ಲಿ ನಟಿಸಿದ್ದಾರೆ.'ಛವಾ'ದಲ್ಲಿ ರಶ್ಮಿಕಾ ಮಂದಣ್ಣ ನಾಯಕಿ ಮತ್ತು ಅಕ್ಷಯ್ ಖನ್ನಾ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ.

ಮಹಾರಾಷ್ಟ್ರದ ಪ್ರೇಕ್ಷಕರು 'ಛವಾ' ಚಿತ್ರಕ್ಕಾಗಿ ಕಾತುರರಾಗಿದ್ದಾರೆ.ಖಚಿಛಿಟುಟಇ ವರದಿಯ ಪ್ರಕಾರ, ಚಿತ್ರವು ಫೆಬ್ರವರಿ 9 ರ ಸಂಜೆ 4:45 ರ ವೇಳೆಗೆ 60.2 ಲಕ್ಷ ರೂಪಾಯಿಗಳ ಮುಂಗಡ ಬುಕಿಂಗ್ ಸಂಗ್ರಹಿಸಿದೆ. 'ಛವಾ' ಚಿತ್ರ ಈವರೆಗೆ 1.54 ಕೋಟಿ ರೂಪಾಯಿಗಳ ಮುಂಗಡ ಬುಕಿಂಗ್ ಸಂಗ್ರಹಿಸಿದೆ.ಹೊಸ ದಾಖಲೆ ಬರೆಯಲು ಛಾವಾ ಚಿತ್ರ ಸಜ್ಜಾಗಿದೆ. ದೇಶಾದ್ಯಂತ ಛಾವಾ ಚಿತ್ರ ಬಿಡುಗಡೆಯಾಗುತ್ತಿದೆ.

# ಜೈಲಿನ ದಿನಗಳನ್ನು ನೆನಪಿಸಿಕೊಂಡ ಸಲ್ಮಾನ್



ನಟ ಸಲ್ಮಾನ್ ಖಾನ್ ಮೇಲೆ ಹಲವು ಕೇಸ್‌ಗಳು ಇವೆ. ಇವರ ಪೈಕಿ ಕೆಲವು ಕೇಸ್‌ಗಳಲ್ಲಿ ಅವರು ಜೈಲಿಗೆ ಹೋಗಿ ಬಂದಿದ್ದಾರೆ. ಸದಾ ಕೆಲಸದಲ್ಲಿ ಬ್ಯುಸಿ ಇರೋ ಅವರು ಏಕಾ ಏಕಿ ಜೈಲಿನಲ್ಲಿ ಇರಬೇಕಾದ ಪರಿಸ್ಥಿತಿ ಬಂದಾಗ ಅದಕ್ಕೆ ಒಗ್ಗಿಕೊಳ್ಳೋಕೆ ಆಗಲಿಲ್ಲ. ಈ ಬಗ್ಗೆ ಅವರು 'ದಂಬ್ ಬಿರಿಯಾನಿ'ಯಲ್ಲಿ ಭಾಗಿ ಆಗಿದ್ದಾರೆ. ಅಳಿಯ ಅರ್ಹಾನ್ ಖಾನ್ ಅವರು ಇದನ್ನು ಹೋಸ್ಟ್ ಮಾಡಿದ್ದಾರೆ.

ಜೈಲಿನಲ್ಲಿ ಯಾವ ರೀತಿಯ ಕ್ಷಣಗಳು ಇದ್ದವು ಎಂದು ಸಲ್ಮಾನ್ ಖಾನ್ ಹೇಳಿದ್ದಾರೆ. 'ನಾನು ಸುಸ್ತಾಗಿ ಹೋಗುತ್ತಿದ್ದೆ. ಆದರೆ, ಎದ್ದೇಳಿ ಕೆಲಸ ಮಾಡಲೇಬೇಕು ಎಂದು ಎಲ್ಲರೂ ಹೇಳುತ್ತಿದ್ದರು. ಕಷ್ಟಪಟ್ಟು ಕೆಲಸ ಮಾಡಿದರೆ ನಿದ್ದೆ ತಾನಾಗೇ ಬರುತ್ತದೆ ಎನ್ನುತ್ತಿದ್ದರು. ಇದೆಲ್ಲ ನನಗೆ ಅರ್ಥ ಆಗುತ್ತಾ ಇರಲಿಲ್ಲ. ನಾನು ನಿತ್ಯ ಒಂದರಿಂದ ಎರಡು ಗಂಟೆ ನಿದ್ದೆ ಮಾಡುತ್ತಿದ್ದೆ. ತಿಂಗಳಿಗೆ ಒಮ್ಮೆ ಏಳು ಗಂಟೆ ಮಲಗುತ್ತಿದ್ದೆ' ಎಂದಿದ್ದಾರೆ ಸಲ್ಮಾನ್ ಖಾನ್.

'ಸಿನಿಮಾ ಶೂಟ್ ಮಧ್ಯೆ ಐದು ನಿಮಿಷ ಗ್ಯಾಪ್ ಪಡೆದುಕೊಳ್ಳುತ್ತಿದ್ದೆ. ನಾನು ಕುರ್ಚಿ ಮೇಲೆ ಮಲಗುತ್ತಿದ್ದೆ. ಇಲ್ಲಿ ನಾನು ಏನು ಬೇಕಾದರೂ ಮಾಡಲು ಸಿದ್ಧನಿದ್ದೆ. ನಾನು ಜೈಲಿನಲ್ಲಿದ್ದಾಗ ಕೇವಲ ನಿದ್ದೆ ಮಾತ್ರ ಮಾಡುತ್ತಿದ್ದೆ ಅದನ್ನು ಬಿಟ್ಟು ಏನನ್ನೂ ಮಾಡಲು ಸಾಧ್ಯವಾಗುತ್ತಿಲ್ಲ. ನಿಮ್ಮ ಕೆಲಸ ಅಥವಾ ಕುಟುಂಬದ ವಿಷಯಕ್ಕೆ ಬಂದಾಗ, ನೀವು ನಿರಂತರವಾಗಿ ಮಾಡಬೇಕಾದ ಪ್ರಯತ್ನಗಳು ಹಲವು ಇರುತ್ತವೆ. ನೀವು ಸ್ನೇಹಿತರು ಮತ್ತು ಕುಟುಂಬ ಮತ್ತು ಕೆಲಸಕ್ಕಾಗಿ ಯಾವಾಗಲೂ ಇರಬೇಕಾಗುತ್ತದೆ' ಎಂದಿದ್ದಾರೆ ಅವರು.

ಸಲ್ಮಾನ್ ಖಾನ್ ಅವರು 1998ರಲ್ಲಿ ನಡೆದ ಕೃಷ್ಣಮೃಗ ಹತ್ಯೆ ಪ್ರಕರಣದಲ್ಲಿ ಅರೆಸ್ಟ್ ಆಗಿದ್ದರು. 2006ರಲ್ಲಿ ಅವರಿಗೆ ಕೆಳಹಂತದ ಕೋರ್ಟ್ ಐದು ವರ್ಷ ಜೈಲು ಶಿಕ್ಷೆ ವಿಧಿಸಿತ್ತು. ಆ ಬಳಿಕ ಕೆಲವೇ ದಿನಗಳಲ್ಲಿ ಜಾಮೀನು ಪಡೆದು ಅವರು ಹೊರ ಬಂದರು.

ಸಲ್ಮಾನ್ ಖಾನ್ ಅವರು ಸದ್ಯ ಎಆರ್ ಮುರುಗದಾಸ್ ನಿರ್ದೇಶನದ 'ಸಿಖಂದರ್' ಸಿನಿಮಾ ಕೆಲಸಗಳಲ್ಲಿ ತೊಡಗಿಕೊಂಡಿದ್ದಾರೆ. ಈ ಚಿತ್ರದಲ್ಲಿ ಸಲ್ಮಾನ್ ಖಾನ್‌ಗೆ ಜೊತೆಯಾಗಿ ರಶ್ಮಿಕಾ ಮಂದಣ್ಣ ಕಾಣಿಸಿಕೊಂಡಿದ್ದಾರೆ. ಈ ವರ್ಷ ಈದ್ ಪ್ರಯುಕ್ತ ಸಿನಿಮಾ ರಿಲೀಸ್ ಆಗುತ್ತಿದೆ.



# ಕಮಾಲ್ ಮಾಡಿದ ಸನಮ್ ತೇರಿ ಕಸಮ್

ಸುಮಾರು 9 ವರ್ಷಗಳ ಹಿಂದೆ ರಿಲೀಸ್ ಆದ ಲವ್ ಸ್ಟೋರಿ ಚಿತ್ರ 'ಸನಮ್ ತೇರಿ ಕಸಮ್' ಚಿತ್ರ ಬಾಕ್ಸ್ ಆಫೀಸ್‌ನಲ್ಲಿ ಸಾಧಾರಣ ಹಿಟ್ ಎನಿಸಿಕೊಂಡಿತ್ತು. 25 ಕೋಟಿ ರೂಪಾಯಿ ಬಜೆಟ್‌ನಲ್ಲಿ ಸಿದ್ಧವಾದ ಈ ಚಿತ್ರ ಆಗಿನ ಕಾಲದಲ್ಲಿ ಬಾಚಿಕೊಂಡಿದ್ದು, 16 ಕೋಟಿ ರೂಪಾಯಿ ಮಾತ್ರ. ಅಂದರೆ ಇದು ನಿರ್ಮಾಪಕರಿಗೆ ನಷ್ಟವನ್ನೇ ಉಂಟು ಮಾಡಿತ್ತು. ಆದರೆ, ಈಗ ಚಿತ್ರ ರೀ–ರಿಲೀಸ್ ಆಗಿ ಯಶಸ್ಸು ಕಾಣುವ ಸೂಚನೆಯನ್ನು ಕೊಟ್ಟಿದೆ.


9 ವರ್ಷಗಳ ಹಿಂದೆ 'ಸನಮ್ ತೇರಿ ಕಸಮ್' ಚಿತ್ರವನ್ನು ಜನರು ಅಷ್ಟಾಗಿ ಇಷ್ಟಪಟ್ಟಿರಲಿಲ್ಲ. ರೊಮ್ಯಾಂಟಿಕ್ ಡ್ರಾಮಾ ಚಿತ್ರ ಬಾಕ್ಸ್ ಆಫೀಸ್‌ನಲ್ಲಿ ಅಲ್ಲಿಗಲ್ಲಿಗೆ ಆಗಿತ್ತು. ಹರ್ಷವರ್ಧನ್ ರಾಣೆ ಹಾಗೂ ಪಾಕ್ ನಟಿ ಮರ್ವಾ ಹೊಕಾನೆ ಈ ಚಿತ್ರದಲ್ಲಿ ನಟಿಸಿದ್ದರು. ಇದು ಮರ್ವಾ ಅವರ ಮೊದಲ ಹಿಂದಿ ಸಿನಿಮಾ ಆಗಿತ್ತು. ಆ ಬಳಿಕ ಚಿತ್ರವನ್ನು ಯೂಟ್ಯೂಬ್ ಹಾಗೂ ಒಟಿಟಿಯಲ್ಲಿ ನೋಡಿ ಜನರು ಇಷ್ಟಪಟ್ಟರು. ಈಗ ಪ್ರೇಮಿಗಳ ದಿನಕ್ಕೆ ಒಂದು ವಾರ ಇರುವಾಗ ಸಿನಿಮಾ ರೀ ರಿಲೀಸ್ ಕಂಡಿದೆ.

ರಾಧಿಕಾ ರಾವ್ ಅವರು ಈ ಚಿತ್ರವನ್ನು ನಿರ್ದೇಶನ ಮಾಡಿದ್ದಾರೆ. ರೀ ರಿಲೀಸ್ ಆದ ಮೊದಲ ದಿನ ಈ ಚಿತ್ರ 5 ಕೋಟಿ ರೂಪಾಯಿ ಬಾಚಿಕೊಂಡಿತು. ಎರಡನೇ ದಿನ 9 ಕೋಟಿ ರೂಪಾಯಿ ಗಳಿಸಿದೆ. ಬಾನುವಾರ ಈ ಚಿತ್ರ 5.75 ಕೋಟಿ ರೂಪಾಯಿ ಗಳಿಸಿದೆ ಎನ್ನಲಾಗಿದೆ. ಈ ಮೂಲಕ ಮೂರೇ ದಿನಕ್ಕೆ 15 ಕೋಟಿ ರೂಪಾಯಿಯಷ್ಟು ಚಿತ್ರ ಗಳಿಸಿ ಸಾಧನೆ ಮಾಡಿದೆ.

ಸದ್ಯ ಹೀಗೆಯೇ ಮುಂದುವರಿದರೆ ಚಿತ್ರದ ಮೂಲ ಗಳಿಕೆಯನ್ನು ಈ ಸಿನಿಮಾ ಹಿಂದಿಕ್ಕಲಿದೆ. ಪ್ರೇಮಿಗಳ ದಿನ ಹಾಗೂ ಈ ವಾರಂತ್ಯದಲ್ಲಿ ಚಿತ್ರ ಮತ್ತಷ್ಟು ಕಲೆಕ್ಷನ್ ಮಾಡುವ ಸಾಧ್ಯತೆ ಇದೆ. ಈ ಮೂಲಕ ಒಟ್ಟಾರೆ ಗಳಿಕೆ ಎಲ್ಲಾ ದಾಖಲೆಗಳನನು ಮುರಿದು ಸಾಗುವ ನಿರೀಕ್ಷೆ ಇದೆ.

'ಸನಮ್ ತೇರಿ ಕಸಮ್' ಚಿತ್ರದ ನಾಯಕಿ ಪಕ್ಕಾ ಸಂಪ್ರದಾಯಸ್ತ ಕುಟುಂಬದಿಂದ ಬಂದವಳು. ತಂದೆ ಮಗಳನ್ನು ತುಂಬಾನೇ ಸ್ಟ್ರಿಕ್ಟ್ ಆಗಿ ಬೆಳೆಸಿರುತ್ತಾನೆ. ಇದೇ ಕಟ್ಟಡದಲ್ಲಿ ಕಥಾ ನಾಯಕ ಕೂಡ ಇರುತ್ತಾನೆ. ಆತ ಚಿಲ್ ಆಗಿರೋ ವ್ಯಕ್ತಿ. ಇಬ್ಬರ ಮಧ್ಯೆ ಪ್ರೀತಿ ಬೆಳೆಯುತ್ತದೆ. ಅದು ಹೇಗೆ? ಮುಂದೇನಾಗುತ್ತದೆ ಎಂಬುದು ಚಿತ್ರದ ಕಥೆ.

# ಆಫೀಸ್ ಲುಕ್‌ನಲ್ಲಿ ಮಾಧುರಿ ಸಖತ್



ಮಾಧುರಿ ದೀಕ್ಷಿತ್ 57 ವರ್ಷದವರಾಗಿದ್ದಾರೆ. ಆದರೆ ಅವರ ಫಿಟ್ನೆಸ್ ಮತ್ತು ಸೌಂದರ್ಯ ನೋಡಿ ಯಾರೂ ಅವರ ವಯಸ್ಸನ್ನ ಅಂದಾಜಿಸಲು ಸಾಧ್ಯವಿಲ್ಲ.

ಇತ್ತೀಚೆಗೆ ಅವರನ್ನು ಆಫೀಸ್ ಲುಕ್‌ನಲ್ಲಿ ಕಾಣಲಾಯಿತು. ಬ್ಲೇಜರ್–ಪ್ಯಾಂಟ್ ಮತ್ತು ಸನ್‌ಗ್ಲಾಸ್‌ಗಳಲ್ಲಿ ನಟಿ ತುಂಬಾ ಸುಂದರವಾಗಿ ಕಾಣುತ್ತಿದ್ದರು.

ಬಾಲಿವುಡ್ ನಟಿ ಮಾಧುರಿ ದೀಕ್ಷಿತ್ ಮೇಲೆ ವಯಸ್ಸಿನ ಯಾವುದೇ ಪರಿಣಾಮವಿಲ್ಲ. 57 ವರ್ಷದಲ್ಲೂ ಅವರು ಯುವತಿಯಂತೆ ಕಾಣುತ್ತಾರೆ.


ದಿಲ್ ನಟಿ ಮುಂಬೈನ ಒಂದು ಸ್ಥಳದಲ್ಲಿ ಸ್ಟನ್ನಿಂಗ್ ಲುಕ್‌ನಲ್ಲಿ ಕಾಣಿಸಿಕೊಂಡಿದ್ದಾರೆ. ಮಾಧುರಿ ಬೂದು ಬ್ಲೇಜರ್ ಒಳಗೆ ಬಿಳಿ ಟಾಪ್ ಧರಿಸಿದ್ದರು.

ಕಪ್ಪು ಪ್ಯಾಂಟ್ ಜೊತೆ ಮ್ಯಾಚಿಂಗ್ ಶೂಗಳು ಮಾಧುರಿ ಅವರ ಲುಕ್‌ಗೆ ಮೆರುಗು ನೀಡಿದವು.

ತೇಜಾಬ್ ನಟಿ ಲೈಟ್ ಮೇಕಪ್ ಜೊತೆ ಸನ್‌ಗ್ಲಾಸ್‌ಗಳಿಂದ ತಮ್ಮ ಲುಕ್ ಅನ್ನು ಪೂರ್ಣಗೊಳಿಸಿದ್ದರು. ಮಾಧುರಿ ದೀಕ್ಷಿತ್ ತಮ್ಮ ಐಷಾರಾಮಿ ಕಾರಿನ ಬಾಗಿಲು ತೆರೆದು ಪೋಸ್ ನೀಡಿದರು, ಈ ವೇಳೆ ಅವರ ಐಷಾರಾಮಿ ಖಗಿಯ ಒಳಭಾಗ ನೋಡಿ ಅಭಿಮಾನಿಗಳು ಬೆರಗಾದರು.

ಮಾಧುರಿ ದೀಕ್ಷಿತ್ ಅವರ ಯಾವುದೇ ಹೊಸ ಸಿನಿಮಾ ಬಹಳ ದಿನಗಳಿಂದ ಬಿಡುಗಡೆಯಾಗಿಲ್ಲ. ಅವರು ಬಹಳ ಹಿಂದೆ ಒಂದು ಟಿವಿ ರಿಯಾಲಿಟಿ ಶೋಗೆ ತೀರ್ಪುಗಾರರಾಗಿ ಕಾಣಿಸಿಕೊಂಡಿದ್ದರು.

# ಅಖಂಡ 2ಗೆ ಆದಿ ಪಿನಿಶೆಟ್ಟಿ ವಿಲನ್



ಬಾಲಕೃಷ್ಣ 'ಅಖಂಡ 2' ಚಿತ್ರದಲ್ಲಿ ನಟಿಸುತ್ತಿದ್ದಾರೆ. ಬೋಯಪಾಟಿ ಶ್ರೀನು ನಿರ್ದೇಶನದ ಈ ಚಿತ್ರ 14 ರೀಲ್ಸ್ ಬ್ಯಾನರ್‌ನಲ್ಲಿ ಬಾಲಯ್ಯ ಪುತ್ರಿ ತೇಜಸ್ವಿನಿ ನಿರ್ಮಾಣದಲ್ಲಿ ತೆರೆಗೆ ಬರುತ್ತಿದೆ. ಚಿತ್ರೀಕರಣ ಹಂತದಲ್ಲಿದೆ. ಅನ್ನಪೂರ್ಣ ಸ್ಟುಡಿಯೋದಲ್ಲಿ ಆಕ್ಷನ್ ದೃಶ್ಯಗಳನ್ನು ಚಿತ್ರೀಕರಿಸಲಾಗುತ್ತಿದೆ.

ಈ ಚಿತ್ರದಲ್ಲಿ ಆದಿ ಪಿನಿಶೆಟ್ಟಿ ವಿಲನ್ ಆಗಿ ನಟಿಸುತ್ತಿದ್ದಾರೆ. ಬಾಲಯ್ಯಗೆ ಟಕ್ಕರ್ ಕೊಡಲು ಆದಿಯನ್ನು ಆಯ್ಕೆ ಮಾಡಲಾಗಿದೆ. 'ಅಖಂಡ'ದಲ್ಲಿ ವಿಲನ್ ಪಾತ್ರ ಸಪ್ಪೆಯಾಗಿತ್ತು. ಬಾಲಯ್ಯ ಎದುರು ವಿಲನ್‌ಗಳು ನಿಲ್ಲಲು ಸಾಧ್ಯವಾಗಲಿಲ್ಲ.

ವಿಲನ್ ಪಾತ್ರ ಬಲವಾಗಿರದಿದ್ದರೆ ಸಿನಿಮಾ ಸಪ್ಪೆಯಾಗುತ್ತದೆ. ಹೀರೋಯಿಸಂ ಕೂಡ ತೆಳುವಾಗುತ್ತದೆ. ಹಾಗಾಗಿ ಸ್ಟಾರ್ ಇಮೇಜ್ ಇರುವ ಆದಿ ಪಿನಿಶೆಟ್ಟಿಯನ್ನು ಆಯ್ಕೆ ಮಾಡಲಾಗಿದೆ. ಈ ಹಿಂದೆ 'ಸರೈನೋಡು' ಚಿತ್ರದಲ್ಲಿ ಆದಿ ಖಳನಾಗಿ ನಟಿಸಿದ್ದರು.

ಆದಿ ಈಗಾಗಲೇ ಚಿತ್ರೀಕರಣದಲ್ಲಿ ಭಾಗವಹಿಸುತ್ತಿದ್ದಾರೆ. ಅನ್ನಪೂರ್ಣ ಸ್ಟುಡಿಯೋದಲ್ಲಿ ಬಾಲಯ್ಯ ಮತ್ತು ಆದಿ ಮೇಲೆ ಆಕ್ಷನ್ ದೃಶ್ಯಗಳನು ಚಿತ್ರೀಕರಿಸಲಾಗುತ್ತಿದೆ. ರಾಮ್–ಲಕ್ಷ್ಮಣ್ ಮಾಸ್ಟರ್ಸ್ ಅದ್ಭುತ ಆಕ್ಷನ್ ದೃಶ್ಯಗಳನ್ನು ವಿನ್ಯಾಸಗೊಳಿಸುತ್ತಿದ್ದಾರೆ.

ಈ ಚಿತ್ರವನ್ನು ಸೆಪ್ಟೆಂಬರ್ 25 ರಂದು ದಸರಾ ಹಬ್ಬಕ್ಕೆ ಬಿಡುಗಡೆ ಮಾಡಲು ಯೋಜಿಸಲಾಗಿದೆ. ಸಂಯುಕ್ತ ಮೀನನ್ ಮತ್ತು ಪ್ರಗ್ಯಾ ಜೈಸ್ವಾಲ್ ನಾಯಕಿಯರಾಗಿ ನಟಿಸುತ್ತಿದ್ದಾರೆ.

[redacted] 52 [redacted]